ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 98
3–10–2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 98

## ಗಾಂಧೀಜಿಯವರ ತ್ಯಾಗ, ಬಲಿದಾನ ಸದಾ ನಮಗೆ ಆದರ್ಶ: ಸಿಎಂ ಸಿದ್ದರಾಮಯ್ಯ



**ಮೈಸೂರು:** ಗಾಂಧೀಜಿಯವರ ತ್ಯಾಗ, ಬಲಿದಾನಗಳು ಸದಾ ನಮಗೆ ಆದರ್ಶಪ್ರಾಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಹೇಳಿದ್ದಾರೆ.

ಗಾಂಧಿ ಜಯಂತಿ ಪ್ರಯುಕ್ತ ಮೈಸೂರಿನಲ್ಲಿ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ಮುಖ್ಯಮಂತ್ರಿಗಳು ಸುದ್ದಿಗಾರರೊಂದಿಗೆ ಮಾತನಾಡಿದರು.

ಅಕ್ಟೋಬರ್ 2ರಂದು ದೇಶಾದ್ಯಂತ ಗಾಂಧಿ ಜಯಂತಿಯನ್ನು ಆಚರಿಸಲಾಗುತ್ತಿದೆ. ಬಾಪು ಅವರ ನೇತೃತ್ವದಲ್ಲಿ ನಡೆದ ಹೋರಾಟದ ಫಲದಿಂದ ನಾವಿಂದು ಸ್ವಾತಂತ್ರ್ಯವನ್ನು ಅನುಭವಿಸುತ್ತಿದ್ದೇವೆ. ಗಾಂಧೀಜಿಯವರ ತ್ಯಾಗ, ಬಲಿದಾನಗಳು ಸದಾ ನಮಗೆ ಆದರ್ಶಪ್ರಾಯವಾಗಿದೆ ಎಂದು ಹೇಳಿದರು.

ಇಂದು ಮಾಜಿ ಪ್ರಧಾನಮಂತ್ರಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನವೂ ಕೂಡಾ ಹೌದು, ದೇಶ ಕಂಡ ಅತ್ಯಂತ ಪ್ರಾಮಾಣಿಕ ಪ್ರಧಾನಿಗಳಲ್ಲಿ ಲಾಲ್ ಬಹಾದ್ದೂರ್ ಶಾಸ್ತ್ರೀ ಕೂಡ ಒಬ್ಬರು. ಈ ಮಹಾನ್ ಚೇತನಗಳ ಜಯಂತಿಯ ಜೊತೆ ಇಂದು ನಾಡಿನೆಲ್ಲೆಡೆ ಹಬ್ಬದ ಸಂಭ್ರಮ ಕಳೆಗಟ್ಟಿದೆ. ನಾಡಿನ ಸಮಸ್ತ ಜನತೆಗೆ ವಿಜಯದಶಮಿ ಶುಭಾಶಯಗಳನ್ನು ಕೂಡ ಕೋರುತ್ತೇನೆಂದು ತಿಳಿಸಿದರು.

ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಪೋಸ್ಟ್ ಮಾಡಿ, 'ನೀವು ಜಗತ್ತಿನಲ್ಲಿ ಕಾಣಲು ಬಯಸುವ ಬದಲಾವಣೆಯಾಗಿರಿ' ಸತ್ಯ, ಸರ್ವಧರ್ಮ ಸಮನ್ವಯ ಮತ್ತು ಮಾನವೀಯತೆಯ ಪ್ರತಿರೂಪವಾದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಜಯಂತಿಯಂದು ಗೌರವ ನಮನಗಳು. ಬಾಪೂಜಿಯವರ ಅಹಿಂಸೆಯ ತತ್ವಕ್ಕೆ ಗೌರವಾರ್ಥವಾಗಿ ಆಚರಿಸಲಾಗುವ ವಿಶ್ವ ಅಹಿಂಸಾ ದಿನದ ಸಂದರ್ಭದಲ್ಲಿ, ನಾವು ಅಹಿಂಸೆಯ ಮಾರ್ಗವನ್ನು ಹಿಡಿದು ಶಾಂತಿಯುತ ಮತ್ತು ಸಾಮರಸ್ಯದ ಸಮಾಜ ನಿರ್ಮಾಣಕ್ಕೆ ಸಹಕರಿಸೋಣ. ಅವರ ಚಿಂತನೆಗಳು ಜಗತ್ತಿಗೆ ಸದಾ ಸ್ಫೂರ್ತಿಯಾಗಿರಲಿ ಎಂದು ತಿಳಿಸಿದ್ದಾರೆ.

## ಗಾಂಧಿ ಜಯಂತಿ : ರಾಜ್‌ಘಾಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಪುಷ್ಪ ನಮನ



**ನವದೆಹಲಿ:** ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 156ನೇ ಜನ್ಮದಿನದ ನಿಮಿತ್ತ ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ರಾಜ್‌ಘಾಟ್‌ನಲ್ಲಿರುವ ಅವರ ಸಮಾಧಿಗೆ ಪುಷ್ಪನಮನ ಸಲ್ಲಿಸಿದ್ದಾರೆ.

ನವದೆಹಲಿಯ ರಾಜ್‌ಘಾಟ್‌ನಲ್ಲಿರುವ ಮಹಾತ್ಮಾ ಗಾಂಧಿ ಸಮಾಧಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಗಣ್ಯರು ಪುಷ್ಪ ನಮನ ಸಲ್ಲಿಸಿದರು.

ಇದಕ್ಕೂ ಮುನ್ನ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದ ಮೋದಿಯವರು, ಗಾಂಧಿ ಜಯಂತಿಯು ಬಾಪು ಅವರ ಅಸಾಧಾರಣ ಜೀವನಕ್ಕೆ ಗೌರವ ಸಲ್ಲಿಸುವುದಾಗಿದೆ, ಅವರ ಆದರ್ಶಗಳು ಮಾನವ ಇತಿಹಾಸದ ಹಾದಿಯನ್ನು ಪರಿವರ್ತಿಸಿದವು. ಧೈರ್ಯ ಮತ್ತು ಸರಳತೆ ಹೇಗೆ ದೊಡ್ಡ ಬದಲಾವಣೆಯ ಸಾಧನಗಳಾಗಬಹುದು ಎಂಬುದನ್ನು ಅವರು ತೋರಿಸಿಕೊಟ್ಟರು. ಸೇವೆ ಮತ್ತು ಕರುಣೆ ಜನರನ್ನು ಸಬಲೀಕರಣಗೊಳಿಸುವ ಅಗತ್ಯ ಸಾಧನ ಎಂದು ನಂಬಿದ್ದರು. ವಿಕಸಿತ ಭಾರತವನ್ನು ನಿರ್ಮಿಸುವ ನಮ್ಮ ಅನ್ವೇಷಣೆಯಲ್ಲಿ ನಾವು ಅವರ ಮಾರ್ಗವನ್ನು ಅನುಸರಿಸುತ್ತೇವೆಂದು ಹೇಳಿದ್ದರು.

ಮತ್ತೊಂದು ಪೋಸ್ಟ್ ನಲ್ಲಿ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ನೆನೆದು, ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನದಂದು ಗೌರವಪೂರ್ವಕ ನಮನಗಳನ್ನು ತಿಳಿಸಿದ್ದಾರೆ.

ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಅಸಾಧಾರಣ ರಾಜಕಾರಣಿಯಾಗಿದ್ದು, ಅವರ ಸಮಗ್ರತೆ, ನಮ್ರತೆ ಮತ್ತು ದೃಢಸಂಕಲ್ಪವು ಸವಾಲಿನ ಸಮಯದಲ್ಲೂ ಭಾರತವನ್ನು ಬಲಪಡಿಸಿತು. ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಪ್ರಭಾವಿ ನಾಯಕತ್ವ, ಶಕ್ತಿ ಮತ್ತು ನಿರ್ಣಾಯಕ ವ್ಯಕ್ತಿತ್ವವನ್ನು ಹೊಂದಿದ್ದರು. 'ಜೈ ಜವಾನ್ ಜೈ ಕಿಸಾನ್' ಎಂಬ ಅವರ ಸ್ಪಷ್ಟಕರೆ ನಮ್ಮ ಜನರಲ್ಲಿ ದೇಶಭಕ್ತಿಯ ಮನೋಭಾವವನ್ನು ಹುಟ್ಟುಹಾಕಿತು. ಬಲಿಷ್ಠ ಮತ್ತು ಸ್ವಾವಲಂಬಿ ಭಾರತವನ್ನು ನಿರ್ಮಿಸುವ ಪ್ರಯತ್ನದಲ್ಲಿ ಅವರು ನಮ್ಮನ್ನು ಪ್ರೇರೇಪಿಸುತ್ತಲೇ ಇದ್ದಾರೆಂದು ಹೇಳಿದ್ದಾರೆ

## ಪವರ್ ಶೇರಿಂಗ್ ವಿಚಾರ; ಸಿಎಂ ಏನು ಹೇಳಿದ್ದಾರೆ ಅಷ್ಟೇ



**ಬೆಂಗಳೂರು:** ಪವರ್ ಶೇರಿಂಗ್ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯ ಏನು ಹೇಳಿದ್ದಾರೆ ಅಷ್ಟೇ. ಯಾರೂ ಕೂಡ ಅದರ ಬಗ್ಗೆ ಮಾತನಾಡಬಾರದು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯನವರು ಏನು ಹೇಳಿದ್ದಾರೆ ಹೈಕಮಾಂಡ್ ಅಂತಿಮ ಅಂತ ಅಷ್ಟೇ. ಅವರ ಪರವಾಗಿ ಮಾತನಾಡಿದರೂ ಡ್ಯಾಮೇಜ್, ನನ್ನ ಪರವಾಗಿ ಮಾತನಾಡಿದರೂ ಡ್ಯಾಮೇಜ್ ಆಗುತ್ತೆ. ಯಾರಿಗೂ ಪವರ್ ಶೇರಿಂಗ್ ಬಗ್ಗೆ ಮಾತನಾಡಲು ಹಕ್ಕಿಲ್ಲ. ರಂಗನಾಥ್ ಸೇರಿದಂತೆ ಯಾರೂ ಸಹ ಮಾತನಾಡಬಾರದು ಎಂದರು.

ಪವರ್ ಶೇರಿಂಗ್ ಬಗ್ಗೆ ಎಲ್ಲಿ ಚರ್ಚೆ ಇದೆ. ಮಾಧ್ಯಮದವರು ಬೇರೆ ರೀತಿಯಲ್ಲಿ ಬರೆಯುತ್ತಾರೆ ಎಂದು ಸಿಎಂ ಸಿದ್ದರಾಮಯ್ಯ ಅವರು ಈಗಾಗಲೇ ಹೇಳಿದ್ದಾರೆ. ಯಾರೂ ಚರ್ಚೆ ಮಾಡಬಾರದು. ಇದರ ಬಗ್ಗೆ ಮತಾಡೋರು ಪಕ್ಷಕ್ಕೆ ಡ್ಯಾಮೇಜ್ ಮಾಡುತ್ತಿದ್ದಾರೆ. ಇದರ ಬಗ್ಗೆ ಚರ್ಚೆ ಮಾಡಿದ್ರೆ ಪಕ್ಷ ವಿರೋಧಿ ಚಟುವಟಿಕೆ ಮಾಡಿದಂತೆ. ಕುಣಿಗಲ್ ಶಾಸಕ ರಂಗನಾಥ್, ಮಾಜಿ ಸಂಸದ ಶಿವರಾಮೇಗೌಡರಿಗೂ ನೋಟಿಸ್ ಕೊಡುತ್ತೇವೆ ಎಂದು ತಿಳಿಸಿದರು.

### ಕೇಂದ್ರ ಸರ್ಕಾರಿ ನೌಕರರಿಗೆ ಶುಭಸುದ್ದಿ

## ಶೇ. 3ರಷ್ಟು ತುಟ್ಟಿ ಭತ್ಯೆ ಹೆಚ್ಚಳ

**ನವದೆಹಲಿ:** ಕೇಂದ್ರ ಸರ್ಕಾರಿ ನೌಕರರಿಗೆ ಒಂದು ಶುಭಸುದ್ದಿ. ತುಟ್ಟಿ ಭತ್ಯೆಯನ್ನು ಶೇ. 3 ರಷ್ಟು ಹೆಚ್ಚಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ವರ್ಷದ ಆರಂಭದಲ್ಲಿ ಸರ್ಕಾರ ಶೇ. 2 ರಷ್ಟು ತುಟ್ಟಿ ಭತ್ಯೆ ಹೆಚ್ಚಳಕ್ಕೆ ಅನುಮೋದನೆ ನೀಡಿತ್ತು. ಇದನ್ನು ಮೂಲ ವೇತನ ಮತ್ತು ಪಿಂಚಣಿಯೊಂದಿಗೆ ಸೇರಿಸಿ ಶೇ. 53 ರಿಂದ 55ಕ್ಕೆ ಹೆಚ್ಚಿಸಲಾಗಿತ್ತು. ಇದೀಗ ಮತ್ತೆ ತುಟ್ಟಿ ಭತ್ಯೆ ಹೆಚ್ಚಳ ಮಾಡಲು ಸಭೆಯಲ್ಲಿ ಅನುಮೋದಿಸಲಾಗಿದೆ. ಪರಿಷ್ಕೃತ ತುಟ್ಟಿ ಭತ್ಯೆ ಜುಲೈ 1 ರಿಂದ ಜಾರಿಗೆ ಬರಲಿದೆ.

ಕೇಂದ್ರ ಸರ್ಕಾರಿ ನೌಕರರು ಮತ್ತು ಪಿಂಚಣಿದಾರರಿಗೆ ಶೇ. 3 ರಷ್ಟು ತುಟ್ಟಿ ಭತ್ಯೆಯನ್ನು ಹೆಚ್ಚಿಸಲಾಗಿದೆ. ಇದರಿಂದ ಸುಮಾರು ಒಂದು ಕೋಟಿ ಸರ್ಕಾರಿ ನೌಕರರು ಮತ್ತು ಪಿಂಚಣಿದಾರರು ಇದರ ಪ್ರಯೋಜನ ಪಡೆಯಲಿದ್ದಾರೆ. ಹಣದುಬ್ಬರದಿಂದ ಉಂಟಾಗುವ ಮನೆಯ ವೆಚ್ಚಗಳನ್ನು ಸರಿದೂಗಿಸಲು ಸರ್ಕಾರ ತನ್ನ ನೌಕರರು ಮತ್ತು ಪಿಂಚಣಿದಾರರಿಗೆ ತುಟ್ಟಿ ಭತ್ಯೆಯನ್ನು ಹೆಚ್ಚಿಸಿರುವುದಾಗಿ ತಿಳಿಸಿದೆ. ಇದರಿಂದ ಸೇವೆ ಸಲ್ಲಿಸುತ್ತಿರುವ ನೌಕರರು ಮತ್ತು ನಿವೃತ್ತ ಸಿಬ್ಬಂದಿಗೆ ಭಾರಿ ಪ್ರಯೋಜನವಾಗಲಿದೆ ಎಂದು ಹೇಳಿದೆ.

ಈ ವರ್ಷದಲ್ಲಿ ಎರಡು ಬಾರಿ ತುಟ್ಟಿ ಭತ್ಯೆ ಪರಿಷ್ಕರಣೆ ಮಾಡಲಾಗಿದೆ. ಇದನ್ನು ಕೈಗಾರಿಕಾ ಕಾರ್ಮಿಕರಿಗೆ ಗ್ರಾಹಕ ಬೆಲೆ ಸೂಚ್ಯಂಕ (ಸಿಪಿಐ) ದತ್ತಾಂಶವನ್ನು ಆಧರಿಸಿ ಹೆಚ್ಚಳ ಮಾಡಿರುವುದಾಗಿ ತಿಳಿಸಿದೆ. ವರ್ಷದಿಂದ ವರ್ಷಕ್ಕೆ ಏರುತ್ತಿರುವ ಬೆಲೆಯಿಂದಾಗಿ ಯಾರಿಗೂ ತೊಂದರೆಯಾಗದಿರಲಿ ಎಂದು ಕೇಂದ್ರ ಸರ್ಕಾರವು ತನ್ನ ನೌಕರರಿಗೆ ಸಹಾಯ ಮಾಡಲು ಸಾಮಾನ್ಯವಾಗಿ ಪ್ರತಿ ವರ್ಷ ಜನವರಿ ಮತ್ತು ಜುಲೈನಲ್ಲಿ ತುಟ್ಟಿಭತ್ಯೆಯನ್ನು ಪರಿಷ್ಕರಿಸುತ್ತದೆ.

ಈ ವರ್ಷದ ಆರಂಭದಲ್ಲಿ ಅಂದರೆ ಮಾರ್ಚ್ ತಿಂಗಳಲ್ಲಿ ಸರ್ಕಾರವು ತುಟ್ಟಿ ಭತ್ಯೆಯನ್ನು ಶೇ. 2ರಷ್ಟು ಹೆಚ್ಚಳ ಮಾಡಲಾಗಿತ್ತು. ಇದೀಗ ಮತ್ತೆ ಶೇ. 3 ರಷ್ಟು ಹೆಚ್ಚಳ ಮಾಡಲಾಗಿದೆ. ಇದರಿಂದ 50,000 ರೂ. ಮೂಲ ವೇತನ ಹೊಂದಿರುವ ನೌಕರರಿಗೆ 26,500 ರೂ. ತುಟ್ಟಿ ಭತ್ಯೆ ದೊರೆಯಲಿದೆ. ಇದರಿಂದ ವೇತನ ಗಣನೀಯ ಪ್ರಮಾಣದಲ್ಲಿ ಹೆಚ್ಚಳವಾಗಲಿದ್ದು, ಹೆಚ್ಚಿನ ಜೀವನ ವೆಚ್ಚಗಳನ್ನು ನಿರ್ವಹಿಸಲು ಸಾಧ್ಯವಾಗುತ್ತದೆ.

## ಪರಿಶಿಷ್ಟ ಜಾತಿ ಪಟ್ಟಿಗೆ ಮಡಿವಾಳ ಸಮುದಾಯ ಸೇರ್ಪಡೆಗೆ ಸಂಘಟಿತ ಹೋರಾಟ ಅಗತ್ಯ: ಬಸವ ಮಾಚಿದೇವ ಶ್ರೀಗಳು



**ದಾವಣಗೆರೆ:** ಮಡಿವಾಳ ಸಮುದಾಯವು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಮತ್ತು ರಾಜಕೀಯವಾಗಿ ಸ್ಥಾನಮಾನವನ್ನು ಪಡೆಯಬೇಕಾದರೆ, ನಮ್ಮ ಸಮುದಾಯವು ಪರಿಶಿಷ್ಟ ಜಾತಿಯ ವರ್ಗಕ್ಕೆ ಸೇರ್ಪಡೆ ಆಗಬೇಕು. ಇದಕ್ಕಾಗಿ ಸಂಘಟಿತ ಹೋರಾಟ ಅಗತ್ಯ ಎಂದು ಚಿತ್ರದುರ್ಗದ ಜಗದ್ಗುರು ಶ್ರೀಮಾಚಿದೇವ ಮಹಾಸಂಸ್ಥಾನ ಮಠದ ಪೀಠಾಧಿಪತಿಗಳಾದ ಜಗದ್ಗುರು ಡಾ.ಶ್ರೀಬಸವ ಮಾಚಿದೇವ ಮಹಾಸ್ವಾಮಿಗಳು ಕರೆ ನೀಡಿದರು.

ನಗರದ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಬರುವ ಜಿಲ್ಲಾ ಪಂಚಾಯತ ಸಮೀಪದ ಮಡಿಕಟ್ಟೆ (ಧೋಬಿಘಾಟ್) ನಲ್ಲಿ ಆಯೋಜಿಸಲಾಗಿದ್ದ ಶ್ರೀ ಬನ್ನಿ ಮಹಾಂಕಾಳಿ ದೇವಿಯ ಪೂಜಾ ಮಹೋತ್ಸವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ಅನಾದಿ ಕಾಲದಿಂದಲೂ ತುಳಿತಕ್ಕೆ ಒಳಗಾಗಿರುವ ಮಡಿವಾಳ ಸಮುದಾಯವು ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿ ಸೇರಬೇಕೆಂದು ಹಲವಾರು ವರ್ಷಗಳಿಂದ ಹೋರಾಟ ಮಾಡುತ್ತಾ ಬರುತ್ತಿದೆ. ಅಂತೆಯೇ ನಾವುಗಳು

ಎಸ್ಸಿ ವರ್ಗಕ್ಕೆ ಸೇರುವ ಬಗ್ಗೆ ಸಂಘಟಿತರಾಗಿ ಹೋರಾಡಬೇಕು. ಆ ಮೂಲಕ ನಮ್ಮ ಸಮುದಾಯ ಈಗ ಹಾಲಿ ಇರುವ ಸರಕಾರದ ಸೌಲಭ್ಯಗಳನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಈಗ ರಾಜ್ಯ ಸರ್ಕಾರ ನಡೆಸುತ್ತಿರುವ ಜಾತಿ ಗಣತಿಯಲ್ಲಿ ನಮ್ಮ ಸಮಾಜದ ಜನರು ಜಾತಿ ಗಣುತಿಯಲ್ಲಿ ಮಡಿವಾಳ ಎಂದು ಬರೆಸಿ ಬೇಕು ಎಂದು ಕರೆ ನೀಡಿದರು.

ದಾವಣಗೆರೆಯಲ್ಲಿ ಜಿಲ್ಲಾ ಮಂತ್ರಿ ಎಸ್.ಎಸ್. ಮಲ್ಲಿಕಾರ್ಜುನ ಅವರು ಸಮುದಾಯದ ಜನರ ಏಳಿಗೆಗಾಗಿ ವಿದ್ಯಾರ್ಥಿ ನಿಲಯ, ದೋಭಿಘಾಟ್‌ಗೆ ಸೇರಿ ಓಟು 6 ಕೋಟಿ ರೂಪಾಯಿ ನೀಡಿ–ದ್ದಾರೆ. ಇವತ್ತು ಕೂಡ ನೆಲಕ್ಕೆ ಕಾಂಕ್ರೀಟ್ ಹಾಕಿಸಲು ಮತ್ತು ನೆರಳಿನ ಮೇಲ್ಚಾವಣಿಗೆ ಬಣ್ಣ ಒಡೆಯಲು, 24*7 ಕರೆಂಟ್ ಸಂಪರ್ಕ ಕಲ್ಪಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸುವಂತೆ ಆಪ್ತ ಸಹಾಯಕರಿಗೆ ತಿಳಿಸಿದ್ದಾರೆ. ಇಂತಹ ರಾಜಕಾರಣಿಗಳು ನಮ್ಮ ಸಮಾಜಕ್ಕೆ ಸಿಕ್ಕರೆ ಸೌಭಾಗ್ಯ ಇವರೊಟ್ಟಿಗೆ ಸಮಾಜ ಎಂದು ಕೂಡ ಚಿರಋಣಿಯಾಗಿರಬೇಕು ಎಂದು ಕರೆಕೊಟ್ಟರು.

ಸಮಾಜ ಬಾಂಧವರು ತಮ್ಮ ಕಾಯಕದ ಜೊತೆಗೆ ತಮ್ಮ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸವನ್ನು ಕೊಡಬೇಕು. ನಮ್ಮ ಕುಲ ಕಸುಬು ನಮಗೆ ಶ್ರೇಷ್ಠ ಎಂದು ಅರಿತಿರಬೇಕು. ನಾವು ಮಾಡುವ ವೃತ್ತಿಯ ಜಾಗ ನಮಗೆ ದೇವಸ್ಥಾನ ಇದ್ದಂತೆ. ನಾವು ನಮ್ಮ ಜಾಗಕ್ಕೆ ಬರುವಾಗ ಸಂಸ್ಕಾರದಿಂದ ನಮಸ್ಕರಿಸಿ ಬಂದಾಗ ನಮ್ಮೆಲ್ಲ ಸಂಕಷ್ಟಗಳು ನಿವಾರಣೆ ಆಗುತ್ತವೆ ಎಂದು ತಿಳಿಸಿದರು.

ಬಸವೇಶ್ವರ ಕಾಲದಲ್ಲಿ ನಮ್ಮ ಸಮುದಾಯದ ತಂದೆ ಮಡಿವಾಳ ಮಾಚಿದೇವರು ಶರಣರ ಬಟ್ಟೆಗಳನ್ನು ಮಡಿ ಮಾಡಿ ಕೊಡುವುದು ನನ್ನ ಕಾಯಕವೆಂದು ಹೇಳಿ ದುಷ್ಟರನ್ನು ಶಿಕ್ಷಿಸಿದಂತಹ, ಶಿವದೇವರ ಆದೇಶದಂತೆ ಕೆಲಸ ಮಾಡಿದಂತ ಧೀಮಂತ ನಾಯಕರಾದ ಮಾಚಿದೇವರ ಕುಲದಲ್ಲಿ ನಾವುಗಳು ಹುಟ್ಟಿರುವುದೇ ಸೌಭಾಗ್ಯ. ನಮ್ಮ ಕಸಬು ಕೀಳಲ್ಲ ಎಂಬುವ ಭಾವನೆಯಲ್ಲಿ ನಾವೆಲ್ಲಾ ದುಡಿಯಬೇಕು. ಮಾಚಿದೇವರು ಅಂದು ಬಿಜ್ಜಳರ ಸೈನ್ಯವನ್ನು ಹಿಮ್ಮೆಟ್ಟಿಸಿ ಅಣ್ಣ ಬಸವಣ್ಣ, ಅಕ್ಕಮಹಾದೇವಿಯವರ ಸಹಕಾರದೊಂದಿಗೆ ವಚನ ಸಾಹಿತ್ಯ ಭಂಡಾರವನ್ನು ಸಂರಕ್ಷಿಸಿದ ಧೀಮಂತ ನಾಯಕ ಎಂದು ಸ್ಮರಿಸಿದರು.

ಜಿಲ್ಲಾ ಉಸ್ತುವಾರಿ ಮಂತ್ರಿ ಎಸ್. ಎಸ್. ಮಲ್ಲಿಕಾರ್ಜುನ್ ಮಾತನಾಡಿ, ಕಾಂಗ್ರೆಸ್ ಸರ್ಕಾರವು ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಸದಾ ಶ್ರಮಿಸುತ್ತಿದೆ. ಈ ನಿಟ್ಟಿನಲ್ಲಿ ಮಡಿವಾಳ ಸಮುದಾಯವು ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆಯಬೇಕು. ಅಲ್ಲದೇ ದೇವರಾಜ ಅರಸು ಬಡಾವಣೆಯಲ್ಲಿ ನಿರ್ಮಿಸುತ್ತಿರುವ ಬಾಲಕರ ವಸತಿ ನಿಲಯವನ್ನು ಪೂರ್ಣಗೊಳಿಸಿ, ಜೆ.ಹೆಚ್.ಪಟೇಲ್ ಬಡಾವಣೆಯಲ್ಲಿ ನೀಡಲಾಗಿರುವ ಬಾಲಕಿಯರ ವಸತಿ ನಿಲಯ–ಕ್ಕೆ ಕಾಮಗಾರಿ ಆರಂಭಿಸಿ, ಆ ಮೂಲಕ ಸಮುದಾಯದ ಮಕ್ಕಳನ್ನು ಶಿಕ್ಷಿತರನ್ನಾಗಿ ಮಾಡಿ ಎಂದು ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ, ಮಡಿವಾಳ ಮಾಚಿದೇವ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಹೆಚ್.ಜಿ.ಉಮೇಶ್ ಅವರಗೆರೆ, ಮುದೇಗೌಡರ ಗಿರೀಶ್, ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಮಂಜುನಾಥ್ ಗಡಿಗುಡಾಳ್, ಮಂತ್ರಿಗಳ ಆಪ್ತ ಸಹಾಯಕ ನಾಗರಾಜ್, ರಮೇಶ್, ಸಮಾಜದ ಮುಖಂಡರಾದ ಓಂಕಾರಪ್ಪ, ರಾಷ್ಟ್ರೀಯ ಯೋಗಪಟು ಡಾ. ಎನ್.ಪರಶುರಾಮ್, ದುಗ್ಗಪ್ಪ, ಗುಡ್ಡಪ್ಪ, ರುದ್ರೇಶ್, ಪಿ.ಮಂಜುನಾಥ್, ಕೋಗುಂಡೆ ಸುರೇಶ್, ಕುಮಾರ್, ರವಿ ಕುಮಾರ್, ಪ್ರವೀಣ್, ಪಕ್ಕೀರಸ್ವಾಮಿ, ಹಿರಿಯರಾದ ಮಲ್ಲೇಶಪ್ಪ, ನಾಗಮ್ಮ, ಮಂಗಳಮ್ಮ ಇತರರಿದ್ದರು.

## ನವೆಂಬರ್‌ನಲ್ಲಿ ಸಿದ್ದರಾಮಯ್ಯ ಸಿಎಂ ಸ್ಥಾನದಿಂದ ಕೆಳಗಿಳಿಯುತ್ತಾರಾ?

### ಭವಿಷ್ಯ ನುಡಿದ ಕೋಡಿಮಠದ ಸ್ವಾಮೀಜಿ



**ಧಾರವಾಡ:** ರಾಜ್ಯ ಕಾಂಗ್ರೆಸ್ ನಲ್ಲಿ ಮತ್ತೆ ಮುಖ್ಯಮಂತ್ರಿ ಬದಲಾವಣೆ ವಿಚಾರ ಸದ್ದು ಮಾಡುತ್ತಿದೆ. ನವೆಂಬರ್ ನಲ್ಲಿ ರಾಜ್ಯ ರಾಜಕಾರಣದಲ್ಲಿ ಬದಲಾವಣೆಯಾಗಲಿದೆ ಎಂಬ ಮಾತುಗಳನ್ನು ಕಾಂಗ್ರೆಸ್ ನಾಯಕರೇ ಆಡುತ್ತಿದ್ದಾರೆ.

ಈ ಮಧ್ಯೆ ರಾಜ್ಯ, ದೇಶದ ಭವಿಷ್ಯ, ರಾಜಕಾರಣಿಗಳ ವಿಚಾರ, ಪ್ರಾಕೃತಿಕ ವಿಕೋಪಗಳ ಬಗ್ಗೆ ಭವಿಷ್ಯ ಹೇಳುವ ಕೋಡಿಮಠದ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಸಿದ್ದರಾಮಯ್ಯ ಸರ್ಕಾರಕ್ಕೆ ಯಾವುದೇ ತೊಂದರೆ ಇಲ್ಲ ಎಂದು ಧಾರವಾಡದಲ್ಲಿ ಮಾತನಾಡುತ್ತಾ ನುಡಿದಿದ್ದಾರೆ.

ಸಂಕ್ರಾಂತಿವರೆಗೆ ಏನೂ ಹೇಳಲ್ಲ, ಸಿದ್ದರಾಮಯ್ಯ ಸರ್ಕಾರಕ್ಕೆ ಭಯವಿಲ್ಲ. ಉಳಿದದ್ದು ಸಂಕ್ರಾಂತಿ ಆದ ಮೇಲೆ ನೋಡಿ ಹೇಳಬೇಕು ಎಂದಿದ್ದಾರೆ. ಬಯಲು ಸೀಮೆಯಲ್ಲಿ ಮಲೆನಾಡು ಮಳೆ ಎಂದು ಈ ಹಿಂದೆ ಹೇಳಿದ್ದೆ. ಮಲೆನಾಡು ಬಯಲುಸೀಮೆ ಆಗಿದೆ, ಬಯಲುಸೀಮೆ ಮಲೆನಾಡು ಆಗಿದೆ ಎಂದು ಹೇಳಿದ್ದಾರೆ.

ದೇಶದಾದ್ಯಂತ ಹಬ್ಬಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು ಜನ ಹಿತಕ್ಕಾಗಿ ನಡೆಯುತ್ತಿವೆ. ದಸರಾದ ನಿಜವಾದ ಅರ್ಥವೆಂದರೆ ದುಷ್ಟಶಕ್ತಿಗಳನ್ನು ದೂರವಿಡುವುದಾಗಿದೆ. ಮನುಷ್ಯ ತನ್ನಲ್ಲಿನ ಕೋಪ, ತಾಪ, ಆಸೆಗಳನ್ನು ಗೆಲ್ಲಬೇಕು. ಮನುಷ್ಯನಿಗೆ ಶಾಂತಿ, ಸುಖ, ನೆಮ್ಮದಿ ಬೇಕು. ಈ ದೃಷ್ಟಿಯಿಂದ ದಸರಾವನ್ನು ಆಚರಿಸಲಾಗುತ್ತದೆ. ಇದು ನಮ್ಮ ಪರಂಪರೆಯ ದೊಡ್ಡ ಸಂಕೇತವಾಗಿ ಎಂದು ತಿಳಿಸಿದರು.

## ಮಸೀದಿಯಲ್ಲಿ ಬಾಲ್ಯ ವಿವಾಹಕ್ಕೆ ಯತ್ನ; ಪ್ರಕರಣ ದಾಖಲು

**ಬೆಂಗಳೂರು:** ಆನೆಪಾಳ್ಯ ಬಳಿಯ ನೀಲಸಂದ್ರದಲ್ಲಿರುವ ಮಸೀದಿಯಲ್ಲಿ ಬಾಲ್ಯ ವಿವಾಹ ನಡೆಸಲು ಯತ್ನಿಸಿದ ಅಪರಿಚಿತ ವ್ಯಕ್ತಿಗಳ ವಿರುದ್ಧ ಜಿಲ್ಲಾ ಮಕ್ಕಳ ಸಹಾಯವಾಣಿ ಅಧಿಕಾರಿಗಳು ದೂರು ದಾಖಲಿಸಿದ್ದಾರೆ. ಅಪ್ರಾಪ್ತ ಬಾಲಕಿಯನ್ನು ಆಕೆಯ ಪೋಷಕರು 20 ವರ್ಷದ ಹುಡುಗನೊಂದಿಗೆ ಮದುವೆ ಮಾಡಲು ನಿರ್ಧರಿಸಿದ್ದರು.

ಅಶೋಕ್ ನಗರ ಪೊಲೀಸರು ಬಾಲ್ಯ ವಿವಾಹ ನಿರ್ಬಂಧ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ.

## ಹಿರಿಯ ಪತ್ರಕರ್ತ ಬಸವರಾಜ ಐರಣಿ ಅವರಿಗೆ "ಜಿ.ನಾ.ಕು. ಪ್ರಶಸ್ತಿ" ಪ್ರದಾನ




**ಬೆಂಗಳೂರು:** ಅಖಿಲ ಕರ್ನಾಟಕ ಕನ್ನಡ ಚಳವಳಿ ಕೇಂದ್ರ ಸಮಿತಿ ಮತ್ತು ಕನ್ನಡ ಸಾಹಿತ್ಯ ಪರಿಷತ್ತು ಬೆಂಗಳೂರು ಇವರ ಸಹಯೋಗದಲ್ಲಿ, ಇತ್ತೀಚೆಗೆ ಬೆಂಗಳೂರಿನ ಚಾಮರಾಜಪೇಟೆಯ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ, ಕನ್ನಡ ಚಳವಳಿ ಸೇನಾನಿ, ಮಾಜಿ ವಿಧಾನಸಭಾ ಸದಸ್ಯರಾದ ಜಿ. ನಾರಾಯಣ ಕುಮಾರ್ ನೆನಪು, ನಮನ ಮತ್ತು "ಜಿ.ನಾ.ಕು. ಪ್ರಶಸ್ತಿ" ಪ್ರದಾನ ಸಮಾರಂಭ ಜರುಗಿತು.

ಕನ್ನಡ ಸಾಹಿತ್ಯ ಪರಿಷತ್ತು ರಾಜ್ಯಾಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿಯವರು ಉದ್ಘಾಟನೆ ನೆರವೇರಿಸಿದರು. ಕನ್ನಡ ಚಳವಳಿ ನಾಯಕರು, ಮಾಜಿ ಶಾಸಕರಾದ ವಾಟಾಳ್ ನಾಗರಾಜ್ ಅವರು, ಜಿ.ನಾ.ಕು. ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಪ್ರಶಸ್ತಿ ಪುರಸ್ಕೃತರಾದ ಹಿರಿಯ ಕನ್ನಡ ಚಳವಳಿಗಾರರು ಹಾಗೂ ಪತ್ರಕರ್ತರಾದ ದಾವಣಗೆರೆ ಜಿಲ್ಲೆಯ ಬಸವರಾಜ ಐರಣಿ ಹಾಗೂ ಬೆಂಗಳೂರಿನ ಸಚಿವ ಶ್ರೀಧರ್ ಇವರಿಗೆ ಜಿ.ನಾ.ಕು. ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು, ಕಬ್ಬು ಬೆಳೆಗಾರರ ಹಾಗೂ ರಾಜ್ಯ ರೈತ ಸಂಘದ ಅಧ್ಯಕ್ಷರಾದ ರೈತರತ್ನ ಕುರುಬೂರು ಶಾಂತಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಪ್ರಶಸ್ತಿ ಪುರಸ್ಕೃತರಾದ ಸಚಿವ ಶ್ರೀಧರ್ ಹಾಗೂ ಬಸವರಾಜ ಐರಣಿ ಮಾತನಾಡಿದರು.

ಆರಂಭದಲ್ಲಿ ಕ.ಸಾ.ಪ. ಗೌ. ಕಾರ್ಯದರ್ಶಿ ಬಿ.ಎಂ. ಪಟೇಲ್ ಪಾಂಡು ಸ್ವಾಗತಿಸಿದರು. ಕನ್ನಡ ಚಳವಳಿಯ ನಾಯಕರಾದ ಹಾಗೂ ಕೇಂದ್ರ ಸಮಿತಿಯ ಅಧ್ಯಕ್ಷರಾದ ಗುರುದೇವ್ ನಾರಾಯಣ ಕುಮಾರ್ ಅವರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸಮಾರಂಭದಲ್ಲಿ ದಾವಣಗೆರೆ ಜಿಲ್ಲಾ ಕನ್ನಡ ಚಳವಳಿ ಕೇಂದ್ರ ಸಮಿತಿಯ ನೂತನ ಅಧ್ಯಕ್ಷರಾದ ಶಿವರತನ್, ವಾರ್ತಾ ಇಲಾಖೆಯ ನಿವೃತ್ತ ನೌಕರ ಬಿ.ಎಸ್. ಬಸವರಾಜ್, ಸಂತೋಷ್ ಏಕಬೋಟೆ, ಮಯೂರ ಅಕ್ಕಮ್ಮನವರು, ಇವರು ಭಾಗವಹಿಸಿ ಶುಭ ಹಾರೈಸಿದರು.

## ಯದುವೀರ್ ಒಡೆಯರ್ ರಿಂದ ಬನ್ನಿ ಮರಕ್ಕೆ ಶಮಿ ಪೂಜೆ: ಅರಮನೆ ದಸರಾ ಮುಕ್ತಾಯ





**ಮೈಸೂರು:** ವಿಶ್ವವಿಖ್ಯಾತ ಮೈಸೂರು ದಸರಾ ಅಂತಿಮ ಘಟ್ಟಕ್ಕೆ ತಲುಪಿದೆ. ಇಂದು ವಿಜಯದಶಮಿ ಜಂಬೂ ಸವಾರಿಯೊಂದಿಗೆ ನವರಾತ್ರಿ ಹಬ್ಬ ಮುಕ್ತಾಯವಾಯಿತು.

ಈ ವರ್ಷ 11 ದಿನ ದಸರಾ ಆಚರಣೆ ಕಂಡಿದೆ. ಇಷ್ಟು ದಿನಗಳಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಅರಮನೆಯಲ್ಲಿ ಖಾಸಗಿ ದರ್ಬಾರ ನಡೆಯಿತು. ಚಾಮುಂಡೇಶ್ವರಿ ಬೆಟ್ಟದಲ್ಲಿ ತಾಯಿ ಚಾಮುಂಡೇಶ್ವರಿ ದೇವಿಗೆ ವಿಶೇಷ ಅಲಂಕಾರ ಮಾಡಿ ಪೂಜಿಸಲಾಯಿತು. ಇಂದು ವಿಜಯದಶಮಿ ಅಥವಾ ದಸರಾ ನಿಮಿತ್ತ ಮೈಸೂರಿನಲ್ಲಿ ಜಂಬೂಸವಾರಿ ನಡೆಯಿತು.

ಯದುವೀರ್ ಒಡೆಯರ್ ರಿಂದ ಶಮಿ ಪೂಜೆ: ಮೈಸೂರು ಅರಮನೆ ಆವರಣದಲ್ಲಿರುವ ಭುವನೇಶ್ವರಿ ದೇಗುಲದ ಬನ್ನಿಮಂಟಪದಲ್ಲಿ ಇಂದು ಮಧ್ಯಾಹ್ನ ಜಂಬೂ ಸವಾರಿಗೆ ಮುನ್ನ ಶಮಿ ಪೂಜೆ ನಡೆಯಿತು. ರಾಜ ಯದುವೀರ್ ಒಡೆಯರ್ ಶಮಿ ಪೂಜೆ ನೆರವೇರಿಸಿದರು.

ವಜ್ರಮುಷ್ಠಿ ಕಾಳಗ ಮುಕ್ತಾಯವಾಗುತ್ತಿದ್ದಂತೆ ಭುವನೇಶ್ವರಿ ದೇವಾಲಯದವರೆಗೆ ವಿಜಯಯಾತ್ರೆ ನಡೆಯಿತು. ಬಳಿಕ ಯದುವೀರ್ ಒಡೆಯರ್, ಬನ್ನಿ ಮರಕ್ಕೆ ಪೂಜೆ ಸಲ್ಲಿಸಿದರು. ಪೂಜೆ ಮುಕ್ತಾಯವಾಗುತ್ತಿದ್ದಂತೆ ಯದುವೀರ್ ಅರಮನೆಗೆ ವಾಪಸ್ ಆದರು. ಇದರೊಂದಿಗೆ ಅರಮನೆ ದಸರಾ ಮುಕ್ತಾಯಗೊಂಡಿದೆ.

ಪೊಲೀಸ್ ಬ್ಯಾಂಡ್ ಜೊತೆಗೆ ಪಟ್ಟದ ಆನೆ, ಕುದುರೆ, ಹಸು ವಿಜಯಯಾತ್ರೆಯಲ್ಲಿ ಭಾಗಿಯಾಗಿದ್ದವು. ಖಾಸಾ ಆಯುಧಗಳನ್ನು ಪಲ್ಲಕ್ಕಿಯಲ್ಲಿರಿಸಿ ಮೆರವಣಿಗೆ ಮಾಡಲಾಯಿತು. ಶ್ರೀಕಂಠದತ್ತ ಒಡೆಯರ್ ಬಳಸುತ್ತಿದ್ದ ಕಾರಿನಲ್ಲಿ ಯದುವೀರ್ ವಿಜಯಯಾತ್ರೆಯಲ್ಲಿ ಪಾಲ್ಗೊಂಡಿದ್ದರು.

## ಮತಬ್ಯಾಂಕ್ ರಾಜಕಾರಣಕ್ಕಾಗಿ ಬಿಜೆಪಿ ಶಾಂತಿ ಕದಡಲು ಕೋಮುವಾದ ಬಳಕೆ: ಡಿ.ಬಸವರಾಜ್



**ದಾವಣಗೆರೆ :** ರಾಜ್ಯದಲ್ಲಿ ಮತ ಬ್ಯಾಂಕ್ ರಾಜಕೀಯಕ್ಕಾಗಿ ಬಿಜೆಪಿ ಪಕ್ಷ ಕೋಮುವಾದವನ್ನು ಬಳಸುತ್ತಿದೆ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಡಿ.ಬಸವರಾಜ್ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣೆಯಲ್ಲಿ ಸ್ಪರ್ಧಿಸಿ ಸೋಲು ಕಂಡಿ–ದ್ದ ಬಿಜೆಪಿ ಅಭ್ಯರ್ಥಿಗಳು, ನಿಧಾನಗತಿಯಲ್ಲಿ ಜನರನ್ನು ತಮ್ಮತ್ತ ಸೆಳೆಯಲು ಯತ್ನಿಸುತ್ತಿದ್ದಾರೆ. ಇದಕ್ಕಾಗಿ ಕೋಮು ಅಸ್ತ್ರವನ್ನು ಬಳಕೆ ಮಾಡಿದ್ದಾರೆ. ಪ್ರಾದೇಶಿಕ ಪಕ್ಷದ ಭದ್ರಕೋಟೆಯಾಗಿದ್ದ ಮಂಡ್ಯವನ್ನು ಕೋಮುವಾದೀಕರಿಸಲು ಬಿಜೆಪಿ ತಂತ್ರ ರೂಪಿಸಿ ಕೆರೆಗೋಡು, ನಾಗಮಂಗಲ ಮತ್ತು ಮದ್ದೂರಿನಲ್ಲಿ ಕೋಮು ಅಶಾಂತಿ ಸೃಷ್ಟಿಸಿದೆ. ಈ ಕೋಮುವಾದಿಗಳ ಮುಂದಿನ ಆಯ್ಕೆ ನಮ್ಮ ದಾವಣಗೆರೆ ಜಿಲ್ಲೆಯಾಗಿದ್ದು, ಇಲ್ಲಿ ಕೋಮುವಾದಿ ವಿಷ ಬೀಜವನ್ನು ಬಿತ್ತುತ್ತಿದ್ದು ಹೇಗಾದರೂ ಸರಿ ಇಲ್ಲಿ ಹಿಂದು ಮುಸ್ಲಿಂ ಮಧ್ಯೆ ಜಗಳ ಮಾಡಿಸಲು ಮುಂದಡಿ ಇಟ್ಟಿದ್ದಾರೆ ಎಂದರು. ಇದಕ್ಕಾಗಿ ಬಿಜೆಪಿ ಮತ್ತು ಸಂಘ ಪರಿವಾರದ ನಾಯಕರು ದಾವಣಗೆರೆ ಜಿಲ್ಲೆಗೆ ಬಂದು ಇಲ್ಲಿನ ಜನಸಾಮಾನ್ಯರ ತಲೆಕೆಡಿಸುವಂತಹ ಕೆಲಸ ಮಾಡುತ್ತಿದ್ದಾರೆ. ದಾವಣಗೆರೆ ಜಿಲ್ಲೆಯಲ್ಲಿ ಜನ ಶಾಂತಿ ಸುರಕ್ಷತೆಯಿಂದ ಇರಲು ಕಳೆದ 35 ವರ್ಷಗಳಿಂದ ದಾವಣಗೆರೆ ಹಿರಿಯ ರಾಜಕಾರಣಿಗಳಾದ ಡಾ. ಶಾಮನೂರು ಶಿವಶಂಕರಪ್ಪ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್‌ರವರು ಶ್ರಮಿಸುತ್ತಿದ್ದಾರೆ ಎಂದರು.

## ರಾಶಿ ಭವಿಷ್ಯ

### ಮೇಷ ರಾಶಿ

ಇಂದು ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ಒಂದು ವೈವಾಹಿಕ ಸಂಬಂಧವನ್ನು ಹೊಂದಲು ಒಳ್ಳೆಯ ಸಮಯ. ನೀವು ಪ್ರೀತಿಸುವ ವ್ಯಕ್ತಿಯ ಕಡೆಗಿನ ನಿಮ್ಮ ಒರಟು ವರ್ತನೆ ಸಂಬಂಧದಲ್ಲಿ ಬಹಳಷ್ಟು ಅಸಾಮರಸ್ಯವನ್ನು ತರಬಹುದು.

### ವೃಷಭ ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು ಮಕ್ಕಳು ನೀವು ಅವರೆಡೆಗೆ ಗಮನ ಹರಿಸಬೇಕೆಂಬ ಬೇಡಿಕೆಯಿಟ್ಟರೂ ಅವರು ನಿಮಗೆ ಸಂತೋಷ ತರುತ್ತಾರೆ.

### ಮಿಥುನ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ಮನೆಯಲ್ಲಿ ಸಮಸ್ಯೆಗಳು ಉದ್ಭವವಾಗುವಂತೆ ತೋರುತ್ತಿರುವುದರಿಂದ ನಿಮ್ಮ ಮಾತುಗಳ ಬಗ್ಗೆ ಎಚ್ಚರ ವಹಿಸಿ.

### ಕರ್ಕ ರಾಶಿ

ಅಸಾಧ್ಯವಾದ ಅನಗತ್ಯ ಚಿಂತನೆಯಲ್ಲಿ ನಿಮ್ಮ ಶಕ್ತಿ ವ್ಯರ್ಥ ಮಾಡುವ ಬದಲು ಅದನ್ನು ಸರಿಯಾದ ದಿಕ್ಕಿನಲ್ಲಿ ಬಳಸಿ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ನಿಮ್ಮ ಕುಟುಂಬದ ಸಲುವಾಗಿ ಏನಾದರೂ ಉದಾತ್ತ ಮತ್ತು ಉಪಯುಕ್ತವಾದದ್ದರ ಸಲುವಾಗಿ ಶ್ರಮಪಡಿ. ಒಂದು ತಪ್ಪಿದ ಅವಕಾಶ ಮತ್ತೆ ಮರಳದೇ ಇರಬಹುದಾದ್ದರಿಂದ ಹಿಂಜರಿಯಬೇಡಿ.

### ಸಿಂಹ ರಾಶಿ

ಸ್ವಯಂ ಸುಧಾರಣೆಯ ಯೋಜನೆಗಳು ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಫಲ ನೀಡುತ್ತವೆ – ನಿಮ್ಮ ಬಗ್ಗೆ ನಿಮಗೇ ಒಳ್ಳೆಯದೆನಿಸುತ್ತದೆ ಮತ್ತು ವಿಶ್ವಾಸ ಮೂಡುತ್ತದೆ. ನೀವು ಇತರರ ಮಾತುಗಳನ್ನು ನಂಬಿ ಇಂದು ಹೂಡಿಕೆ ಮಾಡಿದಲ್ಲಿ ಇಂದು ಆರ್ಥಿಕ ನಷ್ಟದ ಸಾಧ್ಯತೆಯಿದೆ. ಸಂತೋಷದ ಚೈತನ್ಯದಾಯಕ – ಪ್ರಿಯವಾದ ಚಿತ್ತದ – ನಿಮ್ಮ ಖುಷಿಯ ಸ್ವಭಾವ ನಿಮ್ಮ ಸುತ್ತಲಿನವರಿಗೆ ಸಂತೋಷ ಮತ್ತು ಖುಷಿಯನ್ನು ತರುತ್ತದೆ.

### ಕನ್ಯಾ ರಾಶಿ

ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ದಿನದ ಕೊನೆಯಲ್ಲಿ ಒಬ್ಬ ಹಳೆಯ ಸ್ನೇಹಿತರ ಭೇಟಿ ನಿಮ್ಮ ಸಂಜೆಯನ್ನು ಬೆಳಗಿಸುತ್ತದೆ. ನೀವು ಆ ಸುವರ್ಣ ದಿನಗಳನ್ನು ನೆನಪಿಸಿಕೊಳ್ಳುವ ಜೊತೆ ನಿಮ್ಮ ಬಾಲ್ಯದ ಸವಿನೆನಪುಗಳನ್ನೂ ಆನಂದಿಸುತ್ತೀರಿ.

### ತುಲಾ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ. ನಿಮ್ಮ ಸಂಗಾತಿಯ ಜೊತೆಗಿನ ಸಂಬಂಧ ನಿಮ್ಮ ಕಚೇರಿ ಕೆಲಸದ ಕಾರಣ ಹಾಳಾಗಬಹುದು. ಪ್ರಣಯ ನಿಮ್ಮ ಹೃದಯ ಮತ್ತು ಮನಸ್ಸನ್ನು ಆಳುತ್ತದೆ.

### ವೃಶ್ಚಿಕ ರಾಶಿ

ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ–ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು, ಎಂದು ನಿಮಗೆ ನನ್ನ ಸಲಹೆ ನೀಡಲಾಗಿದೆ, ಅದನ್ನು ಮಾಡುವುದು ನಿಮ್ಮ ಆರೋಗ್ಯವನ್ನು ಹದಗೆಡಿಸುತ್ತದೆ ಮತ್ತು ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸಹ ಹದಗೆಡಿಸುತ್ತದೆ.

### ಧನು ರಾಶಿ

ಸಂಗಾತಿಯೊಡನೆ ಚಲನಚಿತ್ರ – ರಂಗಭೂಮಿ ಅಥವಾ ಊಟ ನಿಮ್ಮನ್ನು ಒಂದು ಶಾಂತ ಮತ್ತು ಅದ್ಭುತವಾದ ಮನಸ್ಥಿತಿಯಲ್ಲಿರುತ್ತದೆ ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ. ಕೆಲಸದ ಒತ್ತಡ ನಿಮ್ಮ ಮನಸ್ಸನ್ನು ಆವರಿಸುತ್ತದೆ ಹಾಗೂ ಇದು ಕುಟುಂಬ ಮತ್ತು ಸ್ನೇಹಿತರಿಗೆ ಯಾವುದೇ ಸಮಯವಿಲ್ಲದಂತೆ ಮಾಡುತ್ತದೆ. ಪ್ರಣಯ ನಿಮ್ಮ ಹೃದಯ ಮತ್ತು ಮನಸ್ಸನ್ನು ಆಳುತ್ತದೆ. ಇಂದು ವಿಶ್ರಾಂತಿ ಪಡೆಯಲು ಸಮಯವಿಲ್ಲ ಬಾಕಿಯಿರುವ ಕೆಲಸಗಳು ನಿಮ್ಮನ್ನು ವ್ಯಸ್ತವಾಗಿಡುತ್ತವೆ.

### ಮಕರ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನೀವು ಇಂದು ಹಣ ಉಳಿಸುವುದು ಕಷ್ಟ ನೀವು ಇಂದು ಅತಿಯಾಗಿ ಖರ್ಚು ಮಾಡುವ ಅಥವಾ ನಿಮ್ಮ ಪರ್ಸ್ ಕಳೆದುಕೊಳ್ಳುವ ಸಾಧ್ಯತೆಗಳಿವೆ ನಿರ್ಲಕ್ಷ್ಯತನದಿಂದ ಕೆಲವು ಸಮಸ್ಯೆಗಳು ಖಂಡಿತ. ಮಕ್ಕಳಿಗೆ ಅವರ ಮನೆಗೆಲಸ ಪೂರ್ಣಗೊಳಿಸಲು ಸಹಾಯ ಮಾಡುವ ಸಮಯ.

### ಕುಂಭ ರಾಶಿ

ಹೊರಾಂಗಣ ಚಟುವಟಿಕೆಗಳು ಇಂದು ದಣವು ಮತ್ತು ಒತ್ತಡ ತರುತ್ತವೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಸ್ನೇಹಿತರು ಮತ್ತು ಸಂಬಂಧಿಗಳು ಉಪಕಾರ ಮಾಡುತ್ತಾರೆ ಮತ್ತು ನೀವು ಅವರ ಸಂಗದಲ್ಲಿ ಸಾಕಷ್ಟು ಸಂತೋಷವಾಗಿರುವಿರಿ.

### ಮೀನ ರಾಶಿ

ಜೀವನದಲ್ಲಿ ಒತ್ತಡದ ಮನೋಭಾವವನ್ನು ತಪ್ಪಿಸಿ ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ಇಂದು ನಿಮ್ಮ ಪ್ರೀತಿಪಾತ್ರರು ತನ್ನ ಮನಸ್ಥಿತಿಯನ್ನು ನಿಮ್ಮ ಮುಂದೆ ಇಡಲು ಸಾಧ್ಯವಾಗುವುದಿಲ್ಲ ಇದರಿಂದಾಗಿ ನೀವು ಅಸಮಾಧಾನಗೊಳ್ಳಬಹುದು. ವ್ಯಾಪಾರ ಸಹವರ್ತಿಗಳು ಬೆಂಬಲ ನೀಡುತ್ತಾರೆ .

# ಪರಿಸರ ಇದ್ದರೆ ಮನುಕುಲದ ಉಳಿವು

**ಶಿವಮೊಗ್ಗ:** ಹಸಿರು ಜೀವನಕ್ಕೆ ಅತಿ ಅವಶ್ಯಕ. ಪರಿಸರ ಇದ್ದರೆ ಮನುಕುಲದ ಉಳಿವು. ಆರೋಗ್ಯ ಮತ್ತು ಆಯಸ್ಸು ವೃದ್ಧಿಸಲು ಹಸಿರು ನೆರವಾಗುತ್ತದೆ. ಪ್ರತಿಯೊಬ್ಬರೂ ಜೀವನದಲ್ಲಿ ಕನಿಷ್ಠ ಏಳು ಗಿಡಗಳನ್ನಾದರೂ ನೆಟ್ಟು ಬೆಳೆಸಿದರೆ, ಅದಕ್ಕಿಂತ ಉತ್ತಮ ಕಾರ್ಯ ಬೇರೊಂದಿಲ್ಲ ಎಂದು ದೊಡ್ಡಮ್ಮ ದೇವಿ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ, ಮಧ್ಯಪ್ರದೇಶದ ಇಂದೋರ್ ನ ನಿವಾಸಿ, ಪರಿಸರ ಪ್ರೇಮಿ ಡಾ. ಶಂಕರ್ ಲಾಲ್ ಗಾರ್ಗ್ ಹೇಳಿದರು.

ಶಿವಮೊಗ್ಗದ ಪ್ರೆಸ್ ಕಾಲೋನಿಯ ದೊಡ್ಡಮ್ಮ ಚಾರಿಟೇಬಲ್ ಟ್ರಸ್ಟ್ ನಿಂದ ಗುರುವಾರ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಶ್ರೀ ದೊಡ್ಡಮ್ಮ ದೇವಿ ರಾಷ್ಟ್ರೀಯ ಪ್ರಶಸ್ತಿ ಒಂದು ಲಕ್ಷ ರೂ.ಗೌರವ ಸ್ವೀಕರಿಸಿ ಮಾತನಾಡಿದರು

ಪರಿಸರ ಸಮತೋಲನ ಕಾಪಾಡಲು ಅರಣ್ಯ ಸಂಪತ್ತು ಅವಶ್ಯಕ. ಪರಿಸರ ಇದ್ದರೆ ಮಾತ್ರ ಮನುಕುಲ ಉಳಿಯಲು ಸಾಧ್ಯ. ಮರಗಳು ಸಹಸ್ರಾರು ವರ್ಷಗಳ ಕಾಲ ನಮಗೆ ಆಮ್ಲಜನಕವನ್ನು ನೀಡಿ ಇಂಗಾಲದ ಡೈ ಆಕ್ಸೈಡ್ ಅನ್ನು ಹೀರಿ ವಾಯು ಮಾಲಿನ್ಯವನ್ನು ತಡೆಗಟ್ಟುತ್ತದೆ ಎಂದು ತಿಳಿಸಿದರು.

ಸರ್ಕಾರಿ ಹುದ್ದೆಯಿಂದ ನಿವೃತ್ತಿಯಾದ ನಂತರ 22 ಎಕರೆ



ಬಂಜರು ಭೂಮಿಯಲ್ಲಿ ಸುಮಾರು 50 ಸಾವಿರ ಮರಗಳನ್ನು ಬೆಳೆಸಲಾಗಿದೆ. ಪರಿಸರದೊಂದಿಗೆ ತಮ್ಮ ಜೀವನ ಸಾಗಿದೆ. ಮುಂದಿನ ದಿನಗಳಲ್ಲಿಯೂ ಮತ್ತಷ್ಟು ಮರಗಳನ್ನು ಬೆಳೆಸುವ ಯೋಜನೆ ತಮ್ಮದಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಲಲಿತಾ ಸಹಸ್ರನಾಮ ಮತ್ತು ಸೌಂದರ್ಯ ಲಹರಿಯನ್ನು ಸಹಸ್ರಾರು ಮಹಿಳೆಯರಿಗೆ ಕಲಿಸುತ್ತಿರುವ ಆಶಾ ಆರ್. ಕುಮಾರ್ ಅವರಿಗೆ ಶ್ರೀ ಲಲಿತಾ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಆಶಾ ಆರ್. ಕುಮಾರ್ ಮಾತನಾಡಿ, ಪಾಲಕರು ಮಕ್ಕಳಿಗೆ ವಿದ್ಯೆ ನೀಡುವ ಜೊತೆಗೆ ಸಂಸ್ಕಾರ ಕಳಿಸಬೇಕು. ಸಂಸ್ಕಾರವಿದ್ದರೆ ಮಾತ್ರ ಉತ್ತಮ ಬದುಕು ಸಾಗಿಸಲು ಸಾಧ್ಯ ಎನ್ನುವುದನ್ನು ಪ್ರತಿಯೊಬ್ಬರು ಅರ್ಥಮಾಡಿಕೊಳ್ಳಬೇಕು ಎಂದರು.

ಲಲಿತಾ ಪುರಸ್ಕಾರ ಗೌರವ ನೀಡಿ ಸನ್ಮಾನಿಸಿರುವುದು ತಮಗೆ ಅತೀವ ಸಂತಸ ಉಂಟು ಮಾಡಿದೆ. ಮತ್ತಷ್ಟು ಸಾಧನೆಗೆ ಪ್ರೇರಕವಾಗಿದೆ ಎಂದು ತಿಳಿಸಿದರು.

ಹಿರಿಯೂರಿನ ಶಾರದಾಶ್ರಮದ ಅಧ್ಯಕ್ಷರಾದ ಮಾತಾ ಚೈತನ್ಯಮಯಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪ್ರಶಸ್ತಿ ಪುರಸ್ಕೃತರ ಸಾಧನೆ ಸರ್ವರಿಗೂ ಮಾದರಿಯಾಗಿದೆ. ಭಗವತಿ ನಾಮಸ್ಮರಣೆ, ಉತ್ತಮ ಸಂಸ್ಕಾರಗಳಿಂದ ಜೀವನದಲ್ಲಿ ಸಾಧನೆ ಸಾಧ್ಯವಾಗಲಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಸಾಹಿತಿ ಎಂ. ಎನ್. ಸುಂದರ್ ರಾಜ್ ಮಾತನಾಡಿ,

ದೊಡ್ಡಮ್ಮ ಚಾರಿಟಬಲ್ ಟ್ರಸ್ಟ್ ಕಳೆದ ಮೂರು ವರ್ಷಗಳಿಂದ ಸಮಾಜಕ್ಕೆ ಅತ್ಯುತ್ತಮ ಸೇವೆ ಸಲ್ಲಿಸುವ ವ್ಯಕ್ತಿಗಳಿಗೆ ರಾಷ್ಟ್ರೀಯ ಪ್ರಶಸ್ತಿ ಮತ್ತು ಶ್ರೀ ಲಲಿತಾ ಪುರಸ್ಕಾರ ಪ್ರಶಸ್ತಿ ನೀ ನೀಡುತ್ತಿದೆ ಎಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ದೊಡ್ಡಮ್ಮ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷರು ಹಾಗೂ ದೊಡ್ಡಮ್ಮದೇವಿ ಉಪಾಸಕರಾದ ಸಿದ್ದಪ್ಪಾಜಿ ಅವರು ಮಾತನಾಡಿ, ನಾವೆಲ್ಲರೂ ಭಗವತಿ ದಾಸರಾಗಬೇಕು. ಸನ್ಮಾರ್ಗದಲ್ಲಿ ಮುನ್ನಡೆಬೇಕು. ಆಗ ಮಾತ್ರ ಇಷ್ಟಾರ್ಥ ಸಿದ್ಧಿಯಾಗಲಿದೆ. ಮುಂದಿನ ದಿನಗಳಲ್ಲಿಯೂ ಟ್ರಸ್ಟ್ ಮೂಲಕ ಸಮಾಜಮುಖಿ ಕಾರ್ಯ ಮಾಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಕ್ತಾಭಟ್ ನೇತೃತ್ವದಲ್ಲಿ ಸಾಮೂಹಿಕ ದುರ್ಗಾ ಕವಚ ಪಠಣ, ಗಾಯತ್ರಿ ವಿಶ್ವಕರ್ಮ ಭಜನಾ ಮಂಡಳಿಯ ಅನ್ನಪೂರ್ಣ ಕಾಳಚಾರ್ ನೇತೃತ್ವದಲ್ಲಿ ಭಜನೆ, ಕಾವ್ಯರಿಂದ ಗಾಯನ ಹಾಗೂ ಸನ್ಮತಿ ಅವರಿಂದ ಭರತ ನಾಟ್ಯ ಪ್ರದರ್ಶನ ನಡೆಯಿತು. ಟ್ರಸ್ಟ್ ನ ಕಾರ್ಯದರ್ಶಿ ರಾಧಾ ಎಂ. ಇತರರಿದ್ದರು. ನಿರೂಪಣೆಯನ್ನು ಪುರುಷೋತ್ತಮ್ ಹಾಗೂ ವಂದನಾರ್ಪಣೆಯನ್ನು ರಾಮಕೃಷ್ಣ ನಡೆಸಿಕೊಟ್ಟರು.

## ಉತ್ಸವ ಮೂರ್ತಿಯ ಮೆರವಣಿಗೆ:

ಸಮಾರಂಭದ ಹಿನ್ನೆಲೆಯಲ್ಲಿ ಪ್ರಮುಖ ರಸ್ತೆಗಳಲ್ಲಿ ದೊಡ್ಡಮ್ಮ ದೇವಿಯ ಉತ್ಸವ ಮೂರ್ತಿಯ ಮೆರವಣಿಗೆ ನಡೆಯಿತು. ಮೆರವಣಿಗೆಯಲ್ಲಿ ನೂರಾರು ಜನರು ಭಾಗವಹಿಸಿದ್ದರು. ಹಾಗೆಯೇ ದೊಡ್ಡಮ್ಮ ದೇವಾಲಯದಲ್ಲಿ ತೊಟ್ಟಿಲು ಶಾಸ್ತ್ರ ನೆರವೇರಿತು. ಸುಮಾರು 10 ಕ್ಕೂ ಹೆಚ್ಚು ಮಕ್ಕಳಿಗೆ ನಾಮಕರಣ ನಡೆಸಲಾಯಿತು. ಇದೇ ವೇಳೆ ಮಹಾಶಕ್ತಿ ವಾರ್ಷಿಕ ವಿಶೇಷ 2 ನೇ ಸಂಚಿಕೆ ಬಿಡುಗಡೆ ಮಾಡಲಾಯಿತು.

# ಕರವೇ ಸ್ವಾಭಿಮಾನಿ ಬಣಕ್ಕೆ ನೂತನ ತಾಲೂಕು ಅಧ್ಯಕ್ಷರ ನೇಮಕ

**ಶಿವಮೊಗ್ಗ :** ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ನೂತನ ಸಾಗರ ತಾಲೂಕು ಘಟಕದ ಅಧ್ಯಕ್ಷರನ್ನಾಗಿ ಜನಾರ್ಧನ್ ಪೂಜಾರಿ ಹಾಗೂ ಉಪ ಅಧ್ಯಕ್ಷರನ್ನಾಗಿ ಅರುಣ್ ಕುಮಾರ್ ಪಾಳೆಗಾರ್ ಅವರನ್ನು ರಾಜ್ಯಾಧ್ಯಕ್ಷರ ಆದೇಶದ ಮೇರೆಗೆ ಸರ್ವಾನು ಮತದಿಂದ ಜಿಲ್ಲಾ ಘಟಕ ಆಯ್ಕೆ ಮಾಡಿದೆ ಇವರಿಗೆ ನಾಡು ನುಡಿ ನೆಲ ಜಲ ಭಾಷೆ ರೈತ ಪರ ವಿದ್ಯಾರ್ಥಿಪರ ಶೋಷಿತರ ಪರ ಧನಿಯಾಗಿರುವಂತೆ ಆದೇಶ ನೀಡಲಾಗಿದೆ ತಮ್ಮ ಅಧೀನ ಪದಾಧಿಕಾರಿಗಳ ಆಯ್ಕೆ ಅಧಿಕಾರ ಹೊಂದಿದ್ದು ಸಂಘಟನೆಗೆ ಯಾವುದೇ ದಕ್ಕೆ ಬರದಂತೆ ಕಾರ್ಯ ನಿರ್ವಹಿಸಬೇಕೆಂದು ಸಂಘಟನೆ ಆಶಿಸುತ್ತದೆ ಈ ಸಂದರ್ಭದಲ್ಲಿ ನೂತನ ಜಿಲ್ಲಾ ಪದಾಧಿಕಾರಿಗಳ ಆಯ್ಕೆ ನಡೆಯಿತು ಜಿಲ್ಲಾ ಕಾರ್ಯಾಧ್ಯಕ್ಷ ರಾಗಿ ಉಮೇಶ್ ಗದ್ದೆ ಮನೆ ಹಾಗೂ ಜಿಲ್ಲಾ ಉಪಾಧ್ಯಕ್ಷರಾಗಿ

ಗಂಗಾಧರ್ ಎಸ್ ಜಿಲ್ಲಾ ಯುವ ಘಟಕದ ಅಧ್ಯಕ್ಷರಾಗಿ ಸಂತೋಷ್ ಫ್ರಾಂಕ್ಲಿನ್ ಹಾಗೂ ಗ್ರಾಮಾಂತರ ಅಧ್ಯಕ್ಷರಾಗಿ ಮಂಜುನಾಥ್ ಹೆಚ್ ಎನ್ ಹಾಗೂ ಮಹಿಳಾ ಜಿಲ್ಲಾ ಘಟಕದ ಕಾರ್ಯ ಅಧ್ಯಕ್ಷರಾಗಿ ವೀಣಾ. ಎಚ್ ಉಪಾಧ್ಯಕ್ಷರಾಗಿ ಪದ್ಮ ಎನ್ ಹಾಗೂ ಮಾಲತಿ ಟಿ ಜಿಲ್ಲಾ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಆರತಿ ತಿವಾರಿ ಜಿಲ್ಲಾ ಸಂಘಟನಾ ಕಾರ್ಯದರ್ಶಿಯಾಗಿ ಜ್ಯೋತಿ ಎನ್. ಇವರುಗಳನ್ನು ಆಯ್ಕೆ ಮಾಡಲಾಯಿತು



ಈ ಸಂದರ್ಭದಲ್ಲಿ ಕನ್ನಡ ರಾಜ್ಯೋತ್ಸವಕ್ಕೆ ಸಂಬಂಧಪಟ್ಟಂತೆ ಪೂರ್ವಭಾವಿ ಸಭೆಯನ್ನು ಸಹ ನಡೆಸಲಾಯಿತು

ಹಾಗೂ ಸದಸ್ಯತ್ವ ಅಭಿಯಾನವನ್ನು ಸಹ ಮಾಡಲಾಯಿತು ಈ ಸಂದರ್ಭದಲ್ಲಿ ಕರವೇ ಸ್ವಾಭಿಮಾನಿ ಬಣದ ಜಿಲ್ಲಾಧ್ಯಕ್ಷ ಕಿರಣ್ ಕುಮಾರ್ ಎಚ್ ಎಸ್ ಹಾಗೂ ಮಹಿಳಾ ಘಟಕದ ಅಧ್ಯಕ್ಷರಾದ ಕವಿತಾ ಸಿ ಪತ್ರಿಕಾ ಪ್ರಚಾರ ಸಮಿತಿ ಅಧ್ಯಕ್ಷರಾದ ಮಾಲತೇಶ್ ನಗರ ಅಧ್ಯಕ್ಷರಾದ ಜೀವನ್ ಸಭೆಯಲ್ಲಿ ಮಾಧ್ಯಮ ಸಲಹೆಗಾರ ಅನಿಲ್ ಕುಮಾರ್ ಜಿಲ್ಲಾ ಕಾರ್ಯದರ್ಶಿ ರಾಮು. ನಾಗರಾಜ್ ಸಾಧಿಕ್ ನೂರುಲ್ಲಾ ಪ್ರವೀಣ್ ಕುಮಾರ್ ರಾಮಣ್ಣ ಟಾಟಾ ಎಸ್ . ಪ್ರದೀಪ್ ಕಾಂತಾ ರಾಜ್ ಮುಂತಾದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು

## ಅ.10 ರಂದು ನಗರದಲ್ಲಿ ಕಲಾ ಪ್ರತಿಭೋತ್ಸವ

**ಚಿಕ್ಕಮಗಳೂರು:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮಕ್ಕಳು ಮತ್ತು ಯುವಜನರ ಕಲಾ ಪ್ರತಿಭೆಯನ್ನು ಗುರುತಿಸಿ ಅವರಿಗೆ ಉತ್ತೇಜನ ನೀಡುವ ಸಲುವಾಗಿ ಹಾಗೂ ಅವರ ಕಲಾನೈಪುಣ್ಯವನ್ನು ವೃದ್ಧಿಗೊಳಿಸುವಂತೆ ಮಾಡಲು ಕಲಾ ಪ್ರತಿಭೋತ್ಸವವನ್ನು ನಗರದ ಕುವೆಂಪು ಕಲಾಮಂದಿರದಲ್ಲಿ ಜಿಲ್ಲಾ ಮಟ್ಟದ ಕಲಾ ಪ್ರತಿಭೋತ್ಸವವನ್ನು ಆಯೋಜಿಸಲಾಗಿದೆ.ಈ ಸ್ಪರ್ಧೆಯನ್ನು ವಯಸ್ಸಿಗೆ ಅನುಗುಣವಾಗಿ ಬಾಲಪ್ರತಿಭೆ, ಕಿಶೋರ ಪ್ರತಿಭೆ ಹಾಗೂ ಯುವ ಪ್ರತಿಭೆ ಎಂಬ ಮೂರು ವಿಭಾಗಗಳಲ್ಲಿ ನಡೆಸಲಾಗುತ್ತಿದ್ದು, ಭಾಗವಹಿಸುವವರು ಬಿಳಿ ಹಾಳೆಯಲ್ಲಿ ತಾವು ಸ್ಪರ್ಧಿಸುವ ಪ್ರಕಾರ ಹಾಗೂ ಜನ್ಮ ದಿನಾಂಕಕ್ಕೆ ಸಂಬಂಧಿಸಿದ ದಾಖಲೆಯನ್ನು ಲಗತ್ತಿಸಿ ಅಕ್ಟೋಬರ್ 10ರ ಸಂಜೆ 5.30ರೊಳಗೆ ತಲುಪುವಂತೆ ಖುದ್ದಾಗಿ ಆಗಲಿ, ಅಂಚೆ ಮೂಲಕವಾಗಿ ಆಗಲಿ ಕಳುಹಿಸಬೇಕು.ಬಾಲ ಪ್ರತಿಭೆ ವಿಭಾಗದಲ್ಲಿ ಶಾಸ್ತ್ರೀಯ ನೃತ್ಯ, ಜನಪದ ಗೀತೆ, ಚಿತ್ರಕಲೆ, ಕರ್ನಾಟಕ/ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ ಹಾಗೂ ಸುಗಮ ಸಂಗೀತ ಪ್ರಕಾರಗಳಿದ್ದು, ಕಿಶೋರ ಪ್ರತಿಭೆಯಲ್ಲಿ ಚಿತ್ರಕಲೆ, ಕರ್ನಾಟಕ/ ಹಿಂದೂಸ್ತಾನಿ ಸಂಗೀತ, ಶಾಸ್ತ್ರೀಯ ನೃತ್ಯ, ಜನಪದ ಗೀತೆ, ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ ಹಾಗೂ ಸುಗಮ ಸಂಗೀತ ಪ್ರಕಾರಗಳಿವೆ. ಯುವ ಪ್ರತಿಭೆ ವಿಭಾಗದಲ್ಲಿ ಚಿತ್ರಕಲೆ, ಕರ್ನಾಟಕ/ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ನನ್ನ ಮೆಚ್ಚಿನ ಸಾಹಿತಿ ಆಶುಭಾಷಣ, ಶಾಸ್ತ್ರೀಯ ನೃತ್ಯ, ನಾಟಕ (ಸಮೂಹ ಸ್ಪರ್ಧೆ), ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ ಹಾಗೂ ಸುಗಮ ಸಂಗೀತ ಪ್ರಕಾರಗಳಿವೆ. ಹೆಚ್ಚಿನ ಮಾಹಿತಿಗೆ 08262-298172 ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಆಚರಣೆ

# ಗಾಂಧೀ ಬದುಕೇ ನಮಗೆ ದಾರಿದೀಪ: ಎಡಿಸಿ ಚಂದ್ರಯ್ಯ

**ರಾಮನಗರ:** ಸರಳವಾಗಿ ಬದುಕಿದ, ಬೇರೊಬ್ಬರಿಗೆ ನೋವು ಕೊಡದಂತೆ ಜೀವನ ನಡೆಸಿದ ಮಹಾತ್ಮ ಗಾಂಧೀಜಿ ಅವರ ಬದುಕು ನಮಗೆ ದಾರಿದೀಪ ಎಂದು ಅಪರ ಜಿಲ್ಲಾಧಿಕಾರಿ ಚಂದ್ರಯ್ಯ ಆರ್ ಅವರು ಬಣ್ಣಿಸಿದರು.

ಅವರು ಅ.2ರ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 156ನೇ ಜಯಂತಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ 121ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಾವು ನಮ್ಮ ಕುಟುಂಬದ ಶ್ರೇಯೋಭಿವೃದ್ಧಿಗೆ ಯೋಚಿಸುತ್ತೇವೆ, ಆದರೆ ಮಹಾತ್ಮ ಗಾಂಧೀಜಿ ಅವರು ದೇಶದ ಬಗ್ಗೆ, ದೇಶವನ್ನು ಪರಕೀಯರ ದಾಸ್ಯದಿಂದ ವಿಮೋಚಿಸುವ ಬಗ್ಗೆ ಚಿಂತಿಸಿ ಅಹಿಂಸೆ ಸತ್ಯಾಗ್ರಹಗಳ ಮೂಲಕ ಹೋರಾಡಿದ ಮಹಾನುಭಾವ ಅವರಲ್ಲಿದ್ದ ವಿಶಾಲ ಮನೋಭಾವವನ್ನು ನಾವು ಬೆಳೆಸಿಕೊಳ್ಳಬೇಕು. ಅವರೊಬ್ಬ ತತ್ವಜ್ಞಾನಿ, ಅರ್ಥಶಾಸ್ತ್ರಜ್ಞ ಹಾಗೂ ರಾಜಕೀಯ ತಜ್ಞ, ವಿವಿಧ ಕ್ಷೇತ್ರಗಳಲ್ಲೂ ಅನುಭವವಿದ್ದ



ಮುತ್ಸದಿ, ಅವರ ಜೀವನ ಚರಿತ್ರೆಯೇನಮಗೆ ಮಾರ್ಗದರ್ಶಕ ಆದ ಕಾರಣ ಅವರು ದೇಶಕ್ಕೆ ನೀಡಿದ ಕೊಡುಗೆಗಳನ್ನು ಸದಾ ನೆನಪಿನಲ್ಲಿಟ್ಟುಕೊಂಡು ಅವುಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಮಹಾತ್ಮರ ಜನ್ಮ ದಿನವನ್ನು ಅಂತರಾಷ್ಟ್ರೀಯ ಅಹಿಂಸಾ ದಿನವೆಂದು ಆಚರಿಸಲಾಗುತ್ತಿದೆ, ಅಂತಹವರ ಬಗ್ಗೆ ಹೊಸದಾಗಿ ಹೇಳುವಂತಹ ಯಾವುದೇ ವಿಚಾರಗಳಿಲ್ಲ. ಶಿಕ್ಷಣದ ಆರಂಭದಿಂದಲೂ ಅವರ ಜೀವನ ಚರಿತ್ರೆಗಳ ಕುರಿತು ಪಠ್ಯ ಪುಸ್ತಕಗಳಲ್ಲಿವೆ, ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರು ರಾಷ್ಟ್ರಕ್ಕೆ ನೀಡಿದ ಕೊಡುಗೆಗಳಲ್ಲಿ ನಾವು ಶೇ. 5ರಷ್ಟರನ್ನಾದರೂ ದೇಶಕ್ಕೆ ನೀಡಲು ಸಿದ್ಧರಾಗಬೇಕು ಎಂದವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಭಾಗವಹಿಸಿದ್ದ ಚನ್ನಪಟ್ಟಣದ ಬಾಲಕೀಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಧ್ಯಾಪಕರಾದ ಉಮೇಶ್ ಅವರು ಮಾತನಾಡಿ, ಮೋಹನ್ ದಾಸ್ ಕರಮಚಂದ್ ಗಾಂಧಿ ಅವರು ಭಾರತ ಭವಿಷ್ಯದ ಭೂಪಟದಲ್ಲಿ ಅಳಿಸಲಾಗದ ಹೆಜ್ಜೆ ಗುರುತು, ಪ್ರಜ್ವಲಿಸುವ ಸೂರ್ಯ. ಅವರು 1869 ಅಕ್ಟೋಬರ್ 2ರಂದು ಜನಿಸಿದರು. ಸ್ವತಂತ್ರ ಭಾರತದ ಎರಡನೇ ಪ್ರಧಾನಿ, ಸರಳತೆ ಸಜ್ಜನಿಕೆಗೆ ಹೆಸರಾದ ಲಾಲ್ ಬಹುದ್ದೂರ್ ಶಾಸ್ತ್ರಿ ಅವರು 1904 ಅಕ್ಟೋಬರ್ 2ರಂದು ಜನಿಸಿದರು, ಗಾಂಧೀಜಿಯವರಿಗೆ ಸಣ್ಣವಯಸಿನಲ್ಲಿಯೇ ಶ್ರವಣನ ಪಿತೃಭಕ್ತಿ ಹಾಗೂ ಸತ್ಯ ಹರಿಶ್ಚಂದ್ರನ ಸತ್ಯಸಂದತೆ ಗಾಢ ಪರಿಣಾಮ ಬೀರಿದವು. ಅವರು ಮಾನವರ ಒಳ್ಳೆಯ ಸ್ವಭಾವವನ್ನು ಅರಿತು ಅವರ ಹೃದಯವನ್ನು ಸೇರುವುದೇ ನಿಜವಾದ ವಕೀಲರ ವೃತ್ತಿ ಎಂದು ಮನಗಂಡಿದ್ದರು.

1891ರಲ್ಲಿ ಬ್ಯಾರಿಸ್ಟರ್ ಪಡೆದ ನಂತರ 1893ರಲ್ಲಿ ದಕ್ಷಿಣ ಆಫ್ರಿಕಾದ ಡರ್ಬಾನ್‌ನಿಂದ ಪ್ರಿಟೋರಿಯಾಗೆ ರೈಲಿನ ಮೊದಲ ದರ್ಜೆ ಬೋಗಿಯಲ್ಲಿ ಪ್ರಯಾಣಿಸುತ್ತಿದ್ದಾಗ ಪೀಟರ್ಸ್ ಬರ್ಗ್‌ನಲ್ಲಿ ಬಿಳಿಯೊರ್ವ ಅವರನ್ನು ಕಪ್ಪು ವರ್ಣದವರೆಂದು, ಮೂರನೇ ದರ್ಜೆ ಬೋಗಿಯಲ್ಲಿ ಪ್ರಯಾಣಿಸಬೇಕೆಂದು ಅವರ ಸಾಮಗ್ರಿಗಳನ್ನು ಹೊರಗೆಸೆದು ಅವಮಾನ ಮಾಡುತ್ತಾನೆ, ಮೊದಲ ಬಾರಿಗೆ ಗಾಂಧೀಜಿಯವರಿಗೆ ವರ್ಣಭೇದ ನೀತಿಯ ಬಿಸಿ ತಟ್ಟುತ್ತದೆ, ಇದರ ಪರಿಣಾಮ

ಗಾಂಧೀಜಿಯವರು ಮೊದಲ ಬಾರಿಗೆ ವರ್ಣಭೇದ ನೀತಿಯ ವಿರುದ್ಧ ದಕ್ಷಿಣ ಆಫ್ರಿಕಾದಲ್ಲಿ ಹೋರಾಟ ನಡೆಸುವ ಮೂಲಕ ಅವರ ಹೋರಾಟದ ಜೀವನ ಪ್ರಾರಂಭವಾಯಿತು ಎಂದು ಹೇಳಿದರು.

ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಮಂಜುನಾಥ್, ಆರೋಗ್ಯ ಇಲಾಖೆಯ ಡಾ. ಕುಮಾರ್ ಸೇರಿದಂತೆ ಹಲವು ಗಣ್ಯರು ಮಹಾತ್ಮಾ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಗೌರವ ನಮನ ಸಲ್ಲಿಸಿದರು.

ವಿದುಷಿ ಎಸ್.ಎನ್. ರಮಣಿ, ವಿದ್ವಾನ್ ಎಸ್.ಎನ್. ಶ್ರೀನಿವಾಸ ಪ್ರಸನ್ನ, ಪ್ರಣವ, ವಿದ್ಯ, ಜಯಲಕ್ಷ್ಮೀ ಹಾಗೂ ಜಗದೀಶ್ ಅವರ ತಂಡ ಸರ್ವಧರ್ಮ ಪ್ರಾರ್ಥನೆ ಮಾಡಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ರವಿರಾಜ್ ಎಚ್.ಜಿ ಅವರು ಸ್ವಾಗತಿಸಿದರು. ಶ್ರೀನಿವಾಸ್ ನಿರೂಪಿಸಿದರು.

ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಇತರರು ಉಪಸ್ಥಿತರಿದ್ದರು.

# ಗಾಂಧೀಜಿಯವರು ಅಹಿಂಸೆ ಮತ್ತು ಸತ್ಯಾಗ್ರಹದಿಂದ ದೇಶಕ್ಕೆ ಸ್ವಾತಂತ್ರ ತಂದುಕೊಟ್ಟ ಮಹಾತ್ಮರು

**ಗದಗ :** ಮಹಾತ್ಮ ಗಾಂಧೀಜಿಯವರು ಅಹಿಂಸೆ ಮತ್ತು ಸತ್ಯಾಗ್ರಹದ ಅಸ್ತ್ರದಿಂದ ದೇಶಕ್ಕೆ ಸ್ವಾತಂತ್ರ ತಂದುಕೊಟ್ಟ ಮಹಾತ್ಮರು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಬಣ್ಣಿಸಿದರು. .

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರುಗಳ ಸಹಯೋಗದಲ್ಲಿ ಮಹಾತ್ಮ ಗಾಂಧೀಜಿಯವರ 156 ನೇ ಜಯಂತಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರೀಜಿ ಯವರ 121ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗಾಂಧೀಜಿಯವರು ಇಂಗ್ಲೆಂಡಿನಲ್ಲಿ ಕಾನೂನು ಅಧ್ಯಯನ ಮಾಡಿ ನಂತರ ದಕ್ಷಿಣ ಆಫ್ರಿಕಾದಲ್ಲಿ ವಕೀಲ ವೃತ್ತಿಯಲ್ಲಿದ್ದಾಗ



ಸವರ್ಣೀಯರ ದಬ್ಬಾಳಿಕೆ ಹಾಗೂ ಅಸ್ಪಶ್ಯತೆಯನ್ನು ಕಂಡು ಮರುಗಿದರು. ಭಾರತೀಯ ರಾಷ್ಟ್ರೀಯ ಕಾಂಗೆಸ್‌ನ ನಾಯಕತ್ವ ವಹಿಸಿದ ಬಳಿಕೆ ಬಡತನ ನಿವಾರಣೆ, ಅಸ್ಪ್ರಶ್ಯತೆ ವಿರುದ್ದ ಹೋರಾಡಿದರು. ತಮ್ಮ ದೇಶದಲ್ಲಿಯೇ ಇರುವ ಸಾಮಾಜಿಕ ಸಮಸ್ಯೆಗಳಾದ ಅಸ್ಪಶ್ಯತೆ ಹಾಗೂ ಪರಕೀಯರ ದಬ್ಬಾಳಿಕೆ ವಿರುದ್ಧ ಹೋರಾಟ ನಡೆಸಿದರು.

ವಿಶ್ವವಿದ್ಯಾಲಯದ ಕನ್ನಡ ಸಹಾಯಕ ಪ್ರಾಧ್ಯಾಪಕ ಚಂದ್ರಪ್ಪ ಬಾರಂಗಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಬಸನಗೌಡ್ರ ಕೋಟೂರ ಸೇರಿದಂತೆ ಶಾಲಾ ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು ಹಾಜರಿದ್ದರು.

## ಕ್ಯಾಂಪಸ್ ನೇಮಕಾತಿಯಲ್ಲಿ ಬಿಐಇಟಿ ವಿದ್ಯಾರ್ಥಿಗಳ ಸಾಧನೆ

**ದಾವಣಗೆರೆ:** ನಗರದ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪ್ರಸ್ತುತ ಶೈಕ್ಷಣಿಕ ವರ್ಷದ ಕ್ಯಾಂಪಸ್ ನೇಮಕಾತಿಯಲ್ಲಿ ಶ್ರೇಷ್ಠ ಸಾಧನೆಗೈದಿದ್ದಾರೆ.
ಬೆಂಗಳೂರಿನ ಐಬಿಎಂ ಸಂಸ್ಥೆಯ ಕ್ಯಾಂಪಸ್ ಸಂದರ್ಶನದಲ್ಲಿ ಕಾಲೇಜಿನ ಒಟ್ಟು ಏಳು ವಿದ್ಯಾರ್ಥಿಗಳು, ಕಂಪ್ಯೂಟರ್ ಸೈನ್ಸ್ ವಿಭಾಗದ ಅಭಿಷೇಕ್ ಎಂ ಕಲಘಟಗಿ ಮತ್ತು ತನುಶ್ರೀ ಎಂ ಪೂಜಾರ್, ಕಂಪ್ಯೂಟರ್ ಸೈನ್ಸ್ ಡೇಟಾ ಸೈನ್ಸ್ ವಿಭಾಗದ ಬಿ. ವಿಜಯಲಕ್ಷ್ಮೀ, ಎಂ ಎಮ್. ದರ್ಶನ್ ಕುಮಾರ್, ಎಂ. ಸೇಜಲ್ ಹಾಗೂ ಕಂಪ್ಯೂಟರ್ ಸೈನ್ಸ್ ಬಿಸಿನೆಸ್ ಸಿಸ್ಟಮ್ ವಿಭಾಗದ ಪೂರ್ವಿ ಎಸ್ ಹೆಬ್ಬಾಳ್ ಮತ್ತು ಎಂ ಎನ್ ವಚನ್ ಇವರುಗಳು ವಾರ್ಷಿಕ 4.5 ಲಕ್ಷ ವೇತನ ಮತ್ತು ಇದರ ಜೊತೆಗೆ ಸಂಸ್ಥೆ ಸೇರುವ ಮುನ್ನ 25 ಸಾವಿರ ಸ್ವಾಗತ ಬೋನಸ್‌ನೊಂದಿಗೆ ಆಯ್ಕೆಯಾಗಿದ್ದಾರೆ ಎಂದು ಕಾಲೇಜಿನ ಸಾರ್ವಜನಿಕ ಸಂಪರ್ಕ ಡೀನ್ ಡಾ. ಸಿ ಎಂ ಕಲ್ಲೇರಪ್ಪ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೂರ್ವಿಕ್ ಎಸ್ ಗೌಡಗೆ ಕಂಚು



**ಚಿಕ್ಕಮಗಳೂರು:** 13ನೇ ನ್ಯಾಷನಲ್ ಪೆಂಕಾಕ್ ಶೀಲಾತ್ ಕ್ರೀಡಾಕೂಟ ಕೊಪ್ಪಳ ಜಿಲ್ಲೆಯಲ್ಲಿ ನಡೆದಿದ್ದು ಈ ಕ್ರೀಡಾಕೂಟದಲ್ಲಿ ನಗರದ ಹೌಸಿಂಗ್ ಬೋರ್ಡ್ ನಿವಾಸಿ ಸಂತೋಷ್ ಮತ್ತು ರಮ್ಯಾ ರವರ ಪುತ್ರ ಕಂಚಿನ ಪದಕವನ್ನು ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಈ ವಿದ್ಯಾರ್ಥಿ ಶಾಲೆ ಇನ್ಫೆಂಟ್ ಜೀಸಸ್ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದು ಇವರ ಈ ಸಾಧನೆಗೆ ಪ್ರಾಂಶುಪಾಲರು ಹಾಗೂ ತರಬೇತುದಾರರಾದ ಯಶವಂತರವರು ಅಭಿನಂದನೆ ಸಲ್ಲಿಸಿದ್ದಾರೆ

## ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ನೇರ ನೇಮಕಾತಿ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿ ಅನ್ವಯವಾಗುವಂತೆ 3 ವರ್ಷಗಳ ಸಡಿಲಿಕೆ

**ಬೆಂಗಳೂರು:** ರಾಜ್ಯ ಸರ್ಕಾರದ ಎಲ್ಲಾ ನಾಗರಿಕ ಸೇವಾ ಹುದ್ದೆಗಳ ನೇಮಕಾತಿಯಲ್ಲಿ ಎಲ್ಲ ಪ್ರವರ್ಗಗಳ ಅಭ್ಯರ್ಥಿಗಳಿಗೆ ಮೂರು ವರ್ಷಗಳ ವಯೋಮಿತಿ ಸಡಿಲಿಕೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಹಲವಾರು ಜನಪ್ರತಿನಿಧಿಗಳು,ಸಂಘ ಸಂಸ್ಥೆಗಳು ಸಲ್ಲಿಸಿದ ಮನವಿ ಪರಿಗಣಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅನುಮೋದನೆಯೊಂದಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇಂದು ಆದೇಶ ಪ್ರಕಟಿಸಿದೆ. ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ಜಾರಿಯಾಗುವವರೆಗೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಅಥವಾ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ಮುಂದಿನ ಆದೇಶದವರೆವಿಗೂ ಹೊರಡಿಸಬಾರದೆಂದು ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿತ್ತು.ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ್ ದಾಸ್ ಆಯೋಗದ ವರದಿಯನ್ನು ಅಗತ್ಯ ಮಾರ್ಪಾಡುಗಳೊಂದಿಗೆ ಅಂಗೀಕರಿಸಿ, ಪರಿಶಿಷ್ಟ ಜಾತಿಯಲ್ಲಿರುವ 101 ಜಾತಿಗಳನ್ನು 5 ಪ್ರವರ್ಗಗಳ ಬದಲಾಗಿ ಪ್ರವರ್ಗ–ಎ, ಪ್ರವರ್ಗ–ಬಿ ಮತ್ತು ಪ್ರವರ್ಗ–ಸಿ ಎಂದು 3 ಪ್ರವರ್ಗಗಳಾಗಿ ವರ್ಗೀಕರಿಸಿ, ಶಿಕ್ಷಣ ಮತ್ತು ಉದ್ಯೋಗದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಶೇಕಡ 17 ರಷ್ಟು ಮೀಸಲಾತಿಯನ್ನು ಪ್ರವರ್ಗ–ಎರಲ್ಲಿನ ಸಮುದಾಯಗಳಿಗೆ ಶೇಕಡ 6 ರಷ್ಟು, ಪ್ರವರ್ಗ–ಬಿ ರಲ್ಲಿನ ಸಮುದಾಯಗಳಿಗೆ ಶೇಕಡ 6 ರಷ್ಟು ಮತ್ತು ಪ್ರವರ್ಗ – ಸಿ ರಲ್ಲಿನ ಸಮುದಾಯಗಳಿಗೆ ಶೇಕಡ 5 ರಷ್ಟು ನಿಗದಿಪಡಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಲಾಗಿರುತ್ತದೆ. ಈ ಹಿಂದೆ ನೇರ ನೇಮಕಾತಿ ಪ್ರಕ್ರಿಯೆಯಲ್ಲಿ ಆಯ್ಕೆ ಬಯಸಿ ಅರ್ಜಿಗಳನ್ನು ಸಲ್ಲಿಸಿ ಭಾಗವಹಿಸುವ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಗೆ ಕ್ರಮವಾಗಿ 2 ವರ್ಷಗಳ ಸಡಿಲಿಕೆ ನೀಡಲು ತೀರ್ಮಾನಿಸಲಾಗಿರುತ್ತು.ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (ಛಿ ಚಿ ಂಟಿಜ–ಣಟಜ ಟಜಚಿಣಡಿಜ) 2 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿತ್ತು. ಆದರೆ ಹಲವಾರು ಜನಪ್ರತಿನಿದಿಗಳು ಮತ್ತು ಸಂಘ ಸಂಸ್ಥೆಗಳು ಮನವಿ ಸಲ್ಲಿಸಿ ರಾಜ್ಯ ಸಿವಿಲ್ ಸೇವೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆಯನ್ನು ನೀಡುವಂತೆ ಕೋರಿದ್ದರು.*ಸದರಿ ಮನವಿಗಳನ್ನು ಸರ್ಕಾರವು ಪರಿಶೀಲಿಸಿ ಒಂದು ಬಾರಿಗೆ ಮಾತ್ರ ವಯೋಮಿತಿಯಲ್ಲಿ 3 ವರ್ಷಗಳ ಸಡಿಲಿಕೆ ನೀಡಲು* ತೀರ್ಮಾನಿಸಿ, ದಿನಾಂಕ: 06.09.2025ರ ಆದೇಶದ ಹಿಂಪಡೆದು, ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ 31–12–2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 3 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಸೇವಾ ನಿಯಮಗಳು) ಆದೇಶ ಹೊರಡಿಸಿದೆ.

## ಜಿಲ್ಲಾ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ: ಫಲಿತಾಂಶ ಪ್ರಕಟ

**ರಾಮನಗರ:** ರಾಷ್ಟ್ರಪಿತ ಮಹಾತ್ಮ ಗಾಂಧೀ ಜಯಂತಿ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಜಿಲ್ಲಾ ಮಟ್ಟದಲ್ಲಿ ಪ್ರೌಢಶಾಲೆ, ಪದವಿ ಪೂರ್ವ ಮತ್ತು ಪದವಿ/ಸ್ನಾತಕೋತ್ತರ ವಿಭಾಗದ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಲಾದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ವಿವಿಧ ವಿಭಾಗಗಳಲ್ಲಿ ತಲಾ 3 ವಿದ್ಯಾರ್ಥಿಗಳನ್ನು ಪ್ರಶಸ್ತಿಗಾಗಿ ಆಯ್ಕೆ ಮಾಡಲಾಗಿದೆ.ಬಾಪೂಜಿ ಪ್ರಬಂಧ ಸ್ಪರ್ಧೆಯ 3 ವಿಭಾಗಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳ ವಿವರ:

ಪ್ರೌಢಶಾಲಾ ವಿಭಾಗ: ಮಾಗಡಿ ತಾಲ್ಲೂಕಿನ ಸಂಕೀಘಟ್ಟದ ಸರ್ಕಾರಿ ಪ್ರೌಢಶಾಲೆಯ ಯಶಸ್ವಿನಿ ಎಸ್.ಎಲ್. ಪ್ರಥಮ ಸ್ಥಾನ, ಮಾಗಡಿ ಟೌನಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾಶ್ರೀ ಎಚ್.ಎನ್ ದ್ವಿತೀಯ, ರಾಮನಗರ ಟೌನಿನ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಹೇಮಶ್ರೀ ತೃತೀಯ ಸ್ಥಾನ ಪಡೆದಿರುತ್ತಾರೆ.ಪದವಿ ಪೂರ್ವ ವಿಭಾಗ: ಚನ್ನಪಟ್ಟಣ ತಾಲ್ಲೂಕಿನ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಲಿಖಿತ ಎಸ್. ಪ್ರಥಮ ಸ್ಥಾನ, ಹಾರೋಹಳ್ಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಲೇಖನಗಂಗ ದ್ವಿತೀಯ ಸ್ಥಾನ, ಬಿಡದಿಯ ಶ್ರೀ ಬಸವೇಶ್ವರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಸಿಂಚನ ತೃತೀಯ ಸ್ಥಾನ ಪಡೆದಿರುತ್ತಾರೆ. ಪದವಿ/ಸ್ನಾತಕೋತ್ತರ ಪದವಿ ವಿಭಾಗ: ರಾಮನಗರದ ಗೌಸಿಯಾ ಇಂಜಿನಿಯರಿಂಗ್ ಕಾಲೇಜಿನ ದೇವಿಕಾ ಎಚ್.ಕೆ. ಪ್ರಥಮ ಸ್ಥಾನ, ರಾಮನಗರದ ಗೌಸಿಯಾ ಇಂಜಿನಿಯರಿಂಗ್ ಕಾಲೇಜಿನ ವರ್ಷಿತಾ ದ್ವಿತೀಯ ಸ್ಥಾನ ಹಾಗೂ ರಾಮನಗರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ವಿಶ್ರುತ ತೃತೀಯ ಸ್ಥಾನ ಗಳಿಸಿರುತ್ತಾರೆ.

ಈ ಮೂರು ವಿಭಾಗಗಳಲ್ಲಿ ಆಯ್ಕೆಯಾಗಿರುವ ವಿದ್ಯಾರ್ಥಿಗಳಿಗೆ ಅ. 2 ರಂದು ರಾಷ್ಟ್ರಪಿತ ಮಹಾತ್ಮ ಗಾಂಧಿ ಜಯಂತಿಯಂದು ನಗದು ಬಹುಮಾನ ಹಾಗೂ ಪ್ರಮಾಣ ಪತ್ರವನ್ನು ವಿತರಿಸಲಾಗುವುದು.

ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾಗಿರುವ ಪ್ರಬಂಧಗಳನ್ನು ರಾಜ್ಯ ಮಟ್ಟದ ಆಯ್ಕೆ ಸ್ಪರ್ಧೆಗೆ ಕೂಡ ಕಳುಹಿಸಲಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ರವಿರಾಜ್ ಎಚ್.ಜಿ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ಮಹಾತ್ಮಾ ಗಾಂಧೀಜಿ ಮತ್ತು ಲಾಲ್ ಬಹದ್ದೂರ್‌ಶಾಸ್ತ್ರೀ ಜಯಂತಿ ಆಚರಣೆ

# ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರೀ ಅವರ ಜೀವನ ಮೌಲ್ಯ ಅಳವಡಿಸಿಕೊಳ್ಳೋಣ

**ಬಳ್ಳಾರಿ:** ಮಹತ್ಮಾ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರೀ ಅವರು ನಮ್ಮ ದೇಶವು ಸದಾ ಗೌರವಿಸುವ ಎರಡು ಮೇರು ವ್ಯಕ್ತಿತ್ವಗಳು, ಇವರ ಸ್ಮರಣೆ ಇಂದಿನ ಕಾಲಘಟ್ಟದಲ್ಲಿ ಅಗತ್ಯವಿದೆ. ಅವರ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳೋಣ ಎಂದು ವಿಶ್ರೀಕೃ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ ಮುನಿರಾಜು ಅವರು ಹೇಳಿದರು.

ರಾಷ್ಟ್ರೀಯ ಸೇವಾ ಯೋಜನೆಯ ಸಹಯೋಗದಲ್ಲಿ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ಗುರುವಾರ ಆಚರಿಸಿದ ಮಹಾತ್ಮ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರೀ ಅವರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ವಿಶ್ವವಿದ್ಯಾಲಯದ ಕುಲಸಚಿವ ನಾಗರಾಜು ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಜೀವನವೇ ಒಂದು ಸಂದೇಶ ಆ ಸಂದೇಶವು ನಮಗೆಲ್ಲರಿಗೂ ಮಾದರಿಯಾಗಿದೆ. ಶಾಸ್ತ್ರೀಜಿಯವರ ಸರಳತೆಯನ್ನು ಅವರ ಜೀವನದ ಕೆಲವು ಘಟನೆಗಳನ್ನು ವಿವರಿಸುವ ಮೂಲಕ ಸ್ಮರಿಸಿದರು. ಆ ಮೂಲಕ ಸರಳತೆಯ ಮಹತ್ವವನ್ನು ಪ್ರತಿಯೊಬ್ಬರೂ



ಪಾಲಿಸಬೇಕು ಮತ್ತು ಅದರ ಮೌಲ್ಯವನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ವಿಶ್ವವಿದ್ಯಾಲಯದ ಆಂಗ್ಲ ವಿಭಾಗದ ಪ್ರಾಧ್ಯಾಪಕ ಪ್ರೊ. ರಾಬರ್ಟ್ ಜೋಸ್ ಅವರು ಮಾತನಾಡಿ, ಗಾಂಧೀಜಿ ಮತ್ತು ಶಾಸ್ತ್ರೀಜಿಯವರ ಜೀವನ ಮತ್ತು ಅವರು ಅನುಸರಿಸಿದ ಮಾರ್ಗಗಳನ್ನು ತಿಳಿದು ಅದನ್ನು ಪಾಲಿಸುವುದು ಇಂದಿನ ಯುವ ಪೀಳಿಗೆಯ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಎನ್‌ಎಸ್‌ಎಸ್ ಸಂಯೋಜನಾಧಿಕಾರಿ ಡಾ.ಕುಮಾರ್ ಕಾರ್ಯಕ್ರಮವನ್ನು ನಿರ್ವಹಿಸಿದರು. ಕಾರ್ಯಕ್ರಮದ ನಂತರ ಸಸಿ ನೆಡುವ ಕಾರ್ಯಕ್ರಮವನ್ನು ವಿಶ್ವವಿದ್ಯಾಲಯದಲ್ಲಿ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಎಲ್ಲಾ ವಿಭಾಗಗಳ ಮುಖ್ಯಸ್ಥರು, ಬೋಧಕರು ಮತ್ತು ಬೋಧಕೇತರ ವರ್ಗದವರು ಉಪಸ್ಥಿತರಿದ್ದರು.

## ಸತ್ತಂಗ ಪ್ರವಚನದಿಂದ ಮನಃ ಪರಿವರ್ತನೆ

**ಚಳ್ಳಕೆರೆ:** ಸಂಗದಿಂದ ಸಂಪಾದಿಸುವ ಭಕ್ತಿ ಬದುಕಿಗೆ ದೊಡ್ಡ ಶಕ್ತಿಯಾಗಿ ಕಾಪಾಡುತ್ತದೆ ಎಂದು ಶಾರದಾಶ್ರಮದ ಮಾತಾಜಿ ತ್ಯಾಗಮಯಿ ಹೇಳಿದರು. ನಗರದ ಲಯನ್ಸ್ ಕ್ಲಬ್‌ನಲ್ಲಿ ನವರಾತ್ರಿ ಪ್ರಯುಕ್ತ ಭಾನುವಾರ ಶಾರದಾಶ್ರಮದ ಭಕ್ತ ಮಂಡಳಿ ಆಯೋಜಿಸಿದ್ದ ಸತ್ತಂಗ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಇದು ಪ್ರವಚನ ರೂಪದಲ್ಲಿ ಮನಃ ಪರಿವರ್ತನೆ ಮಾಡುತ್ತದೆ ಎಂದರು.

ನವರಾತ್ರಿ ಪೂಜೆಯಲ್ಲಿ ದೇವಿಯನ್ನು ಶೈಲಪುತ್ರಿ, ಬ್ರಹ್ಮಚಾರಿಣಿ, ಚಂದ್ರಘಂಟ, ಕೂಷ್ಮಾಂಡಾ, ಸ್ಕಂದ ಮಾತೆ, ಕಾತ್ಯಾಯಿನಿ, ಕಾಲರಾತ್ರಿ, ಮಹಾಗೌರಿ, ಸಿದ್ದಿಧಾತ್ರಿಯಾಗಿ ಸ್ಮರಿಸಿ ಆರಾಧನೆ ಮಾಡುತ್ತೇವೆ. ಜತೆಗೆ ಮಹಾಕಾಳಿ, 'ಮಹಾಲಕ್ಷ್ಮಿ, ಮಹಾಸರಸ್ವತಿ ಎಂತಲೂ ಪೂಜಿಸುತ್ತೇವೆ. 10 ತಲೆ ರಾವಣನೆಂಬ ಅಸುರನನ್ನು ಶ್ರೀ ರಾಮಚಂದ್ರ ಸಂಹರಿಸಿದ ವಿಶೇಷ ದಿನವೆಂದು ವಿಜಯದಶಮಿಯಂದು ಪೂಜೆ ಸಲ್ಲಿಸುತ್ತೇವೆ ಎಂದು ತಿಳಿಸಿದರು. ಇದೇ ವೇಳೆ ಮಹಿಳಾ ಭಕ್ತರಿಂದ ಸಾಮೂಹಿಕವಾಗಿ ಶ್ರೀದೇವಿ ವಿಸ್ತುತಿ ಪಾರಾಯಣ ಮತ್ತು ದೇವಿ ಭಜನೆ ನಡೆಯಿತು

## ಇಬ್ಬರು ಕಳವು ಆರೋಪಿಗಳ ಬಂಧನ

**ಮೊಳಕಾಲ್ಮೂರು:** ಮನೆ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಆರೋಪಿಗಳಿಬ್ಬ ರನ್ನು ಪತ್ತೆ ಹಚ್ಚಿರುವ ಪೊಲೀಸರು ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಮೊಳಕಾಲ್ಮೂರಿನ ಹಲವಡೆ 2023ರಲ್ಲಿ ಹಗಲಿನಲ್ಲೇ ಮನೆಗೆ ನುಗ್ಗಿ ಚಿನ್ನಾಭರಣ, ನಗದು ಕಳವು ಮಾಡಿದ್ದ ಆರೋಪಿತರಾದ ಕೂಡ್ಲಿಗಿಯ ಚಿರತಗುಂಡ ಗ್ರಾಮದ ನಾಗರಾಜ, ಮುತ್ತಿಗಾರಹಳ್ಳಿಯ ರಾಜ ಎಂಬುವರನ್ನು ಬಂಧಿಸಿ 40 ಗ್ರಾಂ. ಬಂಗಾರ, 35 ಸಾವಿರ ರೂ. ನಗದು ವಶಪಡಿಸಿಕೊಂಡಿದ್ದಾರೆ.

ಆಯುಧ ಪೂಜೆಯ ಸಂದರ್ಭದಲ್ಲಿ ಸುರಕ್ಷಿತ ಸಾಧನೆಗಳ ಬಗ್ಗೆ ಜಾಗೃತಿ.

# ದ್ವಿಚಕ್ರವಾಹನ ಪೂಜೆಯ ಜೊತೆಗೆ ಹೆಲ್ಮೆಟ್ಟಿನ ಪೂಜೆಯು ನಡೆಯಲಿ

**ಚಿತ್ರದುರ್ಗ:** ಆಯುಧ ಪೂಜೆಯ ಸಂದರ್ಭದಲ್ಲಿ ದ್ವಿಚಕ್ರ ವಾಹನಗಳಿಗೆ ಪೂಜೆ ಮಾಡುವ ಸಂದರ್ಭದಲ್ಲಿ, ಸಾರ್ವಜನಿಕರು, ವಾಹನ ಸವಾರರು, ಕುಟುಂಬದ ಸದಸ್ಯರುಗಳು, ಹಿರಿಯರು, ಸುರಕ್ಷಿತ ಸಾಧನವಾದ ಹೆಲ್ಮೆಟ್ಟಿನ ಪೂಜೆಯನ್ನು ಸಹ ಮಾಡಿ, ಪ್ರಾಣ ರಕ್ಷಣೆಗೋಸ್ಕರನೇ ಆಯುದ ಪೂಜೆಯನ್ನ ನಮ್ಮ ಹಿರಿಯರು ಮಾಡುತ್ತಿದ್ದರು ಎಂಬ ಸಂದೇಶವನ್ನು ಜನರಿಗೆ, ಇತರರಿಗೆ ತಲುಪಿಸಲು ಈ ಹಬ್ಬವನ್ನ ಬಳಸಿಕೊಳ್ಳಬೇಕು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ಕರೆ ನೀಡಿದರು.

ಅವರು ಚಿತ್ರದುರ್ಗ ನಗರದ ಟೀಚರ್ಸ್ ಕಾಲೋನಿಯಲ್ಲಿರುವ ಅಮೂಲ್ಯ ಹೋಂಸ್ಟೇ ಮತ್ತು ಪಿಜಿನಲ್ಲಿ ನಡೆದ ಆಯುಧ ಪೂಜೆಯ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ, ವಸತಿಗೃಹದ ನಿವಾಸಿಗಳಿಗೆ, ಜಾಗೃತಿ ಮೂಡಿಸುತ್ತಾ ಮಾತನಾಡುತ್ತಿದ್ದರು.

ಯುವ ಜನಾಂಗ ಆಯುಧಪೂಜೆಯನ್ನ ಬರೀ ದ್ವಿಚಕ್ರ ವಾಹನಗಳಿಗೆ, ಹೂವಿನಿಂದ ಅಲಂಕಾರ ಮಾಡುವುದು, ಅದನ್ನ ನೀರಿಂದ ತೊಳೆಯುವುದು, ಪೂಜಾ ವಸ್ತುಗಳಿಂದ ಪೂಜೆ ಮಾಡುವುದು ಅಷ್ಟೇ ಎಂಬ ಭಾವನೆಯನ್ನು ಹೊಂದಿದ್ದಾರೆ, ಆದರೆ



ನಮ್ಮ ಹಿರಿಯರು ಆಯುಧ ಪೂಜೆಯನ್ನು ಮಾಡಿರುವ ಉದ್ದೇಶಗಳು, ಆಯುಧಗಳ ಜೊತೆ, ಯಂತ್ರಗಳ ಜೊತೆ ಹುಡುಗಾಟ ಬೇಡ, ಅವುಗಳನ್ನ ಸುರಕ್ಷಿತವಾಗಿ ಬಳಕೆ ಮಾಡಬೇಕು, ಮಾನವನ ಜೀವನಕ್ಕೆ ಅಪಾಯದ ತಂದೊಡ್ಡುವ ಸಂದರ್ಭ ಇರುವುದರಿಂದ, ಸುರಕ್ಷಿತ ಸಾಧನಗಳನ್ನು ಸಹ ಪೂಜಿಸಿ, ಯಂತ್ರಗಳನ್ನ, ಆಯುಧಗಳನ್ನ ಬಳಕೆ ಮಾಡಬೇಕು ಎಂಬ ಸಂದೇಶವನ್ನು ಸಾರಿದ್ದರು. ಆದರೆ ಕಾಲ ಬದಲಾದಂತೆ ಜನರು ಸುರಕ್ಷಿತ ಸಾಧನೆಗಳನ್ನು ಪಕ್ಕಕ್ಕಿಟ್ಟು, ಕೇವಲ ಗಾಡಿಯನ್ನು ಅಷ್ಟೇ ಶೃಂಗಾರ ಮಾಡಿ, ರಸ್ತೆಗಳಲ್ಲಿ ಸಂಚರಿಸುತ್ತಿರುವುದನ್ನು ನೋಡಿದರೆ, ಭಾರತೀಯರಿಗೆ ಇನ್ನೂ ಸುರಕ್ಷಾ ಸಾಧನೆಗಳ ಬಗ್ಗೆ ಭಾವನೆಗಳು ಬದಲಾಗಿಲ್ಲ ಎಂಬುದನ್ನು ತೋರಿಸುತ್ತದೆ ಎಂದರು.

ಪೋಲಿಸ್ ಇಲಾಖೆ, ಸಂಚಾರಿ ಇಲಾಖೆ , ಆಯುಧ ಪೂಜೆ ಸಂದರ್ಭದಲ್ಲಿ ಜನರಿಗೆ ಸಂದೇಶವನ್ನು ಕಳುಹಿಸಿ, ಪ್ರತಿಯೊಂದು ವಾಹನದ ಜೊತೆಗೆ ಒಂದು ಹೆಲ್ಮೆಟ್ ಅನ್ನು ಸಹ ಪೂಜಿಸಿ, ಅದನ್ನ ಮನೆಯಲ್ಲಿ ಅಟ್ಟದ ಮೇಲೆ, ಗುಜರಿಯಲ್ಲಿ ಬಿಸಾಡಿದ್ದರೆ, ಹೊರ ತೆಗೆದು, ಗಾಡಿ ಜೊತೆ ಅದಕ್ಕೂ ಸಹ ನೀರಿನ ಸಿಂಪರಣೆ ಮಾಡಿ, ವಿಭೂತಿ, ಕುಂಕುಮದ ಅರ್ಚನೆ ಆಗಿ, ಕರ್ಪೂರ ಬೆಳಗಲಿ. ಭಾವನಾತ್ಮಕ ಸಂಬಂಧವನ್ನ, ದೈವತ್ವದ ಸಂಬಂಧವನ್ನು ಹೆಲ್ಮೆಟ್ಟಿಗೂ ಸಹ ವಿಸ್ತರಿಸಿ ಎಂಬ ಸಂದೇಶವನ್ನು ನೀಡಿದರೆ, ಜನರು ಹೆಚ್ಚು ಸುರಕ್ಷಾ ಸಾಧನೆಗಳ ಬಗ್ಗೆ, ಈ ಹಬ್ಬವನ್ನು ಬಳಕೆ ಮಾಡಲು ಅನುಕೂಲವಾಗುತ್ತದೆ ಎಂದರು.

ಹಬ್ಬಗಳಲ್ಲಿ ಸಾವಿರಾರು ರೂಪಾಯಿ ಖರ್ಚು ಮಾಡಿ, ಜನರು ಕುಂಬಳಕಾಯಿ ಹೊಡೆಯುವುದು, ಹೂಮಾಲೆ ಹಾಕುವುದು, ಗಾಡಿಗಳನ್ನು ಸಿಂಗರಿಸುವುದು, ಸಿಹಿ ಹಂಚುವುದು, ಮಂಡಕ್ಕಿ ಹಂಚುವುದು, ಹಲವು ರೀತಿಗಳಲ್ಲಿ ಆಯುಧ ಪೂಜೆಗಳನ್ನು, ವಿಜೃಂಭಣೆಯಿಂದ ಆಚರಿಸಿ, ದಸರಾ ಹಬ್ಬದ ನೆನಪನ್ನು ಪ್ರತಿಯೊಬ್ಬರಿಗೂ ತಿಳಿಸಿಕೊಡುವಂತಹ ಇಂತಹ ಸಂದರ್ಭದಲ್ಲಿ, ಸುರಕ್ಷಿತ ಸಾಧನೆಗಳನ್ನು ಪಕ್ಕಕ್ಕಿಟ್ಟಿರುವುದು ಶೋಚನೀಯ ಎಂದರು.

ಹಿಂದೆ ರಾಜರುಗಳು ಕತ್ತಿವರಸೆ, ಯುದ್ಧ ಮಾಡುವಾಗ, ಕವಚಗಳನ್ನ, ಹೆಲ್ಮೆಟ್ ತರದ ಸಾಧನೆಗಳನ್ನ, ಎದೆಗೆವಚವನ್ನ, ಕೈಕಾಲುಗಳಿಗೆ ಕಬ್ಬಿಣದ ಪಟ್ಟಿಯ ಸಾಧನೆಗಳನ್ನು ಬಳಕೆ ಮಾಡಿ, ಯುದ್ಧ ಮಾಡಿ, ದೇಹವನ್ನ ರಕ್ಷಣೆ ಮಾಡಿಕೊಂಡು, ಜಯ ಸಾಧಿಸುವುದನ್ನ ಈಗಲೂ ಸಹ ಅರಮನೆಗಳಲ್ಲಿ ನೋಡಬಹುದು. ಅರಮನೆಗಳಲ್ಲಿ ಕತ್ತಿಯ ಜೊತೆಗೆ, ಸುರಕ್ಷಿತ ಸಾಧನಗಳನ್ನು ಸಹ ಪೂಜೆ ಮಾಡುತ್ತಾರೆ, ಹಾಗಾಗಿ ಜನಸಾಮಾನ್ಯರಿಗೂ ಸಹ ಆಯುಧ ಪೂಜೆ ಸಂದರ್ಭದಲ್ಲಿ, ಹೆಲ್ಮೆಟ್ ಧರಿಸುವುದು, ಗಾಡಿ ಪೂಜೆ ಜೊತೆಗೆ ಹೆಲ್ಮೆಟ್ ನ ಪೂಜೆ ಮಾಡುವುದು, ಹೆಲ್ಮೆಟ್ ಇಲ್ಲದೆ ಗಾಡಿ ಹೊರ ತೆಗೆಯಬೇಡಿ ಎಂಬ ಸಂದೇಶವನ್ನು ಸಾರುವುದು, ಈಗ ವಿಜ್ಞಾನ ಅರಿತವರು, ಆರೋಗ್ಯ ಬಗ್ಗೆ ಚಿಂತನೆ ಮಾಡುವಂಥವರು, ಆರೋಗ್ಯ ಇಲಾಖೆ, ಸಂಚಾರಿ ಇಲಾಖೆ, ಗಂಭೀರವಾಗಿ ಇದನ್ನ ಜನಜಾಗೃತಿ ಮೂಡಿಸಲು ಬಳಸಿಕೊಳ್ಳಬೇಕು. ಇಲ್ಲದಿದ್ದರೆ ಹಬ್ಬಗಳು ಬರಿ ನೆಪ ಮಾತ್ರಕ್ಕೆ ಆಚರಣೆಯಾಗಿ, ಸಾವಿರಾರು ರೂಪಾಯಿಯನ್ನು ಖರ್ಚು ಮಾಡಿಕೊಂಡು, ಮತ್ತೆ ರಸ್ತೆ ಅಪಘಾತಗಳನ್ನು ಹೆಚ್ಚಿಸಿಕೊಳ್ಳುತ್ತಾ ಬರುತ್ತಿರುವ ಜನರಿಗೆ ಸರಿದಾರಿಗೆ ತರಲು, ಈ ಆಯುಧ ಪೂಜೆ ಸೂಕ್ತವಾಗಿದೆ ಎಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡರು.

ಕಾರ್ಯಕ್ರಮದಲ್ಲಿ ಅಮೂಲ್ಯ ಪಿಜಿ ಮತ್ತು ಹೋಂ ಸ್ಟೇನ ಸದಸ್ಯರುಗಳು, ಮಾಲೀಕರು, ವಿದ್ಯಾರ್ಥಿಗಳು, ಪೋಷಕರು ಭಾಗವಹಿಸಿ, ಗಾಡಿಗಳಿಗೆ ಪೂಜೆ ಮಾಡಿ, ಹೆಲ್ಮೆಟ್ಟಿಗೂ ಸಹ ಪೂಜೆ ಸಲ್ಲಿಸಿ, ಅದನ್ನ ಧರಿಸಿ, ಫೋಟೋ ತೆಗೆಸಿಕೊಂಡು ಜನರಿಗೆ ಸಂದೇಶ ಕಳುಹಿಸಲು ಪ್ರಯತ್ನಿಸಿದರು.

# ವಿಶ್ವ ಹಿರಿಯ ನಾಗರಿಕರ ದಿನಾಚರಣೆ–2025

## ಸಂತಸಮಯ ಸಮಾಜ ಕಟ್ಟುವಲ್ಲಿ ಹಿರಿಯ ನಾಗರಿಕರ ಪಾತ್ರ ಬಹು ಮುಖ್ಯ: ಸಚಿವ ಎಚ್.ಕೆ.ಪಾಟೀಲ



**ಗದಗ :** ಭಾರತೀಯ ಸಂಸ್ಕೃತಿಯಲ್ಲಿ ಹಿರಿಯ ನಾಗರಿಕರಿಗೆ ವಿಶಿಷ್ಟ ಗೌರವವನ್ನು ಹಾಗೂ ಪ್ರಾಶಸ್ತ ವನ್ನು ಕೊಡಲಾಗಿದೆ. ಹಿರಿಯ ನಾಗರಿಕರ ಮಾರ್ಗದರ್ಶನ ಹಾಗೂ ಅನುಭವಗಳು ಯುವ ಪೀಳಿಗೆಗೆ ದಾರಿದೀಪವಾಗಿದ್ದು ಸಂತಸಮಯ ಹಾಗೂ ಬಲಿಷ್ಟ ಸಮಾಜ ಕಟ್ಟುವಲ್ಲಿ ಹಿರಿಯ ನಾಗರಿಕರ ಪಾತ್ರ ಬಹು ಮುಖ್ಯವಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರುಗಳ ಸಹಯೋಗದಲ್ಲಿ ಬುಧವಾರ " ಹಿರಿಯ ನಾಗರಿಕರು: ನಮ್ಮ ಆಶೋತ್ತರಗಳು, ನಮ್ಮ ಯೋಗಕ್ಷೇಮ ಮತ್ತು ನಮ್ಮ ಹಕ್ಕುಗಳನ್ನು ಸ್ಥಳೀಯ ಮತ್ತು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಬಲ್ಲ ಸಶಕ್ತರು" ಎಂಬ ಘೋಷವಾಕ್ಯದಡಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ –2025 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಹಿರಿಯ ನಾಗರಿಕರನ್ನು ಪ್ರತಿಯೊಬ್ಬರೂ ಗೌರವಿಸಬೇಕು ಹಾಗೂ ಪೂಜ್ಯ ಭಾವನೆಯಿಂದ ಕಾಣಬೇಕು. ಹಿರಿಯ ನಾಗರಿಕರು ತಮ್ಮ ಕುಟುಂಬಗಳಲ್ಲಿ ಸಾಕ್ಷಿಪ್ರಜ್ಞೆಯಾಗಿ ಮಾರ್ಗದರ್ಶನ ಮಾಡುತ್ತಾರೆ. ಭಾರತೀಯ ಸಮಾಜದಲ್ಲಿ ಹಿರಿಯರಿಗೆ ಕೊಟ್ಟಿರುವ ಗೌರವದ ಸಂಸ್ಕೃತಿಯಿಂದ ಭಾರತ ದೇಶವು ಸುಸಂಸ್ಕೃತ ಹಾಗೂ ಸಂತೋಷಕರ ಸಮಾಜವನ್ನಾಗಿಸಲು ಕಾರಣವಾಗಿದೆ. ಹಿರಿಯ ನಾಗರಿಕರಿಗೆ ಸರ್ಕಾರದಿಂದ ವಿವಿಧ ಯೋಜನೆಗಳು ಜಾರಿಯಲ್ಲಿದ್ದು ಅವುಗಳ ಸದ್ಬಳಕೆಯಾಗಬೇಕು.

ಹಿರಿಯ ನಾಗರಿಕರಿಗೆ ಸರಕಾರದಿಂದ ವಿವಿಧ ಯೋಜನೆಗಳ ಸೌಲಭ್ಯ ವಿತರಣೆ ಹಾಗೂ ಇನ್ನಿತರ ಸಮಸ್ಯೆಗಳು ಉಂಟಾದಲ್ಲಿ ಜಿಲ್ಲಾಡಳಿತ ಆ ಸಮಸ್ಯೆಗಳಿಗೆ ಸ್ಪಂದಿಸುತ್ತದೆ. ಪ್ರಭುವಿನೆಡೆಗೆ

ಪ್ರಭುತ್ವ ಯಂತ್ರದಲ್ಲಿಯೂ ಸಹ ಹಿರಿಯ ನಾಗರಿಕರು ತಮ್ಮ ಸಮಸ್ಯೆಗಳ ಕುರಿತು ದೂರು ದಾಖಲಿಸಬಹುದಾಗಿದೆ ಎಂದು ಸಚಿವ ಎಚ್. ಕೆ.ಪಾಟೀಲ ತಿಳಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಿರಿಯ ನಾಗರಿಕರನ್ನು ಗೌರವಿಸಲಾಯಿತು. ಹಿರಿಯ ನಾಗರಿಕರಿಗಾಗಿ ಆಯೋಜಿಸಲಾಗಿದ್ದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ ಜಗದೀಶ, ಅಪರ

ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಗದಗ ಜಿಲ್ಲಾ ನಿವೃತ್ತ ನೌಕರರ ಸಂಘದ ಅಧ್ಯಕ್ಷರಾದ ಪ್ರೊ.ಕೆ.ಎಚ್.ಬೇಲೂರ, ಗದಗ ಜಿಲ್ಲಾ ಹಿರಿಯ ನಾಗರಿಕರ ಸಂಘದ ಅಧ್ಯಕ್ಷರಾದ ಜಿ.ಎಸ್.ಹಿರೇಮಠ, ಕ.ರಾ. ಹಿ.ನಾ ಹಾಗೂ ನಿ.ನಾ. ಸಂಘದ ಎಸ್.ಕೆ.ಖಂಡೆಪ್ಪಗೌಡರ, ಗದಗ ಪ್ರೋಬಸ್ ಕ್ಲಬದ ಬಿ.ಎಸ್.ಗೌಡರ, ಡಾ.ರಾಜೇಂದ್ರ ಗೋಡಬೋಲೆ, ಹಿರಿಯ ನಾಗರಿಕರ ಸಂಘದ ತಾಲೂಕಾ ಘಟಕದ ಅಧ್ಯಕ್ಷರು, ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘಗಳ, ಸ್ವಯಂ ಸೇವಾ ಸಂಸ್ಥೆಗಳ ಮುಖ್ಯಸ್ಥರು, ಬಿ.ಎಮ್. ಬಿಳೆಯಲಿ, ಹನುಮಂತಪ್ಪ ಗರಗ, ಬಸಯ್ಯ ಸ್ಥಾವರಮಠ, ಲೋಕಪ್ಪ ಸೇರಿದಂತೆ ವಿವಿಧ ಹಿರಿಯ ನಾಗರಿಕರು, ಗಣ್ಯರು, ಹಾಜರಿದ್ದರು.

ನಾಡಗೀತೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮದಲ್ಲಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೆ.ಮಹಾಂತೇಶ್ ಸರ್ವರನ್ನು ಸ್ವಾಗತಿಸಿದರು. ಪ್ರೊ ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು.

## ಜೀಪ್ ಚಾಲಕರಿಂದ ಸ್ವಚ್ಛತಾ ಕಾರ್ಯಕ್ರಮ



**ಚಿಕ್ಕಮಗಳೂರು:** ವಿಶ್ವ ಪ್ರವಾಸೋದ್ಯಮ ದಿನದ ಅಂಗವಾಗಿ ಝರಿ ಫಾಲ್ಸ್ ಜೀಪ್ ಚಾಲಕರು ಮತ್ತು ಮಾಲೀಕರಿಂದ ಸ್ವಚ್ಚತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.ಪರಿಸರ ಸ್ವಚ್ಚವಾಗಿಡಲು ಮತ್ತು ಸ್ವಚ್ಚತೆಯ ಬಗ್ಗೆ ಅರಿವು ಮೂಡಿಸಲು ಝರಿ ಫಾಲ್ಸ್ ಜೀಪ್ ಚಾಲಕರು ಮತ್ತು ಮಾಲೀಕರು ಝರಿ ಫಾಲ್ಸ್ ಸುತ್ತಮುತ್ತ ಹಾಗೂ ಝರಿ ಫಾಲ್ಸ್ ಜೀಪ್ ಸ್ಟಾಂಡ್ ನ ಸುತ್ತಮುತ್ತ ಸ್ವಚ್ಚತ ಕಾರ್ಯಕ್ರಮ ನೆರವೇರಿಸಿದರು.


## ಲಿಡ್‌ಕರ್: ದಸರಾ–ದೀಪಾವಳಿ ಪ್ರಯುಕ ಶೇ.20 ರಷ್ಟು ರಿಯಾಯಿತಿ

**ರಾಮನಗರ:** ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ರಾಮನಗರ ಮಾರಾಟ ಮಳಿಗೆಯಲ್ಲಿ ದಸರಾ–ದೀಪಾವಳಿ ಹಬ್ಬದ ಪ್ರಯುಕ್ತ ಅಕ್ಟೋಬರ್ 18ರವರೆಗೆ ಪುರುಷರ ಮತ್ತು ಮಹಿಳೆಯರ ಚರ್ಮದ ಶೂಗಳು, ಚಪ್ಪಲಿಗಳು ಹಾಗೂ ಮಹಿಳೆಯರ ವ್ಯಾನಿಟಿ ಬ್ಯಾಗ್‌ಗಳು, ಸ್ಲಿಂಗ್ ಬ್ಯಾಗ್, ವ್ಯಾಲೆಟ್ ಇನ್ನೂ ಇತರೆ ಅಪ್ಪಟ ಚರ್ಮ ವಸ್ತುಗಳ ಮೇಲೆ ಶೇ. 20 ರಷ್ಟು ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತಿದೆ.

ವಿಳಾಸ: ಕಂದಾಯ ಇಲಾಖೆ, ಸರ್ಕಾರಿ ಆಸ್ಪತ್ರೆ ಪಕ್ಕ, ಲಿಡಕರ್ ಮಾರಾಟ ಮಳಿಗೆ, ರಾಮನಗರ. ದೂ.ಸಂಖ್ಯೆ: 8660412905 ಇಲ್ಲಿಗೆ ಭೇಟಿ ನೀಡಬಹುದಾಗಿದೆ, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ರಾಮನಗರದ ಮಾರಾಟ ಮಳಿಗೆಯ ವ್ಯವಸ್ಥಾಪಕರಾದ ಚಿದಾನಂದ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಂಡೊಮೆಟ್ರಿಯೊಸಿಸ್: ಜಾಗೃತಿ, ಆರಂಭಿಕ ರೋಗನಿರ್ಣಯ ಮತ್ತು ಉತ್ತಮ ಚಿಕಿತ್ಸೆ ಅಗತ್ಯ

ಎಂಡೊಮೆಟ್ರಿಯೊಸಿಸ್, ವಿಶ್ವಾದ್ಯಂತ ಲಕ್ಷಾಂತರ ಮಹಿಳೆಯರ ಮೇಲೆ ಪರಿಣಾಮ ಬೀರುವ ಪ್ರಸ್ತುತ, ಆದರೆಅನೇಕಬಾರಿತಪ್ಪಾಗಿ ಅರ್ಥೈಸಿಕೊಳ್ಳುವ ವೈದ್ಯಕೀಯ ಸ್ಥಿತಿ. ಸಂತಾನೋತ್ಪತ್ತಿ ಸಾಮರ್ಥ್ಯ ಮತ್ತು ಒಟ್ಟಾರೆ ಆರೋಗ್ಯದ ಮೇಲೆ ಅದರ ಗಮನಾರ್ಹ ಪರಿಣಾಮದ ಹೊರತಾಗಿಯೂ, ಅರಿವಿನ ಕೊರತೆ ಮತ್ತು ಅದರ ರೋಗಲಕ್ಷಣಗಳ ಬಗ್ಗೆ ತಪ್ಪು ಕಲ್ಪನೆಗಳಿಂದಾಗಿ ಇದನ್ನು ಆಗಾಗ್ಗೆ ಪತ್ತೆಹಚ್ಚಲಾಗುವುದಿಲ್ಲ. ಈ ಲೇಖನದಲ್ಲಿ ಫರ್ಟಿಲಿಟಿ ತಜ್ಞೆ ಮತ್ತು ಡಿವೈಯು ಮಹಿಳಾ ಮತ್ತು ಮಕ್ಕಳ ಆರೈಕೆ ವಿಭಾಗದ ನಿರ್ದೇಶಕರಾದ ಡಾ. ಜ್ಯೋತಿ ಬಂಡಿ, ಎಂಡೊಮೆಟ್ರಿಯೊಸಿಸ್ ಅನ್ನು ಗುರುತಿಸುವ ಪ್ರಾಮುಖ್ಯತೆ, ಅದು ಒಡ್ಡುವ ಸವಾಲುಗಳು–ವಿಶೇಷವಾಗಿ ಬಂಜೆತನಕ್ಕೆ ಸಂಬಂಧಿಸಿದಂತೆ, ಮತ್ತು ಆರಂಭಿಕ ರೋಗನಿರ್ಣಯ ಮತ್ತು



ಪರಿಣಾಮಕಾರಿ ಚಿಕಿತ್ಸೆಯ ಅಗತ್ಯದ ಬಗ್ಗೆ ಬೆಳಕುಚೆಲ್ಲಿದ್ದಾರೆ. ಇದರ ರೋಗಲಕ್ಷಣಗಳು, ಕಾರಣಗಳು ಮತ್ತು ನಿರ್ವಹಣೆಗೆ ಇರುವ ಆಯ್ಕೆಗಳ ಮೇಲೆ ಬೆಳಕು ಚೆಲ್ಲುವ ಮೂಲಕ, ಮಹಿಳೆಯರು ಸಮಯೋಚಿತ ವೈದ್ಯಕೀಯ ಮಧ್ಯಸ್ಥಿಕೆಯನ್ನು ಪಡೆಯಲು ಮತ್ತು ಅವರ ಜೀವನದ ಗುಣಮಟ್ಟವನ್ನು ಸುಧಾರಿಸಿಕೊಳ್ಳಲು ಪ್ರೋತ್ಸಾಹಿಸುವುದು ಇದರ ಉದ್ದೇಶ.

ಎಂಡೊಮೆಟ್ರಿಯೊಸಿಸ್ ಎಂದರೆ ಗರ್ಭಕೋಶ ಎಂದೂ ಕರೆಯಲ್ಪಡುವ ಎಂಡೊಮೆಟ್ರಿಯಮ್ ಅನ್ನು ಆವರಿಸಿರುವ ಅಂಗಾಂಶ, ಸಂತಾನೋತ್ಪತ್ತಿ ವ್ಯವಸ್ಥೆಯ ಇತರ ಅಂಗಗಳಾದ ಫಾಲೋಪಿಯನ್ ಟ್ಯೂಬ್‌ಗಳು, ಅಂಡಾಶಯಗಳು ಅಥವಾ ಸೊಂಟದ ಒಳಪದರದಲ್ಲಿ ಬೆಳೆಯುವ ಸಮಸ್ಯೆಯಾಗಿದೆ.

ಮುಟ್ಟಿನ ಸಮಯದಲ್ಲಿ ಗರ್ಭಾಶಯದ ಎಂಡೊಮೆಟ್ರಿಯಲ್ ಅಂಗಾಂಶ ಸ್ವಾಭಾವಿಕವಾಗಿ ಚೆಲ್ಲುತ್ತದೆ, ಆದರೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂಗಾಂಶದ ನೈಸರ್ಗಿಕ ನಿರ್ಗಮನಕ್ಕೆವ್ಯವಸ್ಥೆ ಇರುವುದಿಲ್ಲ. ಈ ಆಕ್ರಮಣಕಾರಿ ಅಂಗಾಂಶ ಉರಿಯೂತ, ಅಂಟಿಕೊಳ್ಳುವಿಕೆ ಮತ್ತು ಗಾಯದಗುರುತಿಗೆಕಾರಣವಾಗುತ್ತದೆ.

## ಮುಟ್ಟಿನಸಮಯದಲ್ಲಿ ಭಾರೀ ರಕ್ತಸ್ರಾವ

ಮುಟ್ಟಿನ ಸಮಯದಲ್ಲಿ ನೋವು, ಇದನ್ನು ಡಿಸ್ಮೆನೊರಿಯಾ ಎಂದೂ ಕರೆಯಲಾಗುತ್ತದೆ

ಸಂಭೋಗ ಮಾಡುವಾಗ ನೋವು

ಅಸಹಜ ಆಯಾಸ

ಜೀರ್ಣಕ್ರಿಯೆಯ ಸಮಸ್ಯೆಗಳು

ಗರ್ಭಧರಿಸಲು ಅಸಮರ್ಥತೆ

ಶ್ರೋಣಿ ಕುಹರ (ಪೆಲ್ವಿಕ್) ದ ಪ್ರದೇಶದಲ್ಲಿ ದೀರ್ಘಕಾಲದ ನೋವು

**ಬಂಜೆತನ:** ಇದು ಎಂಡೊಮೆಟ್ರಿಯೊಸಿಸ್ ನಿಂದ ಹೇಗೆ ಉಂಟಾಗುತ್ತದೆ

ಗರ್ಭಧರಿಸಲು ಪ್ರಯತ್ನಿಸುತ್ತಿರುವ 50% ಮಹಿಳೆಯರಲ್ಲಿ ಬಂಜೆತನಕ್ಕೆ ಕಾರಣವಾಗುವ ಅತ್ಯಂತ ಸಾಮಾನ್ಯ ಸ್ತ್ರೀರೋಗ ಪರಿಸ್ಥಿತಿಗಳ ಬಗ್ಗೆ ಇಲ್ಲಿ ವೈದ್ಯರು ಬೆಳಕು ಚೆಲ್ಲಿದ್ದಾರೆ. ಎಂಡೊಮೆಟ್ರಿಯೊಸಿಸ್ ಫಲವತ್ತತೆಯ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎಂಬುದಕ್ಕೆ ಉತ್ತರ ಇಲ್ಲಿದೆ:

**ಅಂಡೋತ್ಪತ್ತಿಯಲ್ಲಿ ಅಡಚಣೆ:** ಆಕ್ರಮಣಕಾರಿ ಅಂಗಾಂಶದಿಂದ ಉಂಟಾಗುವ ಉರಿಯೂತ ಸಾಮಾನ್ಯ ಅಂಡೋತ್ಪತ್ತಿಗೆ ಅಡ್ಡಿಯಾಗಬಹುದು.

**ಹಾರ್ಮೋನ್‌ಗಳ ಅಸಮತೋಲನ:** ಎಂಡೊಮೆಟ್ರಿಯೊಸಿಸ್ ಹಾರ್ಮೋನ್ ಮಟ್ಟವನ್ನು ಸಹ ಬದಲಾಯಿಸಬಹುದು, ಇದರಿಂದಾಗಿ ಅಂಡಾಣುಗಳು ಫರ್ಟಿಲೈಸ್ ಆಗಲು ಕಷ್ಟವಾಗುತ್ತದೆ.

**ಶ್ರೋಣಿ ಕುಹರ (ಪೆಲ್ವಿಕ್)ದ ಪ್ರದೇಶದ ವಿರೂಪ:** ಹೊರಗಿನ ಮತ್ತು ಗಾಯಗೊಂಡ ಅಂಗಾಂಶಗಳು ಫಾಲೋಪಿಯನ್ ಟ್ಯೂಬ್‌ಗಳನ್ನು ವಿರೂಪಗೊಳಿಸಬಹುದು ಅಥವಾ, ವೀರ್ಯ ಅಂಡಾಣುಗಳನ್ನು ತಲುಪುವುದನ್ನು ತಡೆಯಬಹುದು.

**ಅಂಡಾಣುಗಳ ಕಳಪೆ ಗುಣಮಟ್ಟ:** ಎಂಡೊಮೆಟ್ರಿಯೊಸಿಸ್ನಿಂದ ಉಂಟಾಗುವ ದೀರ್ಘಕಾಲದ ಉರಿಯೂತ ಅಂಡಾಣುಗಳ ಬೆಳವಣಿಗೆ ಮತ್ತು ಗುಣಮಟ್ಟದ ಮೇಲೆ ಪರಿಣಾಮ ಬೀರಬಹುದು.

**ದುರ್ಬಲ ಫರ್ಟಿಲೈಸೇಶನ್:** ಗರ್ಭಾಶಯದ ಒಳಪದರದಲ್ಲಿನ ಅಡೆತಡೆಗಳು ಅಂಡಾಣುಗಳ ಫರ್ಟಿಲೈಸೇಶನ್ಗೆ ಅಡ್ಡಿಯಾಗಬಹುದು.

## ರೋಗನಿರ್ಣಯ ಮತ್ತು ಚಿಕಿತ್ಸೆ

ಈಗಾಗಲೇ ಹೇಳಿದಂತೆ, ಎಂಡೊಮೆಟ್ರಿಯೊಸಿಸ್ನ ಸಕಾಲಿಕ ಮತ್ತು ಪರಿಣಾಮಕಾರಿ ನಿರ್ವಹಣೆಗೆ ಮತ್ತು ರೋಗಲಕ್ಷಣಗಳನ್ನು ತಗ್ಗಿಸಲು ಆರಂಭಿಕ ರೋಗನಿರ್ಣಯ ನಿರ್ಣಾಯಕವಾಗಿದೆ. ಮೇಲಿನ ರೋಗಲಕ್ಷಣಗಳನ್ನು

ಹೊಂದಿರುವ ಮಹಿಳೆಯರು ಮತ್ತು ಹುಡುಗಿಯರು ತ್ವರಿತ ಶ್ರೋಣಿ ಕುಹರ(ಪೆಲ್ವಿಕ್) ಪರೀಕ್ಷೆಗಳು, ಎಂಆರ್‌ಐ, ಅಥವಾ ಅಲ್ಟ್ರಾಸೌಂಡ್ ಇಮೇಜಿಂಗ್ ಪರೀಕ್ಷೆಗಳು ಅಥವಾ ಇತರ ರೋಗನಿರ್ಣಯ ವಿಧಾನಗಳಿಗೆ ಒಳಗಾಗಬೇಕು. ಎಂಡೊಮೆಟ್ರಿಯಲ್ ಅಂಗಾಂಶದ ಇರುವಿಕೆಯನ್ನು ದೃಢೀಕರಿಸುವಲ್ಲಿ ಲ್ಯಾಪರೊಸ್ಕೋಪಿ ಅತ್ಯಂತ ನಿಖರವಾಗಿದೆ.

ಚಿಕಿತ್ಸೆಯ ಆಯ್ಕೆಗಳು ಅಂಗಾಂಶಗಳ ಬೆಳವಣಿಗೆಯ ವ್ಯಾಪ್ತಿ, ರೋಗಲಕ್ಷಣಗಳ ತೀವ್ರತೆ ಮತ್ತು ಗರ್ಭಧಾರಣೆಯ ಗುರಿಗಳನ್ನು ಅವಲಂಬಿಸಿರುತ್ತದೆ. ಅವುಗಳೆಂದರೆ:

**ಔಷಧಿಗಳು:** ಎನ್. ಎಸ್. ಎ. ಐ. ಡಿ. ಎಸ್., ಜಿ. ಎನ್. ಆರ್. ಎಚ್. ಅಗೊನಿಸ್ಟ್‌ಳು ಮತ್ತು ಹಾರ್ಮೋನ್ ಚಿಕಿತ್ಸೆಯಂತಹ ಔಷಧಿಗಳು ನೋವು ನಿವಾರಣೆಗೆ ಸಹಾಯ ಮಾಡುತ್ತವೆ ಮತ್ತು ಹೊಸ ಅಂಗಾಂಶಗಳ ಬೆಳವಣಿಗೆಯನ್ನು ನಿಗ್ರಹಿಸುತ್ತವೆ.

ಶಸ್ತ್ರಚಿಕಿತ್ಸೆಯ ಮಧ್ಯಸ್ಥಿಕೆ: ಅಂಡಾಣು ಫರ್ಟಿಲೈಸೇಶನ್ನ ಸಾಧ್ಯತೆಗಳನ್ನು ಸುಧಾರಿಸಲು ಲ್ಯಾಪರೊಸ್ಕೋಪಿಕ್ ಶಸ್ತ್ರಚಿಕಿತ್ಸೆ ಎಂಡೊಮೆಟ್ರಿಯಲ್ ಅಂಗಾಂಶ ಮತ್ತು ಗಾಯಗಳು ಮತ್ತು ಅಂಟಿಕೊಳ್ಳುವಿಕೆಯನ್ನು ತೆಗೆದುಹಾಕುತ್ತದೆ.

ಸಹಾಯಕ ಸಂತಾನೋತ್ಪತ್ತಿ ತಂತ್ರಜ್ಞಾನಗಳು: ಚಿಕಿತ್ಸೆಯ ಹೊರತಾಗಿಯೂ ಗರ್ಭಧರಿಸಲು ಸಾಧ್ಯವಾಗದ ಮಹಿಳೆಯರಿಗೆ ಇನ್–ವಿಟ್ರೊ ಫರ್ಟಿಲೈಸೇಶನ್ (ಐವಿಎಫ್) ನಂತಹ ಎಆರ್ಟಿ ತಂತ್ರಜ್ಞಾನಗಳನ್ನು ಶಿಫಾರಸು ಮಾಡಲಾಗುತ್ತದೆ.

**ಸಹಾಯ ಪಡೆಯಿರಿ:** ಮೌನವಾಗಿ ದುಃಖಿಸುವುದನ್ನು ನಿಲ್ಲಿಸಿ

ಎಂಡೊಮೆಟ್ರಿಯೊಸಿಸ್ ಕೇವಲ ಮುಟ್ಟಿನ ಅಸ್ವಸ್ಥತೆ ಮತ್ತು ನೋವಿನ ಬಗ್ಗೆ ಅಲ್ಲ. ಇದು ಗಂಭೀರ ಪರಿಣಾಮಗಳನ್ನು ಉಂಟುಮಾಡಬಹುದಾದ ದೈಹಿಕ ಮತ್ತು ವೈದ್ಯಕೀಯ ಸ್ಥಿತಿ.

ಮೇಲೆ ತಿಳಿಸಿದ ಯಾವುದೇ ರೋಗಲಕ್ಷಣಗಳನ್ನು ಅನುಭವಿಸುವ ಮಹಿಳೆಯರು ತಕ್ಷಣದ ವೈದ್ಯಕೀಯ ಚಿಕಿತ್ಸೆಯನ್ನು ಪಡೆಯಬೇಕು. ಈ ಮಾರ್ಚ್‌ನಲ್ಲಿ ನಾವು ಗಮನಾರ್ಹ ಜಾಗೃತಿ ಮೂಡಿಸಲು ಸಾಧ್ಯವಾದರೆ ಮತ್ತು ಆರಂಭಿಕ ರೋಗನಿರ್ಣಯ ಮತ್ತು ಸಮಯೋಚಿತ ಚಿಕಿತ್ಸೆಯ ಮಹತ್ವವನ್ನು ಅರ್ಥಮಾಡಿಕೊಳ್ಳಲು ಸಾಧ್ಯವಾದರೆ,

ನಾವು ಮಹಿಳೆಯರ ಸಂತಾನೋತ್ಪತ್ತಿ ಆರೋಗ್ಯ ಮತ್ತು ಒಟ್ಟಾರೆ ಜೀವನದ ಗುಣಮಟ್ಟವನ್ನು ಬಹಳವಾಗಿ ಸುಧಾರಿಸಬಹುದು.

ಎಂಡೊಮೆಟ್ರಿಯೊಸಿಸ್ ನಿಮ್ಮ ಫರ್ಟಿಲಿಟಿಯ ಮೇಲೆ ಪರಿಣಾಮ ಬೀರಿದರೆ, ನೀವು ತಕ್ಷಣವೇ ಗರ್ಭಧಾರಣೆ ಮತ್ತು ಗರ್ಭಧಾರಣೆಯ ಪರಿಹಾರಗಳಲ್ಲಿ ಪರಿಣತಿ ಹೊಂದಿರುವ ಫರ್ಟಿಲಿಟಿ ತಜ್ಞರನ್ನು ಸಂಪರ್ಕಿಸಬೇಕು.

ಸಕಾಲಿಕ ವೈದ್ಯಕೀಯ ನೆರವು ಎಂಡೊಮೆಟ್ರಿಯಲ್ ಅಂಗಾಂಶದ ಬೆಳವಣಿಗೆಯನ್ನು ತಡೆಯುತ್ತದೆ, ಜೀವನದ ಗುಣಮಟ್ಟವನ್ನು ಹೆಚ್ಚಿಸುತ್ತದೆ ಮತ್ತು ಗರ್ಭಿಣಿಯಾಗುವ ಸಾಧ್ಯತೆಗಳನ್ನು ಗಣನೀಯವಾಗಿ ಹೆಚ್ಚಿಸುತ್ತದೆ.

# ತಿನ್ನಲಷ್ಟೇ ಅಲ್ಲ, ಆರೋಗ್ಯಕ್ಕೂ ಹಿತ ಮಾವಿನಹಣ್ಣು

ಮಾವಿನಹಣ್ಣಿನ ಹೆಸರು ಕೇಳಿದಾಕ್ಷಣ ಬಾಯಲ್ಲಿ ನೀರೂರುತ್ತದೆ. ಮಾರುಕಟ್ಟೆಯಲ್ಲಿ ಮಾವು ಮಾರಾಟ ಆರಂಭವಾಗಿದ್ದು, ಮಾವು ಪ್ರಿಯರು ಈ ಸೀಸನ್‌ಗಾಗಿ ಕಾತರದಿಂದ ಕಾಯುತ್ತಿರುತ್ತಾರೆ. ಯಾಕೆಂದರೆ ಮಾವು ಕೇವಲ ರುಚಿಗಷ್ಟೇ ಅಲ್ಲ, ಆರೋಗ್ಯಕ್ಕೂ ಸಾಕಷ್ಟು ಪ್ರಯೋಜನಗಳನ್ನು ನೀಡುತ್ತದೆ.

ಬೇಸಗೆ ಸಮಯದಲ್ಲಿ ಯಥೇಚ್ಛವಾಗಿ ಸಿಗುವಂತಹ ಮಾವಿನ ಹಣ್ಣು ಹಲವಾರು ರೀತಿಯ ಆರೋಗ್ಯ ಗುಣಗಳನ್ನು ಹೊಂದಿದೆ. ಹೀಗಾಗಿ ಇದನ್ನು ಹಣ್ಣುಗಳ ರಾಜನೆಂದು ಕರೆಯಲಾಗುತ್ತದೆ. ಹಣ್ಣಿನ ರುಚಿಯು ಅದ್ಭುತವಾಗಿರಲಿದ್ದು, ಒಂದೊಂದು ಜಾತಿಯ ಮಾವಿನ ಹಣ್ಣು ಬೇರೆ ಬೇರೆ ರೀತಿಯ ರುಚಿ ಹೊಂದಿರುತ್ತವೆ. ಈ ಹಣ್ಣು ಹಳದಿ, ಕೆಂಪು, ಕಿತ್ತಳೆ ಹಾಗೂ ಹಸಿರು ಬಣ್ಣದಲ್ಲಿ ಸಿಗುತ್ತವೆ.

ಮಾವಿನ ಹಣ್ಣು ಹಲವು ಪೋಷಕಾಂಶಂಗಳನ್ನು ಕೂಡ ಹೊಂದಿದೆ. ಮುಖ್ಯವಾಗಿ ಅನೇಕ ವಿಟಮಿನ್‌ಗಳನ್ನು ಇದರಲ್ಲಿ ಪಡೆಯಬಹುದು. ಈ ಹಣ್ಣಿನಲ್ಲಿ ವಿಟಮಿನ್ಸ್‌ಗಳಾದ ವಿಟಮಿನ್ ಇ, ವಿಟಮಿನ್ ಸಿ, ವಿಟಮಿನ್ ಕೆ ಹಾಗೂ ವಿಟಮಿನ್ ಎ ಅಂಶ ಯಥೇಚ್ಛವಾಗಿ ಕಂಡು ಬರುತ್ತದೆ. ಅಷ್ಟೇ ಅಲ್ಲದೆ, ಈ ಹಣ್ಣಿನಲ್ಲಿ ಪೌಷ್ಟಿಕ ಸತ್ವಗಳು ಒಳಗೊಂಡಿರುವ ಹಲವಾರು ಬಗೆಯ ಖನಿಜಾಂಶಗಳು ಕೂಡ ಇದೆ.

ಹಳದಿ ಬಣ್ಣದ ಹಣ್ಣುಗಳನ್ನು ನೋಡಿದ



ಕೂಡಲೇ ಅದರಲ್ಲಿ ವಿಟಮಿನ್ ಎ ಅಂಶವಿರುತ್ತದೆ ಎಂದು ಹೇಳಬಹುದು. ಮಾವು ಅತ್ಯುತ್ತಮ ವಿಟಮಿನ್ ಎ ಅಂಶವನ್ನು ಹೊಂದಿರುವುದರಿಂದ ದೃಷ್ಟಿಯ ಆರೋಗ್ಯ ಕಾಪಾಡುವಲ್ಲಿ ಬಹಳ ಪ್ರಯೋಜನಕಾರಿ. ಮಾವಿನಲ್ಲಿ ಸಕ್ಕರೆ ಅಂಶ ಜಾಸ್ತಿಯಿರುವುದರಿಂದ ಹಣ್ಣು ತಿನ್ನಲು ಬಹಳ ರುಚಿ.

17 ಗ್ರಾಂನಷ್ಟು ಗ್ಲೂಕೋಸ್ ಅಂಶ ಹೊಂದಿರುತ್ತದೆ. ಆದ್ದರಿಂದ ಮಧುಮೇಹಿಗಳಿಗೆ ಹಾಗೂ ತೂಕ ಕಡಿಮೆ ಮಾಡಲಿರುವ ಮತ್ತು ಪಥ್ಯ ಇರುವವರಿಗೆ ಈ ಹಣ್ಣು ನಿಷಿದ್ಧ.

ಪೊಟ್ಯಾಶಿಯಂ,

ಕ್ಯಾಲ್ಸಿಯಂ, ಮೆಗ್ನೀಷಿಯಂ ಹಾಗೂ ಫಾಸ್ಫರಸ್ ಅಂಶಗಳೂ ಕೂಡ ಈ ಹಣ್ಣಿನಲ್ಲಿ ಅಧಿಕ ಪ್ರಮಾಣದಲ್ಲಿ ಸಿಗುತ್ತದೆ.

ಇದರಲ್ಲಿ ವಿಟಮಿನ್ ಸಿ ಅಂಶವಿರುವುದರಿಂದ ರೋಗ ನಿರೋಧಕ ಶಕ್ತಿ ಹೆಚ್ಚಿಸುತ್ತದೆ ಹಾಗೂ ವಿಟಮಿನ್ ಕೆ ಮತ್ತು ವಿಟಮಿನ್ ಇ ಅಂಶಗಳು ಚರ್ಮದ ಕಾಂತಿ ಹೆಚ್ಚಿಸುತ್ತವೆ. ನಿಯಾಸಿನ್ ಅಂಶ ಸಾಕಷ್ಟು ದೊರಕುವುದರಿಂದ ದೇಹದ ಆಯಾಸ ಕಡಿಮೆಯಾಗುತ್ತದೆ.

ಮಾವಿನ ಹಣ್ಣಾಗುವ ಸಮಯಕ್ಕಿಂತಲೂ ಹಣ್ಣಾದ ಬಳಿಕ ವಿಟಮಿನ್ ಸಿ ಅಂಶ ಹೆಚ್ಚಾಗಿರುತ್ತದೆ. ಮಾವಿನ ಹಣ್ಣಿನಲ್ಲಿ ಪ್ರೊವಿಟಮಿನ್ ಎ ಕ್ಯಾರೊಟಿನಾಯ್ಡ್‌ಗಳಾದ ಆಲ್ಫಾ–ಕ್ಯಾರೋಟಿನ್ ಮತ್ತು ಬೀಟಾ–ಕ್ಯಾರೋಟಿನ್ ಇರುತ್ತದೆ. ಮಾವಿನ ಹಣ್ಣಿನಲ್ಲಿ ವಿಟಮಿನ್ ಇ ಮತ್ತು ಕೆ ಅಂಶವು ಕಡಿಮೆ ಅಥವಾ ಮಧ್ಯಮವಾಗಿರುತ್ತದೆ, ಆದರೆ ಈ ಹಣ್ಣಿನಲ್ಲಿ ವಿಟಮಿನ್ ಡಿ ಇರುವುದಿಲ್ಲ. ಆದರೆ, ಹಣ್ಣಿನಲ್ಲಿರುವ

ಃ ಜೀವಸತ್ವಗಳಲ್ಲಿ ಃ1 (ಥಯಾಮಿನ್), ಃ2 (ರಿಬೋಫ್ಲಾವಿನ್), ಃ3 (ನಿಯಾಸಿನ್), ಃ5 (ಪಾಂಟೊಥೆನಿಕ್ ಆಮ್ಲ), ಃ6 ??(ಪಿರಿಡಾಕ್ಸಿನ್, ಪಿರಿಡಾಕ್ಸಲ್ ಮತ್ತು ಪಿರಿಡಾಕ್ಸಮೈನ್), ಮತ್ತು ಃ9 (ಫೋಲೇಟ್ ಅಥವಾ ಫೋಲಿಕ್ ಆಮ್ಲ) ಸೇರಿರುತ್ತವೆ.

ಮಾವಿನಹಣ್ಣನ್ನು ಸಮತೋಲಿತ ಆಹಾರದಲ್ಲಿ ಸೇರಿಸುವುದರಿಂದ ಒಟ್ಟಾರೆ ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ಉತ್ತಮ ಕೊಡುಗೆ ನೀಡುತ್ತದೆ. ಆದಾಗ್ಯೂ, ಮಧುಮೇಹಿಗಳು ಹಾಗೂ ತೂಕ ಕಡಿಮೆ ಮಾಡುವವರು ನಿಯಮಿತವಾಗಿ ಸೇವನೆ ಮಾಡುವುದು ಅತ್ಯಗತ್ಯ.

# ಮಾಂಸ, ಮೊಟ್ಟೆ ಚೆನ್ನಾಗಿ ಬೇಯಿಸಿ ತಿಂದರೆ ಸೋಂಕು ತಗುಲುವುದಿಲ್ಲ

ಬೆಂಗಳೂರು: ನೆರೆಯ ಆಂಧ್ರಪ್ರದೇಶ. ಮಹಾರಾಷ್ಟ್ರ ಮತ್ತು ಕರ್ನಾಟಕದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹಕ್ಕಿ ಜ್ವರ (ಊ5ಓ1) ಪ್ರಕರಣಗಳು ಕಂಡುಬಂದಿರುವ ಹಿನ್ನೆಲೆಯಲ್ಲಿ ಎಲ್ಲೆಡೆ ಕೋಳಿ ಮಾಂಸ ಹಾಗೂ ಮೊಟ್ಟೆಯ ಸೇವನೆಯ ಬಗ್ಗೆ ಆತಂಕ ಶುರುವಾಗಿದೆ.

ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ. ಜಗದೀಶ ಅವರು ಮಂಗಳವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿಸ್ಥಿತಿ ಅವಲೋಕನ ನಡೆಸಿದರು. ಈ ವೇಳೆ ಹಕ್ಕಿ ಜ್ವರ ಹರಡದಂತೆ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸೂಚನೆ ನೀಡಿದರು.

ಪಕ್ಷಿಗಳು ಅಥವಾ ಕೋಳಿಗಳ ಯಾವುದೇ ಅನುಮಾನಾಸ್ಪದ, ಅಸಹಜ ಅಥವಾ ಹಠಾತ್ ಸಾವು ಕಂಡುಬಂದರೆ, ಹತ್ತಿರದ ಪಶುವೈದ್ಯಕೀಯ ಇಲಾಖೆಗೆ ತಿಳಿಸಿ ಎಂದು ತಿಳಿಸಿದರು.ಹಕ್ಕಿ ಜ್ವರ ಪತ್ತೆಯಾದ ಸ್ಥಳದಿಂದ 10 ಕಿ.ಮೀ ವ್ಯಾಪ್ತಿಯ ಸುತ್ತಲಿನ ನಿವಾಸಿಗಳು ಶೀತ, ಕೆಮ್ಮು, ಜ್ವರ, ತಲೆನೋವು, ಮೈ–ಕೈ ನೋವು, ಗಂಟಲು ನೋವು ಮತ್ತು ಇತರ ರೋಗಲಕ್ಷಣಗಳಿಂದ ಬಳಲುತ್ತಿದ್ದರೆ, ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬೇಕು. ಗ್ರಾಮ ಪಂಚಾಯಿತಿಗಳಲ್ಲಿ ಹಕ್ಕಿ ಜ್ವರದ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲು ಆರೋಗ್ಯ ಇಲಾಖೆಗೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದು ಹೇಳಿದರು.

**ಏನಿದು ಹಕ್ಕಿ ಜ್ವರ?**




ಹಕ್ಕಿಜ್ವರ ಸಾಂಕ್ರಾಮಿಕ ರೋಗವಾಗಿದ್ದು, ಮುನ್ನೆಚ್ಚರಿಕೆ ವಹಿಸಿದರೆ ಸೋಂಕನ್ನು ತಡೆಯಬಹುದಾಗಿದೆ. ಹೀಗಾಗಿ ಕಾಯಿಲೆಯ ಲಕ್ಷಣಗಳು ಕೋಳಿಗಳಲ್ಲಿ ಕಾಣಿಸಿಕೊಂಡ ಕೂಡಲೇ ಹತ್ತಿರದ ಮಾಹಿತಿ ಕೇಂದ್ರ ಅಥವಾ ಪಶು ವೈದ್ಯಕೀಯ ಸಂಸ್ಥೆಗೆ ಮಾಹಿತಿ ನೀಡಬೇಕು ಎಂದು ಆರೋಗ್ಯ ಇಲಾಖೆ ಸಾರ್ವಜನಿಕರಿಗೆ ಸೂಚಿಸಿದೆ.

**ಹಕ್ಕಿಜ್ವರದ ಲಕ್ಷಣಗಳೇನು?**

ಹಕ್ಕಿಜ್ವರದ ಲಕ್ಷಣಗಳು ಸಾಮಾನ್ಯವಾಗಿ ಎಚ್1ಎನ್1 ಜ್ವರದ ಲಕ್ಷಣಗಳಂತೆಯೇ ಇರುತ್ತದೆ. ಜ್ವರ, ಕೆಮ್ಮು, ಶೀತ, ತಲೆನೋವು, ಗಂಟಲು ಕೆರೆತ, ನೆಗಡಿ, ಸ್ನಾಯುಗಳಲ್ಲಿ ನೋವು, ಆಯಾಸ ಕಾಣಿಸಿಕೊಳ್ಳುತ್ತದೆ. ಕೆಲವೊಮ್ಮೆ ವಾಂತಿ ಮತ್ತು ಭೇದಿಯೂ ಆಗಬಹುದು. ಉಸಿರಾಟದಲ್ಲಿ ತೊಂದರೆಯೂ ಉಂಟಾಗಬಹುದು.

**ಮುನ್ನೆಚ್ಚರಿಕಾ ಕ್ರಮಗಳೇನು?**

ಹಕ್ಕಿಜ್ವರ ಪೀಡಿತ ಕೋಳಿಗಳು, ಪಕ್ಷಿಗಳು ಹಾಗೂ ಬಾತುಕೋಳಿಗಳ ಸಂಪರ್ಕಕ್ಕೆ ಬರದಂತೆ ಎಚ್ಚರ ವಹಿಸಬೇಕು.

ಹಕ್ಕಿಜ್ವರ ಪೀಡಿತ ಫಾರಂಗಳಿಗೆ ಭೇಟಿ ನೀಡಬಾರದು.

ಹಕ್ಕಿಜ್ವರ ಹರಡಿರುವ ಫಾರಂನ ಸಂಪರ್ಕಕ್ಕೆ ಬಂದಲ್ಲಿ ತಕ್ಷಣ ಕೈಕಾಲು, ಮುಖ ತೊಳೆದುಕೊಂಡು ಬಟ್ಟೆ ಬದಲಾಯಿಸಿಕೊಳ್ಳಬೇಕು. ಕನಿಷ್ಠ 15 ಸೆಕೆಂಡುಗಳ ಕಾಲವಾದರೂ ಸೋಪ್ ಮತ್ತು ನೀರಿನಿಂದ ಕೈಗಳನ್ನು ತೊಳೆಯಿರಿ,

ಒಂದು ವೇಳೆ ಜ್ವರದ ಲಕ್ಷಣ ಕಾಣಿಸಿದಲ್ಲಿ ತಕ್ಷಣ ವೈದ್ಯರನ್ನು ಕಾಣಬೇಕು.

ಸೋಂಕಿತ ಸ್ಥಳದಲ್ಲಿ ಯಾವುದೇ ವಸ್ತು ಮುಟ್ಟಿದರೂ ಕೈಯನ್ನು ಸ್ವಚ್ಛಗೊಳಿಸಬೇಕು.

ಹಕ್ಕಿಜ್ವರ ಪ್ರಕರಣಗಳು ವರದಿಯಾಗಿರುವ ಪ್ರದೇಶದ 3ರಿಂದ

10 ಕಿ.ಮೀ ವ್ಯಾಪ್ತಿಯ ಪ್ರದೇಶಗಳಲ್ಲಿ ಜ್ವರ, ಶೀತ ನೆಗಡಿಯ ರೋಗ ಲಕ್ಷಣ ಇರುವ ಬಗ್ಗೆ ವಾರಕ್ಕೊಮ್ಮೆ ಸಮೀಕ್ಷೆ ಮಾಡಬೇಕು ಮತ್ತು ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಕೋಳಿ ಫಾರಂಗಳಿಂದ

ಕೋಳಿಗಳನ್ನು ಸಾಗಣೆ ಮಾಡುವ ವಾಹನಗಳನ್ನು ಸೋಂಕು ನಿವಾರಕ ಸಿಂಪಡಿಸಿ ಸ್ವಚ್ಛಗೊಳಿಸಬೇಕು.ನಿಮ್ಮ ಸಾಕುಪ್ರಾಣಿಗಳಿಗೆ ಲಸಿಕೆ ಹಾಕಿಸಿ.ಕೋಳಿ ಮತ್ತು ಜಾನುವಾರುಗಳಿರುವ ಸ್ಥಳದಲ್ಲಿ ಕೆಲಸ ಮಾಡುವಾಗ ಕೈಗವಸುಗಳು, ಮುಖವಾಡ ಮತ್ತು ಕನ್ನಡಕಗಳನ್ನು ಧರಿಸಿ,

# ಆಯಸಿಡಿಟಿ, ಮಲಬದ್ಧತೆ, ಸಾಕಷ್ಟು ಆರೋಗ್ಯ ಪ್ರಯೋಜನಗಳನ್ನು ನೀಡುತ್ತೆ ಓಂಕಾಳು

ಓಂ ಕಾಳನ್ನು ಅಡುಗೆಗೆ ಸಾಮಾನ್ಯವಾಗಿ ಉಪಯೋಗಿಸುತ್ತಲೇ ಇರುತ್ತೇವೆ. ಆದರೆ, ಈ ಓಂ ಕಾಳನ್ನು ಸೇವಿಸುವುದರಿಂದ ಹತ್ತು ಹಲವು ಆರೋಗ್ಯಕಾರಿ ಲಾಭಗಳಿದೆ. ಸಾಕಷ್ಟು ಮಂದಿ ಹೊಟ್ಟೆ, ಕರುಳು ಹಾಗೂ ಜೀರ್ಣಕ್ರಿಯೆಗೆ ಸಂಬಂಧಪಟ್ಟ ಅಂಗಾಂಗಗಳಲ್ಲಿ ಹುಣ್ಣುಗಳಿಂದ ಬಳಲುತ್ತಿರುತ್ತಾರೆ, ಈ ಹುಣ್ಣುಗಳಿಂದ ಬಹಳಷ್ಟು ತೊಂದರೆಯನ್ನು ಅನುಭವಿಸುತ್ತಿರುತ್ತಾರೆ, ಇದಕ್ಕಾಗಿ ಹಲವು ಔಷಧಗಳ ಮೊರೆ ಹೋಗಿರುತ್ತಾರೆ. ಆದರೆ, ಓಂ ಕಾಳುಗಳು ಇಂತಹ ಹುಣ್ಣುಗಳನ್ನು ವಾಸಿಮಾಡಲು ಪರಿಣಾಮಕಾರಿಯಾಗಿದೆ ಎಂದರೆ ನಿಮಗೆ ಆಶ್ಚರ್ಯವಾಗಬಹುದು.

ಓಂ ಕಾಳುಗಳು ಅಸಿಡಿಟಿ, ಗ್ಯಾಸ್ ಸಮಸ್ಯೆ, ಜೀರ್ಣಕ್ರಿಯೆಯ ವಿಳಂಬವಾಗುವ ತೊಂದರೆಗಳನ್ನು ಸರಿಪಡಿಸುತ್ತದೆ. ಜೀರ್ಣಕ್ರಿಯೆಯ ತೊಂದರೆಗಳನ್ನು ಸರಿಮಾಡಿಕೊಳ್ಳಲು ಅರ್ಧ ಚಮಚದಷ್ಟು ಓಂಕಾಳುಗಳನ್ನು ಜಗಿದು ತಿನ್ನಬಹುದು ಅಥವಾ ನೀರಿನೊಂದಿಗೆ ಬೆರೆಸಿ ಕುಡಿಯಬಹುದು.

# ಥೈರಾಯ್ಡ್ ನಿರ್ವಹಿಸಲು ಆಹಾರಕ್ರಮ ಪಾಲನೆ ನಿರ್ಣಾಯಕ



ಥೈರಾಯ್ಡ್.. ಇದು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿ ಕೇಳುತ್ತಿರುವ ಆರೋಗ್ಯ ಸಮಸ್ಯೆಗಳಲ್ಲಿ ಒಂದು. ಅದರಲ್ಲೂ ಪುರಷರಿಗಿಂತ ಮಹಿಳೆಯರಲ್ಲೇ ಈ ಸಮಸ್ಯೆ ಹೆಚ್ಚಾಗಿ ಕಾಡುತ್ತಿದೆ.ಥೈರಾಯ್ಡ್ ಕುತ್ತಿಗೆ ಭಾಗದಲ್ಲಿ ಚಿಟ್ಟೆಯಾಕಾರ ಗ್ರಂಥಿಯಾಗಿದ್ದು, ಇದು ಟಿ–3 ಹಾಗೂ ಟಿ–4 ಹಾರ್ಮೋನ್‌ಗಳನ್ನು ಉತ್ಪತ್ತಿಸುತ್ತವೆ. ಇದು ಪಿಟ್ಯುಟರಿ ಗ್ರಂಥಿಯಿಂದ ಸ್ರವಿಸುವ ಥೈರಾಯ್ಡ್ ಆಗಿದ್ದು, ಟಿಎಸ್‌ಎಚ್ ಹಾರ್ಮೋನ್ ಉತ್ಪದಿಸಲಿದ್ದು, ದೇಹದ ಪಚನ ಕ್ರಿಯೆಯನ್ನು ನಿಯಂತ್ರಿಸುತ್ತದೆ. ಥೈರಾಯ್ಡ್‌ನಲ್ಲಿ ಹೈಪೋ ಥೈರಾಯ್ಡ್ ಮಹಿಳೆಯರಲ್ಲಿ ಹೆಚ್ಚು ಕಾಣಿಸಿಕೊಳ್ಳುತ್ತದೆ. ಇದು ತೂಕ ಹೆಚ್ಚಳಕ್ಕೆ ಕಾರಣವಾಗುತ್ತದೆ.

ಇದು ಅತ್ಯಂತ ಅಪಾಯಕಾರಿ ಕೂಡ ಹೌದು. ಹೈಪೋ ಥೈರಾಯ್ಡ್‌ನಿಂದ ಪಚನ ಕ್ರಿಯೆ ಸಂಪೂರ್ಣ ನಿಧಾನವಾಗುವುದರಿಂದ ದೇಹದಲ್ಲಿ ತೂಕ ಹೆಚ್ಚಳವಾಗುತ್ತದೆ. ಇದು ಕೂದಲು ಉದುರುವಿಕೆ, ರಕ್ತದೊತ್ತಡ ಹೆಚ್ಚಳ, ಸಕ್ಕರೆ ಕಾಯಿಲೆ ಇತ್ಯಾದಿ ರೋಗಕ್ಕೆ ಕಾರಣವಾಗಬಹುದು.

ಹೀಗಾಗಿ ಥೈರಾಯ್ಡ್‌ನ ಲಕ್ಷಣ ಕಂಡು ಬಂದ ಕೂಡಲೇ ವೈದ್ಯರನ್ನು ಭೇಟಿ ಮಾಡಿ ಚಿಕಿತ್ಸೆ ಪಡೆದುಕೊಳ್ಳಬೇಕು.ಥೈರಾಯ್ಡ್ ಹೊಂದಿರುವವರು ಆಹಾರ ಸೇವನೆಯಲ್ಲಿ ಹೆಚ್ಚು ಗಮನ ವಹಿಸಬೇಕು. ಥೈರಾಯ್ಡ್ ನಿರ್ವಹಣೆಯಲ್ಲಿ ಆಹಾರ ಕ್ರಮ ನಿರ್ಣಾಯಕವಾಗಿದೆ. ಈ ಆಹಾರ ಕ್ರಮದಿಂದ ಥೈರಾಯ್ಡ್ ಸಮಸ್ಯೆ ಗುಣಪಡಿಸಲು ಸಾಧ್ಯವಾಗುವುದಿಲ್ಲ. ಆದರೆ, ಸಮಸ್ಯೆಯನ್ನು ನಿರ್ವಹಿಸಬಹುದಾಗಿದೆ ಎಂದು ತಜ್ಞರು ಹೇಳಿದ್ದಾರೆ.

# ಧೂಮಪಾನ ಚಟ ಬಿಡಿ, ಆರೋಗ್ಯಕರ ಜೀವನ ಕಾಪಾಡಿ



**ಬೆಂಗಳೂರು:** ತಮ್ಮ 59ನೇ ವರ್ಷದ ಹುಟ್ಟುಹಬ್ಬದಲ್ಲಿ ಬಾಲಿವುಡ್ ಸೂಪರ್‌ಸ್ಟಾರ್ ಶಾರುಖ್ ಖಾನ್ ನಾನು ಧೂಮಪಾನ ತ್ಯಜಿಸಿದ್ದೇನೆ ಎಂದು ಘೋಷಿಸಿಕೊಂಡರು. ಅವರಿಗೆ ದೀರ್ಘಕಾಲದಿಂದ ಧೂಮಪಾನ ಚಟವಿತ್ತು. ದಿನಕ್ಕೆ ಸುಮಾರು 100 ಸಿಗರೇಟು ಸೇದುತ್ತಿದ್ದರು.

ವಯಸ್ಸು 60 ಆಗುತ್ತಾ ಬಂತು ಎಂದಾಗ ಆರೋಗ್ಯ ದೃಷ್ಟಿಯಿಂದ ಕೆಲವು ಚಟಗಳನ್ನು ಬಿಡಬೇಕು ಎಂದು ಗಟ್ಟಿ ಮನಸ್ಸು ಮಾಡಿ ಶಾರೂಕ್ ಈ ನಿರ್ಧಾರಕ್ಕೆ ಬಂದಿದ್ದರು.

ನಾವು ಸಾಮಾನ್ಯ ಮನುಷ್ಯರು ಒಂದು ಕ್ಷಣ ಯೋಚಿಸಬೇಕು. ಆರೋಗ್ಯಕರ ಜೀವನವನ್ನು ನಡೆಸಲು ನಮ್ಮಜೀವನದಲ್ಲಿಧನಾತ್ಮಕ ಬದಲಾವಣೆಯನ್ನು ಮಾಡಲು ಯಾವಾಗ ಬೇಕಾದರೂ ತೀರ್ಮಾನ ಮಾಡಬಹುದು, ವಯಸ್ಸಾಯಿತು, ಇನ್ನು ಚಟಗಳನ್ನು ಬಿಟ್ಟು ಏನು ಉಪಯೋಗ ಎಂದು ಕೊರಬೇಕಾಗಿಲ್ಲ ಎಂಬುದನ್ನು, ಶಾರೂಕ್ ಖಾನ್ ನಿರ್ಧಾರ ತೋರಿಸಿಕೊಡುತ್ತದೆ.

ಒಬ್ಬ ವ್ಯಕ್ತಿಯು ಯಾವಾಗ ಕೆಟ್ಟ ಚಟಗಳನ್ನು ನಿಲ್ಲಿಸಲು ನಿರ್ಧರಿಸಿದರೂ, ಧೂಮಪಾನವನ್ನು ತ್ಯಜಿಸುವುದು ಒಟ್ಟಾರೆ ಆರೋಗ್ಯವನ್ನು ಸುಧಾರಿಸುವ ನಿಟ್ಟಿನಲ್ಲಿ ನಿರ್ಣಾಯಕ ಹೆಜ್ಜೆಯಾಗಿದೆ. ನಿರ್ಧಾರ ಮಾಡಿದ ಮೇಲೆ ಅದನ್ನು ಪಾಲಿಸಿಕೊಂಡು ಹೋಗುವುದು ಮುಖ್ಯವಾಗುತ್ತದೆ. ದುರಭ್ಯಾಸಗಳನ್ನು ತ್ಯಜಿಸಿದ ನಂತರ ತಕ್ಷಣದ ಮತ್ತು ದೀರ್ಘಾವಧಿಯ ಪ್ರತಿಫಲಗಳು ಸ್ಪಷ್ಟವಾಗಿ ಗೋಚರಿಸುತ್ತವೆ.

**ತಕ್ಷಣಕ್ಕೆ ಕಂಡುಬರುವ ಪ್ರಯೋಜನಗಳು**

**1. ಹೃದಯ ಬಡಿತ ವೇಗದಲ್ಲಿ ಇಳಿಕೆ, ಮೊದಲ ಕೆಲವು ನಿಮಿಷಗಳಲ್ಲಿ ಸಾಮಾನ್ಯ ಸ್ಥಿತಿಗೆ ಮರಳುತ್ತದೆ.2. ನಿಕೋಟಿನ್ ಮಟ್ಟವು 24 ಗಂಟೆಗಳಲ್ಲಿ ಕಡಿಮೆಯಾಗಲು ಪ್ರಾರಂಭಿಸುತ್ತದೆ, ಅಂತಿಮವಾಗಿ ಶೂನ್ಯವನ್ನು ತಲುಪುತ್ತದೆ.**

**3. ರಕ್ತದ ಕಾರ್ಬನ್ ಮಾನಾಕ್ಸೈಡ್ ಮಟ್ಟವು ಮೊದಲ ಕೆಲವು ದಿನಗಳಲ್ಲಿ ಕಡಿಮೆಯಾಗುತ್ತದೆ.4. ಉಸಿರಾಟದ ಲಕ್ಷಣಗಳು, ವಿಶೇಷವಾಗಿ ಉಸಿರಾಟದ ತೊಂದರೆ, ವಾರಗಳಲ್ಲಿ ಸುಧಾರಿಸಲು ಪ್ರಾರಂಭಿಸುತ್ತದೆ.5. ದೀರ್ಘಕಾಲೀನ ಪ್ರಯೋಜನಗಳು**

**6. ಹೃದಯದ ಆರೋಗ್ಯ: ಒಂದರಿಂದ ಎರಡು ವರ್ಷಗಳಲ್ಲಿ, ಹೃದಯ ಕವಾಟದ ಅಡಚಣೆಗಳು ಮತ್ತು ಹೃದಯಾಘಾತಗಳಂತಹ ಹೃದಯ ಸಂಬಂಧಿ ಸಮಸ್ಯೆಗಳ ಅಪಾಯವು ಗಮನಾರ್ಹವಾಗಿ ಕಡಿಮೆಯಾಗುತ್ತದೆ. ಕಾಲಾನಂತರದಲ್ಲಿ, ಉರಿಯೂತವು ಕಡಿಮೆಯಾಗುತ್ತದೆ, ಹೆಚ್ಚಿನ ಸಾಂದ್ರತೆಯ ಲಿಪೊಪ್ರೋಟೀನ್ (ಊಆಐ) ಕೊಲೆಸ್ಟ್ರಾಲ್ ಸುಧಾರಿಸುತ್ತದೆ ಮತ್ತು ಹೆಪ್ಪುಗಟ್ಟುವಿಕೆಯ ರಚನೆಯ ಸಾಧ್ಯತೆಯು ಕಡಿಮೆಯಾಗುತ್ತದೆ.**


**7. ಉಸಿರಾಟದ ಆರೋಗ್ಯ: ದೀರ್ಘಕಾಲದ ಕೆಮ್ಮು, ಉಸಿರಾಟದ ತೊಂದರೆ ಮತ್ತು ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಕಾಯಿಲೆ (ಅಔಕಆ)ಯಂತಹ ಉಸಿರಾಟದ ಸಮಸ್ಯೆಗಳ ಅಪಾಯ ಕಡಿಮೆ ಮಾಡುತ್ತದೆ. ಇದು ಶ್ವಾಸಕೋಶದ ರೋಗನಿರೋಧಕ ಶಕ್ತಿಯನ್ನು ಸುಧಾರಿಸುತ್ತದೆ, ಶ್ವಾಸಕೋಶದ ಸೋಂಕುಗಳು ಮತ್ತು ನ್ಯುಮೋನಿಯಾವನ್ನು ತಡೆಯಲು ಸಹಾಯ ಮಾಡುತ್ತದೆ.**

# ಅತಿಯಾದ ಕಾಫಿ ಸೇವನೆಯಿಂದ ಬಿ.ಪಿ ಮಧುಮೇಹ ಹೆಚ್ಚಳ

**ಬೆಂಗಳೂರು:** ಕಾಫಿ ಕುಡಿಯುವ ಅಭ್ಯಾಸ ಯಾರಿಗೆ ತಾನೇ ಇಲ್ಲ ಹೇಳಿ. ಆದರೆ, ಅತಿಯಾದರೆ ಅಮೃತವೂ ವಿಷವಾಗುತ್ತದೆ ಎಂಬ ಮಾತಿದೆ. ಕಾಫಿ ಕೂಡ ದೀರ್ಘಕಾಲಿಕ ರೋಗಗಳನ್ನು ತಂದೊಡ್ಡುವ ಸಾಧ್ಯತೆಗಳಿದ್ದು. ಎಚ್ಚರವಹಿಸುವಂತೆ ವೈದ್ಯರು ಸಲಹೆ ನೀಡಿ–ದ್ದಾರೆ.

ಅತಿಯಾದ ಕಾಫಿ ಸೇವನೆಯು ಅಧಿಕ ರಕ್ತದೊತ್ತಡ ಹಾಗೂ ಆತಂಕ (Anxi-ety) ಸಮಸ್ಯೆಯನ್ನು ಹೆಚ್ಚಿಸುತ್ತದೆ ಎಂದು ಅಧ್ಯಯನವೊಂದು ಹೇಳಿದೆ.


ಆತಂಕ (Anxiety) ಸಮಸ್ಯೆಯೊಂದಿಗೆ ಆಸ್ಪತ್ರೆಗೆ ಬರುವ ಸಾಕಷ್ಟು ರೋಗಿಗಳು ಸಾಮಾನ್ಯವಾಗಿ ಅತಿಯಾದ ಕಾಫಿ ಸೇವನೆ ಮಾಡುವ ಅಭ್ಯಾಸವನ್ನು ರೂಢಿಸಿಕೊಂಡಿರುತ್ತಾರೆ. ಏಕೆಂದರೆ ಕೆಲಸ ಸಮಯದಲ್ಲಿ ಕಾಫಿ ಸುಲಭವಾಗಿ ಲಭ್ಯವಿರುವ ಕಾರಣ ಅಭ್ಯಾಸವನ್ನು ಬೆಳೆಸಿಕೊಂಡಿರುತ್ತಾರೆ. ಆದರೆ, ಇದರಿಂದ ಅನೇಕ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿದ್ದರೂ ಗಮನ ಹರಿಸುವುದಿಲ್ಲ.ನಮ್ಮಲ್ಲಿ ಅನೇಕರು ಕೆಲಸ ಒತ್ತಡ ದೂರಾಗಿಸಲು ಅತಿಯಾಗಿ ಕಾಫಿ ಸೇವನೆ ಮಾಡುವುದುಂಟು. ಆದರೆ, ಇದು ಸಮಸ್ಯೆಯನ್ನು ಉಲ್ಬಣಿಸುತ್ತದೆ ಎಂಬ ಅರಿವು



ಅವರಿಗಿರುವುದಿಲ್ಲ.


ಅತಿಯಾದ ಕಾಫಿ ಸೇವನೆ ರಕ್ತದೊತ್ತಡವನ್ನು ಹಾಗೂ ಆತಂಕದ ಸಮಸ್ಯೆಗಳನ್ನು ಹೆಚ್ಚು ಮಾಡುತ್ತದೆ ಎಂದು ವೈದ್ಯರು ತಿಳಿಸಿದ್ದಾರೆ. ಜನರಲ್ ಹಾಸ್ಪಿಟಲ್ ಸೈಕಿಯಾಟ್ರಿಯಲ್ಲಿನ ಅಧ್ಯಯನಗಳಲ್ಲಿ ಒಂದಾಗಿರುವ ಮಾಸಿಕ ಆರೋಗ್ಯ ಜರ್ನಲ್ ಈ ಕುರಿತು ಅಧ್ಯಯನ ನಡೆಸಿದ್ದು, ಅಧ್ಯಯನದಲ್ಲಿ ಅತಿಯಾದ ಕೆಫೀನ್ ಸೇವನೆಯು ಆತಂಕ (Anxi-ety) ಹದಗೆಡುವಂತೆ ಮಾಡುತ್ತದೆ ಎಂದು ತಿಳಿದುಬಂದಿದೆ.

# ಬಿಸಿಲ ಝಳಕ್ಕೆ ಬಾಡದಿರಲಿ ನಯನಗಳು



ಬೇಸಿಗೆ ಕಾಲ ಬಂತೆಂದರೆ ಸಾಕು ಹಲವು ರೋಗಗಳು ಬೆಂಬಿಡದೆ ಕಾಡುತ್ತವೆ. ಅವುಗಳ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವ ನಾವು ಕಣ್ಣಿನ ಆರೈಕೆಯನ್ನೇ ಮರೆತುಬಿಡುತ್ತೇವೆ. ಬೇಸಿಗೆಯ ಬಿಸಿಲ ಗಾಳಿ ಕಣ್ಣಿಗೆ ಹಲವು ರೀತಿಯ ಸಮಸ್ಯೆಗಳು ಎದುರಾಗುತ್ತವೆ. ಸುಡು ಬಿಸಿಲಿಗೆ ಕಣ್ಣುಗಳು ತೇವಾಂಶವನ್ನು ಕಳೆದುಕೊಂಡು ಮದ್ರಾಸ್ ಐ, ಕಾಮಾಲೆ, ಕಣ್ಣನಲ್ಲಿ ನವೆ, ಅಲರ್ಜಿ, ಕಣ್ಣಿನಲ್ಲಿ ಆಗಾಗ ನೀರು ಸುರಿಯುತ್ತಲೇ ಇರುವುದು, ಕಿರಿಕಿರಿ ಅನುಭವ ಇಲ್ಲವೇ ಕಣ್ಣಿನೊಳಗೆ ಚುಚ್ಚಿದಂತಾಗುವುದು...ಹೀಗೆ ಹಲವು ರೀತಿಯ ಕಣ್ಣಿನ ಸಮಸ್ಯೆಗಳು ಎದುರಾಗುತ್ತವೆ. ಇಂತಹ ಸಂದರ್ಭಗಳಲ್ಲಿ ಕಣ್ಣಿನ ಆರೈಕೆ ಮಾಡುವುದು ಅತ್ಯವಶ್ಯಕ.ಸನ್ಗ್ಲಾಸ್ ಬಳಕೆ ಮಾಡಿಸುಡು ಬಿಸಿಲಿನಲ್ಲಿ ಮನೆಯಿಂದ ಹೊರಗೆ ಬರುವ ಅಗತ್ಯ ಬಂದಾಗಲೆಲ್ಲಾ ಸನ್ಗ್ಲಾಸ್ ಬಳಕೆ ಮಾಡಿ. ಬೈಕ್, ಕಾರು ಅಥವಾ ಇನ್ನಾವುದೇ ವಾಹನಗಳನ್ನು ಚಾಲನೆ ಮಾಡುವ ವೇಳೆಯೂ ಸನ್ಗ್ಲಾಸ್ ಬಳಕೆ ಮಾಡುವುದರಿಂದ ಧೂಳಿನ ಕಣಗಳು ಅಥವಾ ಬಿಸಿಗಾಳಿ ಕಣ್ಣುಗಳನ್ನು ಸೇರದಂತೆ ತಡೆಯುತ್ತದೆ. ಬೈಕ್ ಸವಾರರು ಆದಷ್ಟು ಮುಚ್ಚಿರುವ ಹೆಲ್ಮೆಟ್ಗಳನ್ನು ಬಳಸುವುದು ಉತ್ತಮ.ಶೇ.100ರಷ್ಟು ಗಗಿ ರಕ್ಷಣೆಯನ್ನು ಒದಗಿಸುವ ಗುಣಮಟ್ಟದ ಸನ್ಗ್ಲಾಸ್ ನ್ನು ಖರೀದಿ ಮಾಡಿ. ಯುವಿ ಕಿರಣಗಳು ನಿಮ್ಮ ಕಣ್ಣುಗಳಿಗೆ ಹಾನಿಯನ್ನು ಉಂಟುಮಾಡಬಹುದು, ಇದು ಕಣ್ಣಿನ ಪೊರೆ ಮತ್ತು ಮ್ಯಾಕ್ಯುಲರ್ ಡಿಜೆನರೇಶನ್ನಂತಹ ಸಮಸ್ಯೆಗಳಿಗೆ ಕಾರಣವಾಗುತ್ತದೆ.

# ಶ್ರವಣದೋಷ ಅಸಡ್ಡೆ ಬೇಡ...



**ಬೆಂಗಳೂರು:**ವಯಸ್ಸಾದವರಲ್ಲಿ ಶ್ರವಣದೋಷವು ಸಾಮಾನ್ಯ ಸ ಮ ು ಸ್ಯೆ ೦ ು ಾ ಗಿ ರ ು ತ್ತ ದೆ. ಆರಂಭದಲ್ಲಿ ಸೌಮ್ಯ ಗಾತ್ರದಿಂದ ಹಿಡಿದು ತೀವ್ರ – ಆಳವಾದ ಮಟ್ಟಗಳವರೆಗೆ ಶ್ರವಣದೋಷ ಸಮಸ್ಯೆ ಇರುತ್ತದೆ. ವಯಸ್ಸಾದವರು ಕಿವಿ ಕೇಳಿಸದಿರುವ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸುವುದಿಲ್ಲ, ಅವರ ಕುಟುಂಬದವರು ಸಹ ಅಸಡ್ಡೆ ಮಾಡುತ್ತಾರೆ. ಮನುಷ್ಯನಿಗೆ ದೃಷ್ಟಿಹೀನತೆ ಸಮಸ್ಯೆ ಬಂದರೆ ಅದನ್ನು ಹೊಂದಿರುವ ವ್ಯಕ್ತಿ ಕಡೆಗೆ ತಕ್ಷಣದ ಗಮನ ನೀಡುತ್ತಾರೆ. ಆದರೆ ವಯಸ್ಸಾದವರಲ್ಲಿ ಶ್ರವಣ ನಷ್ಟವನ್ನು ತಡವಾಗಿ ಅಥವಾ ಎಂದಿಗೂ ಪರಿಹರಿಸುವುದಿಲ್ಲ.ವ್ಯಕ್ತಿಗೆ ಶ್ರವಣ ದೋಷ ಉಂಟಾದಾಗ ಸಾಮಾಜಿಕ ಕೌಶಲ್ಯ ಕೂಡ ಕಡಿಮೆಯಾಗುತ್ತದೆ.

ಬೇರೆಯವರು ಅವರನ್ನು ಅಷ್ಟಾಗಿ ಮಾತನಾಡಿಸುವುದಿಲ್ಲ, ಹೀಗಾದಾಗ ಅವರು ಪ್ರತ್ಯೇಕವಾಗುತ್ತಾರೆ. ಶ್ರವಣದೋಷವುಳ್ಳ ಹಿರಿಯರೊಂದಿಗೆ ಸಂಭಾಷಣೆ ನಡೆಸುವಾಗ, ಸಂಭಾಷಣೆಯಲ್ಲಿ ಸ್ಪಷ್ಟತೆಯನ್ನು ಹೊಂದಲು ಸಾಧ್ಯವಾಗದಿದ್ದಾಗ ಅಥವಾ ವಿಭಿನ್ನವಾಗಿ ಉತ್ತರಿಸಲು ಸಾಧ್ಯವಾಗದಿದ್ದಾಗ ಅವರು ನಗುವುದನ್ನು ನಾವು ಅನೇಕ ಬಾರಿ ಗಮನಿಸುತ್ತೇವೆ.

# ಪರಾಕ್' ಸಿನಿಮಾ ಒಪ್ಪಿಕೊಳ್ಳುವ ಮುನ್ನ ನಾನು ಸುಮಾರು 200 ಸ್ಕ್ರಿಪ್ಟ್‌ಗಳನ್ನು ಪರಿಶೀಲಿಸಿದ್ದೆ





ಬಘೀರಾ ಚಿತ್ರದ ಯಶಸ್ಸಿನ ನಂತರ ಹಲವಾರು ಆಸಕ್ತಿದಾಯಕ ಯೋಜನೆಗಳಲ್ಲಿ ತೊಡಗಿಕೊಂಡಿರುವ ನಟ ಶ್ರೀಮುರಳಿ, ತಮ್ಮ ಮುಂದಿನ ಚಿತ್ರ 'ಪರಾಕ್' ಅನ್ನು ಅಧಿಕೃತವಾಗಿ ಖಚಿತಪಡಿಸಿದ್ದಾರೆ. ಈ ಯೋಜನೆಯು ಸೋಮವಾರ ನಡೆದ ಅದ್ಧೂರಿ ಮಹೂರ್ತ ಸಮಾರಂಭದೊಂದಿಗೆ ಪ್ರಾರಂಭವಾಯಿತು. ಶಾಸಕ ಶಿವಗಂಗಾ ಬಸವರಾಜ್ ಚಿತ್ರಕ್ಕೆ ಚಾಲನೆ ನೀಡಿ ತಂಡಕ್ಕೆ ಶುಭ ಕೋರಿದರು.

ನಟ ಮೊದಲ ಬಾರಿಗೆ ನಿರ್ದೇಶಕ ಹಾಲೇಶ್ ಕೋಗುಂಡಿ ಅವರೊಂದಿಗೆ ಕೆಲಸ ಮಾಡುತ್ತಿದ್ದಾರೆ. ಈ ಹಿಂದೆ ಶ್ರೀಮುರಳಿ ಪಾತ್ರದ ಪೋಸ್ಟರ್ ಅನ್ನು ಅನಾವರಣಗೊಳಿಸಲಾಗಿತ್ತು. ಎಂಜಿನಿಯರ್ ಆಗಿದ್ದ ಹಾಲೇಶ್ ನಿರ್ದೇಶಕನಾಗಿ ಬದಲಾಗಿದ್ದು, ಈ ಚಿತ್ರವು ಆಕ್ಷನ್-ಸಸ್ಪೆನ್ಸ್ ಎಂಟರ್ಟೈನರ್ ಆಗಿರುತ್ತದೆ ಎಂದು ಬಹಿರಂಗಪಡಿಸಿದರು. ನಿರ್ದೇಶಕರು ಈ ಹಿಂದೆ ಕೆಲವು ಕಿರುಚಿತ್ರಗಳು, ಎರಡು ಮ್ಯೂಸಿಕ್ ವಿಡಿಯೋಗಳು ಮತ್ತು ಶ್ರುತಿ ಪ್ರಕಾಶ್ ನಟಿಸಿದ ಸವಾಸ ಎಂಬ ಚಿತ್ರವನ್ನು ನಿರ್ದೇಶಿಸಿದ್ದಾರೆ.

ಈ ಚಿತ್ರಕ್ಕೆ ಬ್ರ್ಯಾಂಡ್ ಕೋ ಆಪರೇಟ್ಸ್ ಪ್ರೊಡಕ್ಷನ್ ಪ್ರೈವೇಟ್ ಲಿಮಿಟೆಡ್ ಬಂಡವಾಳ ಹೂಡಿದೆ. 'ಪರಾಕ್ ಒಂದು ವಿಂಟೇಜ್ ಶೈಲಿಯ ಚಿತ್ರ. ಬಘೀರಾ ನಂತರ, ಮುಂದೆ ಯಾವ ರೀತಿಯ ಕಥೆಯನ್ನು ಆಯ್ದುಕೊಳ್ಳಬೇಕೆಂದು ನಾನು ಯೋಚಿಸುತ್ತಿದ್ದೆ. ಇದನ್ನು ನಿರ್ಧರಿಸುವ ಮೊದಲು ನಾನು ಸುಮಾರು 200 ಸ್ಕ್ರಿಪ್ಟ್‌ಗಳನ್ನು ಪರಿಶೀಲಿಸಿದೆ. ನಾನು ಕಳೆದ ಎರಡು ವರ್ಷಗಳಿಂದ ಪರಾಕ್ ತಂಡದೊಂದಿಗೆ ಪ್ರಯಾಣಿಸುತ್ತಿದ್ದೇನೆ ಮತ್ತು ಕೆಲಸ ಮಾಡುತ್ತಿದ್ದೇನೆ ಮತ್ತು ಈ ತಿಂಗಳಿನಿಂದ ನಾವು ಅಧಿಕೃತವಾಗಿ ಚಿತ್ರೀಕರಣ ಪ್ರಾರಂಭಿಸುತ್ತೇವೆ. ಚರಣ್ ರಾಜ್ ಈ ಚಿತ್ರಕ್ಕೆ ಸಂಗೀತ ಸಂಯೋಜಿಸಲಿದ್ದಾರೆ' ಎಂದು ಶ್ರೀಮುರಳಿ ಬಹಿರಂಗಪಡಿಸಿದರು.

ಚಿತ್ರಕ್ಕೆ ಸಂದೀಪ್ ವಲ್ಲೂರಿ ಅವರ ಛಾಯಾಗ್ರಹಣ, ಉಲ್ಲಾಸ್ ಹೈದೂರು ಅವರ ಕಲಾ ನಿರ್ದೇಶನ ಮತ್ತು ಇಂಚರಾ ಸುರೇಶ್ ಅವರ ವಸ್ತ್ರ ವಿನ್ಯಾಸವಿದೆ.

ಪರಾಕ್ ಜೊತೆಗೆ, ಶ್ರೀಮುರಳಿ ಪುನೀತ್ ರುದ್ರನಾಗ್ ನಿರ್ದೇಶನದ, ಜಯರಾಮ್ ದೇವಸಮುದ್ರ ನಿರ್ಮಿಸಲಿರುವ ಒಂದು ಯೋಜನೆಗೆ ಹಸಿರು ನಿಶಾನೆ ತೋರಿಸಿದ್ದಾರೆ. ಇದನ್ನು ಶೀಘ್ರದಲ್ಲೇ ಅಧಿಕೃತವಾಗಿ ಘೋಷಿಸಲಾಗುವುದು.

# ತೆಲುಗು ಪ್ರೇಕ್ಷಕರಿಂದ ಬಹಿಷ್ಕಾರ ಬೆದರಿಕೆ

## ರಿಷಬ್ ಶೆಟ್ಟಿ ನಿರ್ದೇಶನದ 'ಕಾಂತಾರ: ಚಾಪ್ಟರ್ 1'ಗೆ ಪವನ್ ಕಲ್ಯಾಣ್ ಬೆಂಬಲ

**ನವದೆಹಲಿ:** ಸೆಪ್ಟೆಂಬರ್ 25 ರಂದು ಬಿಡುಗಡೆಯಾದ ಪವನ್ ಕಲ್ಯಾಣ್ ಅವರ 'ದೆ ಕಾಲ್ ಹಿಮ್ ಒಜಿ' ಚಿತ್ರವು ಕರ್ನಾಟಕದಲ್ಲಿ ಟಿಕೆಟ್ ಬೆಲೆ ಏರಿಕೆ ಮತ್ತು ಒಂದು ನಿರ್ದಿಷ್ಟ ಗುಂಪಿನ ಜನರಿಂದ ವಿರೋಧ ಎದುರಿಸಿತು. ಇದಕ್ಕೆ ಪ್ರತಿಯಾಗಿ, ತೆಲುಗು ಪ್ರೇಕ್ಷಕರು ಆಂಧ್ರ ಪ್ರದೇಶದಲ್ಲಿ ಕನ್ನಡ ಚಿತ್ರ ರಿಷಬ್ ಶೆಟ್ಟಿ ಅವರ 'ಕಾಂತಾರ: ಚಾಪ್ಟರ್ 1' ಅನ್ನು ವಿರೋಧಿಸುತ್ತಿದ್ದಾರೆ. ಆದಾಗ್ಯೂ, ತೆಲುಗು ಸೂಪರ್‌ಸ್ಟಾರ್ ಪವನ್ ಕಲ್ಯಾಣ್, ಸೇಡಿನ ಹಾದಿಯಲ್ಲಿ ನಡೆಯಲು ಬಯಸುವುದಿಲ್ಲ ಎಂದಿದ್ದಾರೆ.



'ಸಿನಿಮಾ, ಸಂಗೀತ, ಕ್ರೀಡೆ ಮತ್ತು ಸಾಂಸ್ಕೃತಿಕ ಕಲೆಗಳಿಗೆ ಭಾಷೆ, ಪ್ರದೇಶ, ಜಾತಿ ಅಥವಾ ಧರ್ಮದ ಮಿತಿಗಳಿಲ್ಲ. ಎಲ್ಲ ವರ್ಗದ ಜನರನ್ನು ರಂಜಿಸುವುದು ಮತ್ತು ಕನೆಕ್ಟ್ ಆಗುವುದು ಅವುಗಳ ಮೂಲ ಉದ್ದೇಶವಾಗಿದೆ. ವೈಯಕ್ತಿಕ ಹಿತಾಸಕ್ತಿಗಳಿಂದ ಕೆಲವು ವ್ಯಕ್ತಿಗಳು ಕರ್ನಾಟಕದಾದ್ಯಂತ ಚಿತ್ರಮಂದಿರಗಳಲ್ಲಿ ಓಜಿ ಪ್ರದರ್ಶನ ತಡೆಯಲು ಪ್ರಯತ್ನಿಸಿರುವುದು ದುರದೃಷ್ಟಕರ. ಈ ಹಿಂದೆಯೂ ಕೆಲವು ತೆಲುಗು ಚಿತ್ರಗಳು ಇದೇ ರೀತಿಯ ಅಡೆತಡೆಗಳನ್ನು ಎದುರಿಸಿದ್ದವು. ಇದಕ್ಕೆ ಪ್ರತಿಕ್ರಿಯೆಯಾಗಿ, ಕಾಂತಾರ ಚಿತ್ರವನ್ನು ನಮ್ಮ ತೆಲುಗು ರಾಜ್ಯಗಳಲ್ಲಿ ನಿರ್ಬಂಧಿಸಬೇಕು ಎಂದು ಕೆಲವರು ಹೇಳುತ್ತಿದ್ದಾರೆ. ನಾನು ಈ ಚಿಂತನೆಯನ್ನು ಬೆಂಬಲಿಸುವುದಿಲ್ಲ' ಎಂದು ಹೇಳಿದು.'ಕಲೆ ಮತ್ತು ಸಿನಿಮಾ ಸಂತೋಷವನ್ನು ಹರಡಬೇಕು, ಸಂಸ್ಕೃತಿಗಳನ್ನು ಸೇತುವೆ ಮಾಡಬೇಕು ಮತ್ತು ಜನರನ್ನು ಬೇರ್ಪಡಿಸಬಾರದು, ಒಟ್ಟಿಗೆ ತರಬೇಕು. ಪ್ರತಿಯೊಬ್ಬ ವ್ಯಕ್ತಿಗೂ ತಾವು ಇಷ್ಟಪಡುವ ಸಿನಿಮಾ ನೋಡುವ ಹಕ್ಕಿದೆ. ನಿಮಗೆ ಒಂದು ಸಿನಿಮಾ ಇಷ್ಟವಾಗದಿದ್ದರೆ, ನೀವು ಅದನ್ನು ನೋಡದಿರಲು ಆಯ್ಕೆ ಮಾಡಬಹುದು. ಆದರೆ, ವೈಯಕ್ತಿಕ ದ್ವೇಷ ಅಥವಾ ಅಜೆಂಡಾಗಳನ್ನು ಬಳಸಿಕೊಂಡು ಸಿನಿಮಾಗಳನ್ನು ಗುರಿಯಾಗಿಸಿಕೊಳ್ಳುವುದು ಸ್ವೀಕಾರಾರ್ಹವಲ್ಲ. ಇಂದು, ಭಾರತೀಯ ಸಿನಿಮಾವನ್ನು ಪ್ರಪಂಚದಾದ್ಯಂತ ಎಲ್ಲ ಭಾಷೆಗಳಲ್ಲಿ ಆಚರಿಸಲಾಗುತ್ತಿದೆ. ಇಂತಹ ಸಮಯದಲ್ಲಿ, ಕಲೆಯನ್ನು ಪ್ರಾದೇಶಿಕ ಮಿತಿಯೊಳಗೆ ಸೀಮಿತಗೊಳಿಸುವ ಯಾವುದೇ ಪ್ರಯತ್ನವನ್ನು ಬಲವಾಗಿ ತಿರಸ್ಕರಿಸಬೇಕು. ಒಳ್ಳೆಯ ಸಿನಿಮಾಗಳು ಎಲ್ಲಿಂದ ಬಂದರೂ, ಅವುಗಳನ್ನು ಬೆಂಬಲಿಸೋಣ' ಎಂದು ಪವನ್ ಕಲ್ಯಾಣ್ ಹೇಳಿದರು.

# ಮ್ಯಾಕ್ಸ್ ಡೈರೆಕ್ಟರ್ ವಿಜಯ್ ಕಾರ್ತಿಕೇಯಗೆ ಕಾರ್ ಗಿಫ್ಟ್ ನೀಡಿದ ಕಿಚ್ಚ ಸುದೀಪ್

**ಬೆಂಗಳೂರು:** ಸ್ಯಾಂಡಲ್‌ವುಡ್ ನಟ ಕಿಚ್ಚ ಸುದೀಪ್ ಅವರು ನಿರ್ದೇಶಕ ವಿಜಯ್ ಕಾರ್ತಿಕೇಯ ಅವರಿಗೆ ದುಬಾರಿ ಬೆಲೆಯ ಕಾರನ್ನು ಉಡುಗೊರೆಯಾಗಿ ನೀಡಿದ್ದಾರೆ.

ಮ್ಯಾಕ್ಸ್ ಮತ್ತು ಮಾರ್ಕ್ ಸಿನಿಮಾದ ನಿರ್ದೇಶಕ ವಿಜಯ್ ಕಾರ್ತಿಕೇಯ ಅವರಿಗೆ ಕಿಚ್ಚ ಸುದೀಪ್ ಅವರು ಸ್ಕೋಡಾ ಕಾರನ್ನು ಉಡುಗೊರೆಯಾಗಿ ನೀಡಿದ್ದಾರೆ. ಈ ಸ್ಕೋಡಾ ಕಾರು ಸುಮಾರು 10 ಲಕ್ಷಕ್ಕೂ ಅಧಿಕ ಮೌಲ್ಯದ್ದಾಗಿದೆ. ಸುದೀಪ್ ತಮ್ಮ ಜೆಪಿ ನಗರದ ನಿವಾಸದಲ್ಲಿ ಉಡುಗೊರೆ ನೀಡಿದ್ದು, ಗಿಫ್ಟ್ ಪಡೆದ ನಿರ್ದೇಶಕ ಖುಷಿ ಪಟ್ಟಿದ್ದಾರೆ.

ಕಿಚ್ಚ ಸುದೀಪ್ ಅವರ ಜೊತೆಗೆ ಕ್ಲಿಕ್ಕಿಸಿಕೊಂಡ ಫೋಟೋವನ್ನು ನಿರ್ದೇಶಕ ವಿಜಯ್ ಕಾರ್ತಿಕೇಯ ತಮ್ಮ ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದಾರೆ.





ಪೋಸ್ಟ್ ಜೊತೆಗೆ ನಿರ್ದೇಶಕ, ಕಿಚ್ಚ ಸುದೀಪ್ ಹಾಗೂ ಅವರ ಕುಟುಂಬಕ್ಕೆ ಧನ್ಯವಾದ ತಿಳಿಸಿದ್ದಾರೆ.

ವಿಜಯ್ ಕಾರ್ತಿಕೇಯ ಅವರು ಕಳೆದ ವರ್ಷ ನಟ ಸುದೀಪ್ ಅವರ ಮ್ಯಾಕ್ಸ್ ಸಿನಿಮಾ ನಿರ್ದೇಶನ ಮಾಡಿದ್ದರು. ಆ ಸಿನಿಮಾ ಯಶಸ್ಸಿನ ಬಳಿಕ ಮಾರ್ಕ್ ಸಿನಿಮಾವನ್ನು ನಿರ್ದೇಶನ ಮಾಡುತ್ತಿದ್ದಾರೆ. ಇನ್ನು,

ನಿರ್ದೇಶಕರ ಶ್ರಮಕ್ಕೆ ನಟ ಕಿಚ್ಚ ಸುದೀಪ್ ಅವರು ಕಾರನ್ನು ಉಡುಗೊರೆಯಾಗಿ ಕೊಟ್ಟಿದ್ದಾರೆ. ತಮ್ಮ ಆಪ್ತ ಸ್ನೇಹಿತರಿಗೆ, ನಿರ್ದೇಶಕರಿಗೆ, ನಟರಿಗೆ ಸುದೀಪ್ ಕಾರ್, ಜಾಕೆಟ್, ಕ್ರಿಕೆಟ್ ಬ್ಯಾಟ್, ವಾಚ್ ಮುಂತಾದ ವಸ್ತುಗಳನ್ನ ಗಿಫ್ಟ್ ನೀಡುತ್ತಲೇ ಇರುತ್ತಾರೆ.

# ಸು ಫ್ರಮ್ ಸೋ' ನಂತರ ಸಸ್ಪೆನ್ಸ್ ಥ್ರಿಲ್ಲರ್ ಸಿನಿಮಾ ನಿರ್ದೇಶನಕ್ಕೆ ರಾಜ್ ಬಿ ಶೆಟ್ಟಿ ಮುಂದು!

**ರಾಜ್ ಬಿ ಶೆಟ್ಟಿ ಅವರ ಲೈಟರ್ ಬುದ್ಧ ಫಿಲ್ಮ್ಸ್ ನಿರ್ಮಿಸಿದ 'ಸು ಫ್ರಮ್ ಸೋ' ಚಿತ್ರದ ಅದ್ಭುತ ಯಶಸ್ಸಿನ ನಂತರ, ನಟ ತಮ್ಮ ಮುಂದಿನ ಚಿತ್ರದ ನಿರ್ದೇಶನಕ್ಕೆ ಸಿದ್ಧತೆ ನಡೆಸುತ್ತಿದ್ದಾರೆ. ಈ ಬಾರಿ ಅವರು ಮೊದಲ ಬಾರಿಗೆ ಸಸ್ಪೆನ್ಸ್ ಥ್ರಿಲ್ಲರ್ ಚಿತ್ರವನ್ನು ನಿರ್ದೇಶಿಸಲಿದ್ದಾರೆ ಮತ್ತು ಇದು ಕನ್ನಡದಲ್ಲಿ ನಿರ್ಮಾಣವಾಗಲಿದೆ. ಸದ್ಯಕ್ಕೆ ರಾಜ್ ಬಿ ಶೆಟ್ಟಿ ಅವರು ಸಂಪೂರ್ಣವಾಗಿ ಬರವಣಿಗೆಯ ಪ್ರಕ್ರಿಯೆಗೆ ತಮ್ಮನ್ನು ತಾವು ಅರ್ಪಿಸಿಕೊಂಡಿದ್ದಾರೆ.**

ರಾಜ್ ಬಿ ಶೆಟ್ಟಿ ಅವರು 2026 ರ ಜನವರಿ ಅಥವಾ ಫೆಬ್ರುವರಿಯಲ್ಲಿ ಚಿತ್ರೀಕರಣ ಪ್ರಾರಂಭಿಸಲು ಯೋಜಿಸಿದ್ದಾರೆ ಎಂದು ಅವರ ಆಪ್ತ ಮೂಲಗಳು ತಿಳಿಸಿವೆ. ಚಿತ್ರದಲ್ಲಿ ತಾವು ಪ್ರಮುಖ ಪಾತ್ರದಲ್ಲಿ ನಟಿಸಲಿದ್ದರೂ, ಇತರ ಪ್ರಮುಖ ಪಾತ್ರಗಳನ್ನು ನಿರ್ವಹಿಸಲು ನಟರನ್ನು ಹುಡುಕುತ್ತಿದ್ದಾರೆ. ಒಂದು ಮೊಟ್ಟೆಯ ಕಥೆಯಿಂದ ಹಿಡಿದು ಗರುಡ ಗಮನ ವೃಷಭ ವಾಹನದವರೆಗೆ ಹಿಟ್ ಚಿತ್ರಗಳನ್ನು ನೀಡಿದ್ದಾರೆ.



ಹಾಗೆಯೇ ವಿಮರ್ಶಾತ್ಮಕವಾಗಿ ಮೆಚ್ಚುಗೆ ಪಡೆದ ಟೋಬಿ ಮತ್ತು ಸ್ವಾತಿ ಮುತ್ತಿನ ಮಳೆ ಹನಿಯೇ ಚಿತ್ರಗಳಿಗೆ ರಾಜ್ ಆಕ್ಷನ್ ಕಟ್ ಹೇಳಿದ್ದರು.

100 ಕೋಟಿ ರೂ.ಗು ಅಧಿಕ ಗಳಿಕೆ ಕಂಡ ಸು ಫ್ರಮ್ ಸೋ ಚಿತ್ರವು ವಿಮರ್ಶಾತ್ಮಕವಾಗಿ ಮತ್ತು ವಾಣಿಜ್ಯಿಕ ಯಶಸ್ಸನ್ನು ಗಳಿಸಿಕೊಟ್ಟಿತು. ಈಮಧ್ಯೆ, ಅವರು ಅರ್ಜುನ್ ಜನ್ಯ ನಿರ್ದೇಶನದ ಮತ್ತು ರಮೇಶ್ ರೆಡ್ಡಿ ನಿರ್ಮಿಸಿರುವ ಹೈ ಪ್ರೊಫೈಲ್ ಯೋಜನೆಯಾದ 45 ನಲ್ಲಿಯೂ ನಟಿಸಿದ್ದಾರೆ. ಚಿತ್ರದಲ್ಲಿ ಶಿವರಾಜ್‌ಕುಮಾರ್ ಮತ್ತು ಉಪೇಂದ್ರ ಅವರೊಂದಿಗೆ ಮೊದಲ ಬಾರಿಗೆ ಪರದೆ ಹಂಚಿಕೊಂಡಿಲಿದ್ದಾರೆ. ಹೆಚ್ಚುವರಿಯಾಗಿ, ಅವರು ಮತ್ತೊಂದು ಚಿತ್ರದಲ್ಲಿಯೂ ನಟಿಸುತ್ತಿದ್ದು, ಶೀಘ್ರದಲ್ಲೇ ಅಧಿಕೃತ ಘೋಷಣೆ ಹೊರಬೀಳುವ ಸಾಧ್ಯತೆಯಿದೆ.

# ಏಳುಮಲೆ' ಚಿತ್ರ ನೋಡಿದ ಕಿಚ್ಚ ಸುದೀಪ್

ಸದ್ಯ ಮಾರ್ಕ್ ಚಿತ್ರದ ಚಿತ್ರೀಕರಣದಲ್ಲಿ ನಿರತರಾಗಿರುವ ಮತ್ತು ರಿಯಾಲಿಟಿ ಶೋ ಬಿಗ್ ಬಾಸ್ ಕನ್ನಡ ಸೀಸನ್ 12ಕ್ಕೆ ಸಜ್ಜಾಗುತ್ತಿರುವ ನಟ ಕಿಚ್ಚ ಸುದೀಪ್, ಪುನೀತ್ ರಂಗಸ್ವಾಮಿ ಅವರ ಚೊಚ್ಚಲ ನಿರ್ದೇಶನದ ಎಳುಮಲೆ ಚಿತ್ರವನ್ನು ವೀಕ್ಷಿಸಿ, ಮೆಚ್ಚುಗೆ ಸೂಚಿಸಿದ್ದಾರೆ. ತರುಣ್ ಸುಧೀರ್ ಮತ್ತು ಅಟ್ಲಾಂಟಾ ನಾಗೇಂದ್ರ ನಿರ್ಮಿಸಿರುವ ಈ ಚಿತ್ರದಲ್ಲಿ ರಾಣಾ ಮತ್ತು ಹೊಸಬರಾದ ಪ್ರಿಯಾಂಕಾ ಆಚಾರ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

'ರಾಣಾ ತಾನು ನಿರ್ವಹಿಸಿರುವ ಹರೀಶ್ ಪಾತ್ರದಲ್ಲಿ ಸಂಪೂರ್ಣವಾಗಿ ಜೀವಿಸಿದ್ದಾರೆ ಮತ್ತು ದೋಷರಹಿತ ಅಭಿನಯ ನೀಡಿದ್ದಾರೆ. ಪ್ರಿಯಾಂಕಾ ಆಚಾರ್ ಕೂಡ ಚಿನ್ನಿ ಪಾತ್ರದಲ್ಲಿ ಸೂಕ್ಷ್ಮ ಮತ್ತು ಪ್ರಭಾವ ಬೀರುತ್ತಾರೆ' ಎಂದ ಅವರು, ನಿರ್ಮಾಪಕರಾಗಿರುವ ತರುಣ್ ಕಿಶೋರ್ ಸುಧೀರ್ ಅವರನ್ನು ಅಭಿನಂದಿಸಿದರು.

ರಾಣಾ ಮತ್ತು ಪ್ರಿಯಾಂಕಾ ಅವರಲ್ಲದೆ, ಚಿತ್ರದಲ್ಲಿ ಕಿಶೋರ್ ಮತ್ತು ಜಗಪತಿ ಬಾಬು ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ರಾಕೇಶ್ ಮೈಯಾ ಮತ್ತು ಜಗ್ಗಪ್ಪ ಸೇರಿದಂತೆ ಇತರರು ನಟಿಸಿದ್ದಾರೆ.





ಚಿತ್ರಕ್ಕೆ ಅದ್ವೈತ ಗುರುಮೂರ್ತಿ ಅವರ ಛಾಯಾಗ್ರಹಣವಿದೆ. ಸಕಾರಾತ್ಮಕ ಮಾತುಗಳು ಮತ್ತು ಉದ್ಯಮದ ಒಳಗಿನವರಿಂದ ಬಲವಾದ ಮೆಚ್ಚುಗೆಯೊಂದಿಗೆ,

'ಎಳುಮಲೆ' ಚಿತ್ರವು ಶೀಘ್ರದಲ್ಲೇ ತಮಿಳು ಮತ್ತು ತೆಲುಗಿನಲ್ಲಿ ಬಿಡುಗಡೆಯಾಗಲಿದೆ ಎಂದು ಚಿತ್ರತಂಡ ದೃಢಪಡಿಸಿದೆ. ಶೀಘ್ರದಲ್ಲೇ ಈ ಬಗ್ಗೆ ಹೆಚ್ಚಿನ ವಿವರಗಳನ್ನು ನಿರ್ಮಾಣ ಸಂಸ್ಥೆ ನೀಡಲಿದೆ.

# ವಿವಾದಗಳ ಬಳಿಕ ಮತ್ತೆ ಟ್ರ್ಯಾಕ್‌ಗೆ ಮರಳಿದ ಮಡೇನೂರು ಮನು

ವೈಯಕ್ತಿಕ ಜೀವನದ ಸಮಸ್ಯೆ ಸೇರಿದಂತೆ ವಿವಾದಗಳ ಸುಳಿಯಲ್ಲಿ ಸಿಲುಕಿದ್ದ ಕಾಮಿಡಿ ಕಿಲಾಡಿಗಳು ಖ್ಯಾತಿಯ ಮಡೇನೂರು ಮನು ಕೊನೆಗೂ ಟ್ರ್ಯಾಕ್‌ಗೆ ಮರಳಿದ್ದು, ತಮ್ಮ ಹುಟ್ಟುಹಬ್ಬದ ದಿನದಂದೇ ಎರಡು ಹೊಸ ಚಿತ್ರಗಳ ಘೋಷಣೆ ಮಾಡಿದ್ದಾರೆ. ಕೊನೆಯದಾಗಿ 'ಕುಲದಲ್ಲಿ ಕಿಲ್ಯಾವುದೋ' ಚಿತ್ರದಲ್ಲಿ ನಟಿಸಿದ್ದರು.

ಮನು ಅವರ ಮುಂದಿನ ಯೋಜನೆಯ ಶೀರ್ಷಿಕೆಯನ್ನು ಅನಾವರಣಗೊಳಿಸಿದ್ದು, 'ಮುತ್ತರಸ' ಎಂದು ಹೆಸರಿಡಲಾಗಿದೆ. ಮತ್ತೊಂದು ಚಿತ್ರದ 'ವಿಚಾರಣೆ'ಯ ಪೋಸ್ಟರ್ ಅನ್ನು ಸಹ ಬಿಡುಗಡೆ ಮಾಡಲಾಯಿತು.

ಮುತ್ತರಸ ಚಿತ್ರವನ್ನು ಜೆಕೆ ಮೂವೀಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಪಕ ಕೆಎಂ ನಟರಾಜ್ ನಿರ್ಮಿಸುತ್ತಿದ್ದಾರೆ. ಸಮಾರಂಭದಲ್ಲಿ ಖ್ಯಾತ ನಟ ವಸಿಷ್ಠ ಸಿಂಹ, ಹಿರಿಯರಾದ ಎಂಎಸ್ ಉಮೇಶ್ ಮತ್ತು ಕರಿ ಸುಬ್ಬು, ಕರ್ನಾಟಕ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್ ಭಾಗವಹಿಸಿದ್ದರು. ಅವರೆಲ್ಲರೂ ಮನುಗೆ ಶುಭ ಹಾರೈಸಿದರು.

ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಮಂಜಮ್ಮ ಜೋಗತಿ, 'ಪ್ರತಿಯೊಬ್ಬರೂ ಸಮಯವನ್ನು ಗೌರವಿಸಲು ಕಲಿಯಬೇಕು. ಎಲ್ಲರೊಳಗೆ ದೈವಿಕ ಉಪಸ್ಥಿತಿ ಇರುತ್ತದೆ ಎಂದ ಅವರು ಚಿತ್ರಕ್ಕೆ ಶುಭ ಕೋರಿದರು.




ವಿವಾದಗಳಿಂದ ದೂರವಿರುವಂತೆ ಸಲಹೆ ನೀಡಿದ ವಸಿಷ್ಠ ಸಿಂಹ, 'ನಾವು ವಿಮಾನ ಹತ್ತಿದಾಗ, ಅದು ನಮ್ಮದಾಗುವುದಿಲ್ಲ. ಯಾವುದೇ ಮಹತ್ವಾಕಾಂಕ್ಷೆಯನ್ನು ಬೆನ್ನಟ್ಟುವಾಗಲೂ ನಾವು ನೆಲದಲ್ಲಿಯೇ ಇರಬೇಕು ಎಂದು ಹೇಳಿದರು.

ಹೊಸ ಯೋಜನೆಯ ಚಿತ್ರೀಕರಣ ಮುಂದಿನ ತಿಂಗಳು ಪ್ರಾರಂಭವಾಗುವ ನಿರೀಕ್ಷೆಯಿದ್ದು, ನಿರ್ದೇಶಕರು ಮತ್ತು ಪಾತ್ರವರ್ಗ ಶೀಘ್ರದಲ್ಲೇ ಬಹಿರಂಗಗೊಳ್ಳಲಿದೆ.

ನಿರ್ಮಾಪಕ ನಟರಾಜ್ ಮಾತನಾಡಿ, 'ಮನು ನಾನು ಈ ಹಿಂದೆ ನಿರ್ಮಿಸಿದ ಚಿತ್ರದಲ್ಲಿ ನಟಿಸಿದ್ದರು. ಮುತ್ತರಸ ನಮ್ಮ ಎರಡನೇ ಸಹಯೋಗವಾಗಿದೆ ಮತ್ತು ಇಂದು ಶೀರ್ಷಿಕೆಯನ್ನು ಅನಾವರಣಗೊಳಿಸಲು ಒಟ್ಟಾಗಿ ಬಂದ ಎಲ್ಲ ಗಣ್ಯರಿಗೆ ನಾನು ಕೃತಜ್ಞನಾಗಿದ್ದೇನೆ' ಎಂದರು.

ವಿಚಾರಣೆ ಚಿತ್ರವು ಈ ವರ್ಷಾಂತ್ಯದಲ್ಲಿ ಬಿಡುಗಡೆಯಾಗುವ ಗುರಿಯನ್ನು ಹೊಂದಿದೆ ಎಂದು ಮನು ಹೇಳಿದರು.

# ಅನಿಮೇಷನ್ ಬ್ಲಾಕ್‌ಬಸ್ಟರ್ 'ಮಹಾವತಾರ ನರಸಿಂಹ' ಒಟಿಟಿಯಲ್ಲಿ ಬಿಡುಗಡೆ

**ಇತ್ತೀಚಿನ ಅನಿಮೇಷನ್ ಬ್ಲಾಕ್‌ಬಸ್ಟರ್ ಮಹಾವತಾರ ನರಸಿಂಹ ಚಿತ್ರವು ಒಟಿಟಿಯಲ್ಲಿ ಬಿಡುಗಡೆಯಾಗಿದೆ. ಸೆಪ್ಟೆಂಬರ್ 19ರ ಶುಕ್ರವಾರ ಮಧ್ಯಾಹ್ನ 12.30 ಚಿತ್ರವು ನೆಟ್‌ಫ್ಲಿಕ್ಸ್‌ನಲ್ಲಿ ಸ್ಟ್ರೀಮಿಂಗ್ ಆಗುತ್ತಿದೆ.**

**ಅಶ್ವಿನ್ ಕುಮಾರ್ ನಿರ್ದೇಶನದ ಮಹಾವತಾರ ನರಸಿಂಹ, ವಿಷ್ಣುವಿನ ಕಟ್ಟಾ ಭಕ್ತ ಮತ್ತು ಅವನ ತಂದೆ ಹಿರಣ್ಯಕಶಿಪುಂ- ಒಬ್ಬ ಪರಾಕ್ರಮಿ ರಾಜ ಮತ್ತು ಕಟ್ಟಾ ನಾಸ್ತಿಕನ ನಡುವಿನ ಕಥೆಯಾಗಿದೆ. ವಿಷ್ಣುವಿನ ಇರುವಿಕೆ ಬಗ್ಗೆ ತನ್ನ ಮಗನ ಅಚಲ ನಂಬಿಕೆಯಿಂದ ಕೋಪಗೊಂಡ ತಂದೆಯ ಕಥೆಯನ್ನು ಒಳಗೊಂಡಿದೆ.**

ಜುಲೈ 25 ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆಯಾದ ಈ ಚಿತ್ರವು, ಆರಂಭಿಕ ವಾರಾಂತ್ಯದಿಂದಲೇ ಗಲ್ಲಾಪೆಟ್ಟಿಗೆಯಲ್ಲಿ ಭರ್ಜರಿ ಕಲೆಕ್ಷನ್ ಮಾಡುವ ಮೂಲಕ ಎಲ್ಲರನ್ನೂ ಅಚ್ಚರಿಗೊಳಿಸಿತು. ದೇಶೀಯ ಬಾಕ್ಸ್ ಆಫೀಸ್‌ನಲ್ಲಿ ಅದ್ಭುತ ಯಶಸ್ಸಿನ ನಂತರ, ಈ ಚಿತ್ರವು ನಂತರ ವಿದೇಶಗಳಲ್ಲಿಯೂ



ಬಿಡುಗಡೆಯಾಯಿತು. ಆಗಸ್ಟ್‌ನಲ್ಲಿ, ಈ ಚಿತ್ರವು ವಿಶ್ವದಾದ್ಯಂತ ಬಾಕ್ಸ್ ಆಫೀಸ್‌ನಲ್ಲಿ 300 ಕೋಟಿ ರೂ.ಗೂ ಅಧಿಕ ಗಳಿಕೆ ಕಂಡಿತು. ಅನಿಮೇಷನ್ ಚಿತ್ರವೊಂದು ಅಧಿಕ ಗಳಿಕೆ ಕಂಡ ಚಿತ್ರವಾಯಿತು.

ಈ ಚಿತ್ರವನ್ನು ಹೊಂಬಾಳೆ ಫಿಲ್ಮ್ಸ್ ಪ್ರಸ್ತುತಪಡಿಸಿದ್ದು, ಕ್ಲೀಮ್ ಪ್ರೊಡಕ್ಷನ್ಸ್ ಬೆಂಬಲದೊಂದಿಗೆ ಶಿಲ್ಪಾ ಧವನ್, ಕುಶಾಲ್ ದೇಸಾಯಿ ಮತ್ತು ಚೈತನ್ಯ ದೇಸಾಯಿ ನಿರ್ಮಿಸಿದ್ದಾರೆ. ಈ ಚಿತ್ರವು ಸ್ಯಾಮ್ ಸಿಎಸ್ ಅವರ ಸಂಗೀತ ಸಂಯೋಜನೆ ಹೊಂದಿದ್ದು, ಚಿತ್ರಕಥೆಯನ್ನು ಜಯಪೂರ್ಣ ದಾಸ್ ಮತ್ತು ರುದ್ರ ಪ್ರತಾಪ್ ಘೋಷ್ ಬರೆದಿದ್ದಾರೆ

# 'ಶಿವ' ಚಿತ್ರ ನವೆಂಬರ್‌ನಲ್ಲಿ ರೀ-ರಿಲೀಸ್

ದಕ್ಷಿಣ ಭಾರತದ ಖ್ಯಾತ ನಟ ನಾಗಾರ್ಜುನ ಅವರು ತಮ್ಮ ಅಭಿನಯದ 1989ರ ಸಿನಿಮಾ 'ಶಿವ' ನವೆಂಬರ್ 14 ರಂದು ಚಿತ್ರಮಂದಿರಗಳಲ್ಲಿ ರೀ-ರಿಲೀಸ್ ಆಗಲಿದೆ ಎಂದು ಶನಿವಾರ ಹೇಳಿದ್ದಾರೆ.66 ವರ್ಷದ ನಟ ತಮ್ಮ ದಿವಂಗತ ತಂದೆ ಮತ್ತು ಜನಪ್ರಿಯ ಚಲನಚಿತ್ರ ನಿರ್ಮಾಪಕ ಅಕ್ಕಿನೇನಿ ನಾಗೇಶ್ವರ ರಾವ್ ಅವರ ಜನ್ಮದಿನದಂದು ಎಕ್ಸ್ ನಲ್ಲಿ ಈ ಘೋಷಣೆ ಮಾಡಿದ್ದಾರೆ.

ಈ ಚಿತ್ರವನ್ನು ರಾಮ್ ಗೋಪಾಲ್ ವರ್ಮಾ ನಿರ್ದೇಶಿಸಿದ್ದಾರೆ ಮತ್ತು ನಾಗಾರ್ಜುನ ಅವರಿಗೆ ಈ ಸಿನಿಮಾ ಒಂದು ಮಹತ್ವದ ತಿರುವು ನೀಡಿತು.ವ ಸಿನಿಮಾ ಬಿಡುಗಡೆಯ ಸಮಯದಲ್ಲಿ ಬಾಕ್ಸ್ ಆಫೀಸ್‌ನಲ್ಲಿ ಬ್ಲಾಕ್‌ಬಸ್ಟರ್ ಆಗಿ ಹೊರಹೊಮ್ಮಿದ್ದು, ಕೇವಲ 75 ಲಕ್ಷ ರೂ. ಬಜೆಟ್ ನಲ್ಲಿ ನಿರ್ಮಿಸಿದ ಈ ಸಿನಿಮಾ 4 ಕೋಟಿಗೂ ಹೆಚ್ಚು ಗಳಿಸಿತು."ನನ್ನ ಪ್ರೀತಿಯ ತಂದೆ ANR ಅವರ ಹುಟ್ಟುಹಬ್ಬದಂದು, ಭಾರತೀಯ ಚಿತ್ರರಂಗವನ್ನು ಬೆಚ್ಚಿಬೀಳಿಸಿದ ಚಿತ್ರ ಮತ್ತೆ ಚಿತ್ರಮಂದಿರಗಳನ್ನು ಬೆಚ್ಚಿಬೀಳಿಸಲು ಬರುತ್ತಿದೆ ಎಂದು ಘೋಷಿಸಲು ನನಗೆ ಸಂತೋಷವಾಗುತ್ತಿದೆ.

# ಓಂ ಪ್ರಕಾಶ್ ರಾವ್ ನಿರ್ದೇಶನದ 50ನೇ ಚಿತ್ರ 'ಗೆರಿಲ್ಲಾ ವಾರ್'

ಕನ್ನಡ ಚಿತ್ರರಂಗದ ರಿಯಲ್ ಸ್ಟಾರ್ ಉಪೇಂದ್ರ ಸದ್ಯ ನಾಗಣ್ಣ ನಿರ್ದೇಶನದ 'ಭಾರ್ಗವ' ಚಿತ್ರದ ಚಿತ್ರೀಕರಣದಲ್ಲಿ ಬ್ಯುಸಿಯಾಗಿದ್ದಾರೆ. ಈ ಬೆನ್ನಲ್ಲೇ ನಟ ತಮ್ಮ ಮುಂದಿನ ಚಿತ್ರ, ಹಿರಿಯ ನಿರ್ದೇಶಕ ಓಂ ಪ್ರಕಾಶ್ ರಾವ್ ಅವರೊಂದಿಗೆ ಹೈ-ವೋಲ್ಟೇಜ್ ಆಕ್ಷನ್ ಡ್ರಾಮಾಗೆ ಸಹಿ ಮಾಡಿದ್ದಾರೆ. 'ಗೆರಿಲ್ಲಾ ವಾರ್' ಎಂಬ ಶೀರ್ಷಿಕೆಯ ಈ ಚಿತ್ರದಲ್ಲಿ ಉಪೇಂದ್ರ ಯೋಧನಾಗಿ ಕಾಣಿಸಿಕೊಂಡಿದ್ದಾರೆ. ಅವರ ಹುಟ್ಟುಹಬ್ಬದ ಮುನ್ನಾದಿನ (ಸೆ. 18) ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆಯಾಗಿದ್ದು, ಕೈಯಲ್ಲಿ ರೈಫಲ್ ಹಿಡಿದು ಯುದ್ಧಕ್ಕೆ ಸಿದ್ಧರಾಗಿರುವುದನ್ನು ಕಾಣಬಹುದು.

'ಗೆರಿಲ್ಲಾ ವಾರ್ ನನ್ನ 50ನೇ ಚಿತ್ರವಾಗಿದೆ. ತ್ರಿಶೂಲಂ ನಂತರ ಉಪೇಂದ್ರ ಅವರೊಂದಿಗಿನ ನನ್ನ ಎರಡನೇ ಸಹಯೋಗ ಇದಾಗಿದ್ದು, ಇದು ಪೋಸ್ಟ್-ಪ್ರೊಡಕ್ಷನ್ ಹಂತದಲ್ಲಿದೆ ಮತ್ತು ಈ ವರ್ಷದ ಕೊನೆಯಲ್ಲಿ ಬಿಡುಗಡೆಯಾಗುವ ನಿರೀಕ್ಷೆಯಿದೆ' ಎಂದು ಓಂ ಪ್ರಕಾಶ್ ರಾವ್ ಹೇಳುತ್ತಾರೆ.

'ಲಾಕಪ್ ಡೆತ್, ಎಕೆ 47, ಕಲಾಸಿಪಾಳ್ಯ ಮತ್ತು ಹುಚ್ಚ ಮುಂತಾದ ಹಿಟ್ ಚಿತ್ರಗಳ ಮೂಲಕ ಮಾಸ್ ಸಿನಿಮಾ ಬ್ರ್ಯಾಂಡ್ ಅನ್ನು ನಿರ್ಮಿಸಿರುವ ಓಂ ಪ್ರಕಾಶ್ ರಾವ್, ಎಸ್ ರಾವ್ ಸಿನಿ ಕ್ರಿಯೇಷನ್ಸ್ ಅಡಿಯಲ್ಲಿ ಆರ್ ವಾಸುದೇವ ರೆಡ್ಡಿ ಅವರೊಂದಿಗೆ ಈ ಹೊಸ ಚಿತ್ರವನ್ನು ನಿರ್ದೇಶಿಸುತ್ತಿದ್ದಾರೆ ಮತ್ತು ಸಹ-ನಿರ್ಮಾಣ ಕೂಡ ಮಾಡುತ್ತಿದ್ದಾರೆ. 'ನಾನು ಪಾರ್ಥ, ಹುಬ್ಬಳ್ಳಿ, ಮಂಡ್ಯ ಮತ್ತು ಫೀನಿಕ್ಸ್ ನಂತಹ ಚಿತ್ರಗಳನ್ನು ನಿರ್ಮಿಸಿದ್ದೇನೆ. ಸ್ವಲ್ಪ ಸಮಯದ ನಂತರ, ನಾನು ಬಲವಾಗಿ ನಂಬುವ ಕಥೆಯೊಂದಿಗೆ ಹಿಂತಿರುಗಿದ್ದೇನೆ' ಎಂದು ಅವರು ಹೇಳುತ್ತಾರೆ.



ಡೆನ್ನಿಸಾ ಪ್ರಕಾಶ್ ಕಥೆ ಬರೆದಿದ್ದು, ಚಿತ್ರಕಥೆಯನ್ನು ರಾವ್ ಬರೆಯುತ್ತಿದ್ದಾರೆ. ರಿಲ್ಲಾ ವಾರ್ ಆಪರೇಷನ್ ಸಿಂಧೂರದಿಂದ ಸ್ಫೂರ್ತಿ ಪಡೆದಿದ್ದು, ಇದು ಚಿತ್ರದ ಹಿನ್ನೆಲೆಯಾಗಲಿದೆ. 'ಇದು ಕೇವಲ ಮಿಲಿಟರಿ ನಾಟಕ ಅಥವಾ ಆ ಘಟನೆಯ ಪುನರಾವರ್ತನೆಯಲ್ಲ' ಎಂದು ಓಂ ಪ್ರಕಾಶ್ ರಾವ್ ವಿವರಿಸುತ್ತಾರೆ. 'ನಾವೆಲ್ಲರೂ ಸಮಾಜದಲ್ಲಿ ವಿಚ್ಛಿದ್ರಕಾರಕ ಶಕ್ತಿಗಳನ್ನು ಎದುರಿಸುತ್ತೇವೆ. ಉಪೇಂದ್ರ ನಿರ್ವಹಿಸಿರುವ ಪಾತ್ರವು ಕೇವಲ ಗಡಿ ಕಾವಲುಗಾರನಲ್ಲ, ಪರಿಹರಿಸುವ ಚಿಂತನಶೀಲ ಯೋಧ. ಇದು ದೇಶಭಕ್ತಿಯ ಕಮರ್ಷಿಯಲ್ ಚಿತ್ರವಾಗಿದ್ದು, ಇದು ಅದ್ಭುತ ಮತ್ತು ಆತ್ಮದೊಂದಿಗೆ ಇರುತ್ತದೆ.

ಹಾಸನ: ಮನೆಯಲ್ಲಿ ನಿಗೂಢ ಸ್ಫೋಟ

# ಗಾಯಗೊಂಡಿದ್ದ ದಂಪತಿ ಸಾವು

**ಬೆಂಗಳೂರು:** ಹಾಸನ ಜಿಲ್ಲೆಯ ಆಲೂರು ತಾಲ್ಲೂಕಿನ ಮನೆಯೊಂದರಲ್ಲಿ ಸಂಭವಿಸಿದ ನಿಗೂಢ ಸ್ಫೋಟದಲ್ಲಿ ತೀವ್ರವಾಗಿ ಗಾಯಗೊಂಡು ಬೆಂಗಳೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ದಂಪತಿ ಸಾವಿಗೀಡಾಗಿದ್ದಾರೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ.

ಸುದರ್ಶನ್ (32) ಮತ್ತು ಕಾವ್ಯಾ (28) ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಹಾಸನ ಜಿಲ್ಲೆಯಿಂದ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಸ್ಥಳಾಂತರಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಿಸದೆ ಮಂಗಳವಾರ ತಡರಾತ್ರಿ ಅವರು ಸಾವಿಗೀಡಾಗಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಹಾಸನ ಜಿಲ್ಲೆಯ ಆಲೂರು ತಾಲ್ಲೂಕಿನಲ್ಲಿರುವ ಅವರ ಮನೆಯಲ್ಲಿ ಸೋಮವಾರ ರಾತ್ರಿ ಸ್ಫೋಟ ಸಂಭವಿಸಿತ್ತು.

ಆರಂಭದಲ್ಲಿ, ಇದು ಸಿಲಿಂಡರ್ ಸ್ಫೋಟವಾಗಿರಬಹುದು ಎಂದು ಶಂಕಿಸಲಾಗಿತ್ತು. ಆದರೆ, ಸ್ಫೋಟಕ್ಕೆ ನಿಖರವಾದ ಕಾರಣವನ್ನು ಪೊಲೀಸರು ಇನ್ನೂ ಖಚಿತಪಡಿಸಿಲ್ಲ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಸೆಪ್ಟೆಂಬರ್ 29 ರಂದು, ಮೋಹನ್ ಕುಮಾರ್ ಎಂಬುವವರು ತಮ್ಮ ಮನೆಯಲ್ಲಿ ಸ್ಫೋಟ ಸಂಭವಿಸಿದ ಕುರಿತು ದೂರು ನೀಡಿದ ಆಧಾರದ ಮೇಲೆ ಆಲೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿತ್ತು.

# ಸರಕಾರಗಳು ಮಾಡದ ಕೆಲಸಗಳನ್ನು ನಮ್ಮ ಮಠ–ಮಾನ್ಯಗಳು ಮಾಡುತ್ತಿವೆ ಅವುಗಳಲ್ಲಿ ಹಿರೇಕಲ್ಮಠವು ಅಗ್ರ ಗಣ್ಯ ಸ್ಥಾನದಲ್ಲಿದೆ : ಶೀಲಾ ಗದ್ದಿಗೇಶ್

**ಹೊನ್ನಾಳಿ :** ಸರಕಾರಗಳು ಮಾಡದ ಕೆಲಸಗಳನ್ನು ನಮ್ಮ ಮಠ–ಮಾನ್ಯಗಳು ಮಾಡುತ್ತಿವೆ ಅವುಗಳಲ್ಲಿ ಹಿರೇಕಲ್ಮಠವು ಅಗ್ರ ಗಣ್ಯ ಸ್ಥಾನದಲ್ಲಿದೆ ಎಂದು ಜಿಪಂ ಮಾಜಿ ಅಧ್ಯಕ್ಷೆ ಶೀಲಾ ಗದ್ದಿಗೇಶ್ ತಿಳಿಸಿದರು.

ಪಟ್ಟಣದ ಹಿರೇಕಲ್ಮಠದಲ್ಲಿ ಬುಧವಾರ 10ನೇ ದಿನದ ದಸರಾ ಮತ್ತು ಶರನ್ನವರಾತ್ರಿ ಮಹೋತ್ಸವದ ಧರ್ಮಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಲಿಂ.ಶ್ರೀಗಳವರು ನಡೆದ ದಾರಿಯಲ್ಲೇ ಈಗಿನ ಶ್ರೀಗಳು ಅಕ್ಷರ, ಅನ್ನದಾಸೋಹದ ಜೊತೆಗೆ ಧಾರ್ಮಿಕವಾಗಿ, ಸಾಂಸ್ಕೃತಿಕವಾಗಿಯೂ ಈ ಭಾಗದ ಭಕ್ತರಿಗೆ ಸೇವೆ ನೀಡುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಶ್ರೀಮಠಕ್ಕೆ ಸಹಕಾರ ನೀಡಬೇಕಾಗಿ ಅವರು ಮನವಿ ಮಾಡಿದರು.

ನ್ಯಾಯಾಲಯಗಳಲ್ಲಿ ಬಗೆಹರಿಯದ ಎಷ್ಟೋ ಪ್ರಕರಣಗಳು ಹಿರೇಕಲ್ಮಠದಲ್ಲಿ ಬಗೆಹರಿಸುವ ಮೂಲಕ ನ್ಯಾಯಪೀಠವಾಗಿಯೂ ಕರ್ತವ್ಯ ನಿರ್ವಹಿಸಿದ ಕೀರ್ತಿ ಶ್ರೀಮಠಕ್ಕೆ ಸಲ್ಲುತ್ತದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಚನ್ನಕಿರಣ ಪ್ರಶಸ್ತಿಗೆ ಭಾಜನರಾದ ಹಿರೇಕಲ್ಮಠದ ಪ್ರಧಾನ ಧರ್ಮ ಕಾರ್ಯಕರ್ತರಾದ ಎಚ್.ಎಂ. ಅನ್ನದಾನಯ್ಯ ಶಾಸ್ತ್ರಿ ಮಾತನಾಡಿ ತಾವು 1973ರಲ್ಲಿ ಲಿಂ.ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿಗಳ ಪೂರ್ವಾಶ್ರಮದ ಸಹೋದರ ವಿಶ್ವನಾಥ್ ಅವರು ತಮ್ಮನ್ನು ಶ್ರೀಮಠಕ್ಕೆ ಕರೆದುಕೊಂಡು ಬಂದಿದ್ದು, ಅಂದಿನಿಂದ ಇಲ್ಲಿಯವರೆಗೂ ಸುದೀರ್ಘ 53 ವರ್ಷಗಳ ಕಾಲ ಶ್ರೀಮಠದಲ್ಲಿ ಧಾರ್ಮಿಕ ಸೇವೆ ಸಲ್ಲಿಸಲು ಅವಕಾಶ ಒದಗಿ ಬಂದದ್ದು ತಮ್ಮ ಪೂರ್ವ ಜನ್ಮದ ಪುಣ್ಯವೆಂದರು.



ಮತ್ತೊಬ್ಬ ಚನ್ನಕಿರಣ ಪ್ರಶಸ್ತಿ ಭೂಷಿತ ಚನ್ನಚೇತನ ಬೋರ್‌ವೆಲ್ ಏಜೆನ್ಸಿಯ ಮಾಲೀಕರಾದ ಕಡದಕಟ್ಟೆ ಗ್ರಾಪಂ ಮಾಜಿ ಸದಸ್ಯ ದಾನಪ್ಪ ಮಾತನಾಡಿ ಹಿರೇಕಲ್ಮಠದ ಕರ್ತೃತ್ವ ಶಕ್ತಿಯು ಶ್ರೀಮಠಕ್ಕೆ ಶ್ರದ್ಧಾ–ಭಕ್ತಿಯಿಂದ ನಡೆದುಕೊಳ್ಳುವವರನ್ನು ಕೈ ಬಿಡದೇ,ಹಿರೇಕಲ್ಮಠವು ಅನೇಕ ಪವಾಡಗಳ ಮೂಲಕ ತಮ್ಮ ಭಕ್ತಾದಿಗಳಿಗೆ ಆರೋಗ್ಯ, ಐಶ್ವರ್ಯ, ಸ್ಥಾನ–ಮನಗಳನ್ನು ನೀಡಿದೆ ಎಂದು ಕೊಂಡಾಡಿದರು.

ಪ್ರತೀ ವರ್ಷದಂತೆ ಹಿರೇಕಲ್ಮಠಕ್ಕೆ ಶ್ರದ್ಧಾ–ಭಕ್ತಿಯಿಂದ ಧಾರ್ಮಿಕವಾಗಿ, ಸಾಮಾಜಿಕವಾಗಿ ಗಣನೀಯ ಸೇವೆ ಸಲ್ಲಿಸಿರುವ ಹಿರೇಕಲ್ಮಠದ ಪ್ರಧಾನ ಧರ್ಮ ಕಾರ್ಯಕರ್ತರಾದ ಎಚ್.ಎಂ.ಅನ್ನದಾನಯ್ಯ ಶಾಸ್ತ್ರಿ, ಪಟ್ಟಣದ ಖ್ಯಾತ ವರ್ತಕರಾದ ಕೆ.ಜಿ.ರುದ್ರಪ್ಪ, ಚನ್ನಚೇತನ ಬೋರ್‌ವೆಲ್ ಏಜೆನ್ಸಿ ಮಾಲೀಕ ಕಡದಕಟ್ಟೆ ಮೀನಾಕ್ಷಮ್ಮ ದಾನಪ್ಪ ಇವರುಗಳ ಕುಟುಂಬ ಸಮೇತವಾಗಿ ಹಿರೇಕಲ್ಮಠದವತಿಯಿಂದ ಡಾ.ಒಡೆಯರ್ ಚನ್ನಮಲ್ಲಿಕಾರ್ಜುನ ಶ್ರೀಗಳವರು ಮತ್ತು ವೇದಿಕೆಯಲ್ಲಿದ್ದ ಗಣ್ಯರು ಚನ್ನಕಿರಣ ಪ್ರಶಸ್ತಿ ನೀಡಿ ಗೌರವಿಸಿದರು. ಪ್ರಶಸ್ತಿಯ ಜೊತೆಗೆ ಬಿಳಿ ಸಮವಸ್ತ್ರ ಹಾಗೂ ಚಿನ್ನದ ಉಂಗುರವನ್ನು ಉಡುಗೊರೆಯಾಗಿ ನೀಡಲಾಯ್ತು.

ಜಕ್ಕಲಿ–ಬಿದರಗಡ್ಡೆ–ಹಾರ್ನಹಳ್ಳಿ ಮಠದ ವಿಶ್ವಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಅಧ್ಯಕ್ಷತೆ ವಹಿಸಿ ಆರ್ಶೀವಚನ ನೀಡಿದರು. ಒಡೆಯರ್ ಡಾ.ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಸಭೆಯ ಸಾನಿಧ್ಯ ವಹಿಸಿದ್ದರು.

ಮಂಜುನಾಥ ದೇವರು ಶ್ರೀ ದೇವಿ ಪುರಾಣ ಪ್ರವಚನ ನಡೆಸಿಕೊಟ್ಟರು. ಕೆ.ಆರ್.ಮ್ಯೂಸಿಕಲ್ ತಂಡದವರ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.ಮಠದ ಸೇವಾಕರ್ತರಿಗೆ ಗುರು ರಕ್ಷೆ ನೀಡಿ ಸನ್ಮಾನಿಸಲಾಯ್ತು.

ಚನ್ನಪ್ಪ ಸ್ವಾಮಿ ವಿದ್ಯಾಪೀಠದ ಕಾರ್ಯದರ್ಶಿ ಚನ್ನಯ್ಯ ಬೆನ್ನೂರು ಮಠ, ನಿರ್ದೇಶಕರಾದ ಕೋರಿ ಮಲ್ಲಿಕಾರ್ಜುನಪ್ಪ, ಎಚ್.ಆರ್.ಬಸವರಾಜಪ್ಪ, ಮಠದ ವ್ಯವಸ್ಥಾಪಕ ಎಂ.ಪಿ.ಎಂ.ಚನ್ನಬಸಯ್ಯ, ಪುರಸಭೆಯ ಸ್ಥಾಯಿ ಸಮಿತಿ ಅಧ್ಯಕ್ಷ ಹೊಸಕೇರಿ ಸುರೇಶ್, ಭಕ್ತ ವೃಂದದ ಕೋರಿ ಗುರುಲಿಂಗಣ್ಣ, ಮುಖ್ಯಮಂತ್ರಿಗಳ ಪದವಿ ಪುರಸ್ಕೃತ ಗೃಹ ರಕ್ಷಕ ದಳದ ಮುಖ್ಯಸ್ಥ ಕೆ.ನಾಗರಾಜಪ್ಪ, ಕುಂಬಾರ್ ಸುರೇಶ್, ಎಚ್.ಎಂ.ರುದ್ರೇಶ್ ಮತ್ತಿತರರು ಉಪಸ್ಥಿತರಿದ್ದರು.

# ಅ.10 ರಂದು ನಗರದಲ್ಲಿ ಕಲಾ ಪ್ರತಿಭೋತ್ಸವ

**ಚಿಕ್ಕಮಗಳೂರು, ಅ.2:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮಕ್ಕಳು ಮತ್ತು ಯುವಜನರ ಕಲಾ ಪ್ರತಿಭೆಯನ್ನು ಗುರುತಿಸಿ ಅವರಿಗೆ ಉತ್ತೇಜನ ನೀಡುವ ಸಲುವಾಗಿ ಹಾಗೂ ಅವರ ಕಲಾನೈಪುಣ್ಯವನ್ನು ವೃದ್ಧಿಗೊಳಿಸುವಂತೆ ಮಾಡಲು ಕಲಾ ಪ್ರತಿಭೋತ್ಸವವನ್ನು ನಗರದ ಕುವೆಂಪು ಕಲಾಮಂದಿರದಲ್ಲಿ ಜಿಲ್ಲಾ ಮಟ್ಟದ ಕಲಾ ಪ್ರತಿಭೋತ್ಸವವನ್ನು ಆಯೋಜಿಸಲಾಗಿದೆ.

ಈ ಸ್ಪರ್ಧೆಯನ್ನು ವಯಸ್ಸಿಗೆ ಅನುಗುಣವಾಗಿ ಬಾಲಪ್ರತಿಭೆ, ಕಿಶೋರ ಪ್ರತಿಭೆ ಹಾಗೂ ಯುವ ಪ್ರತಿಭೆ ಎಂಬ ಮೂರು ವಿಭಾಗಗಳಲ್ಲಿ ನಡೆಸಲಾಗುತ್ತಿದ್ದು, ಭಾಗವಹಿಸುವವರು ಬಿಳಿ ಹಾಳೆಯಲ್ಲಿ ತಾವು ಸ್ಪರ್ಧಿಸುವ ಪ್ರಕಾರ ಹಾಗೂ ಜನ್ಮ ದಿನಾಂಕಕ್ಕೆ ಸಂಬಂಧಿಸಿದ ದಾಖಲೆಯನ್ನು ಲಗತ್ತಿಸಿ ಅಕ್ಟೋಬರ್ 10ರ ಸಂಜೆ 5.30ರೊಳಗೆ ತಲುಪುವಂತೆ ಖುದ್ದಾಗಿ ಆಗಲಿ, ಅಂಚೆ ಮೂಲಕವಾಗಿ ಆಗಲಿ ಕಳುಹಿಸಬೇಕು. ಬಾಲ ಪ್ರತಿಭೆ ವಿಭಾಗದಲ್ಲಿ ಶಾಸ್ತ್ರೀಯ ನೃತ್ಯ, ಜನಪದ ಗೀತೆ, ಚಿತ್ರಕಲೆ, ಕರ್ನಾಟಕ/ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ ಹಾಗೂ ಸುಗಮ ಸಂಗೀತ ಪ್ರಕಾರಗಳಿದ್ದು, ಕಿಶೋರ ಪ್ರತಿಭೆಯಲ್ಲಿ ಚಿತ್ರಕಲೆ, ಕರ್ನಾಟಕ/ ಹಿಂದೂಸ್ತಾನಿ ಸಂಗೀತ, ಶಾಸ್ತ್ರೀಯ ನೃತ್ಯ, ಜನಪದ ಗೀತೆ, ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ ಹಾಗೂ ಸುಗಮ ಸಂಗೀತ ಪ್ರಕಾರಗಳಿವೆ. ಯುವ ಪ್ರತಿಭೆ ವಿಭಾಗದಲ್ಲಿ ಚಿತ್ರಕಲೆ, ಕರ್ನಾಟಕ/ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ನನ್ನ ಮೆಚ್ಚಿನ ಸಾಹಿತಿ ಆಶುಭಾಷಣ, ಶಾಸ್ತ್ರೀಯ ನೃತ್ಯ, ನಾಟಕ (ಸಮೂಹ ಸ್ಪರ್ಧೆ), ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ ಹಾಗೂ ಸುಗಮ ಸಂಗೀತ ಪ್ರಕಾರಗಳಿವೆ.


# ಮಹಾತ್ಮಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರುಗಳು ತಂದು ಕೊಟ್ಟ ಸ್ವಾತಂತ್ರ್ಯದಿಂದ ದೇಶದಲ್ಲಿ ಜನರು ಬದುಕುತ್ತಿದ್ದಾರೆ: ಡಾ.ಅಂಶುಮಂತ್

**ಚಿಕ್ಕಮಗಳೂರು :** ರಾಷ್ಟ್ರಪಿತ ಮಹಾತ್ಮಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರುಗಳು ದೇಶಕ್ಕೆ ತಂದು ಕೊಟ್ಟ ಸ್ವಾತಂತ್ರ್ಯದಿಂದ ಇಂದು ದೇಶದಲ್ಲಿ ಸರ್ವಧರ್ಮ, ಶಾಂತಿ, ಸೌಹಾರ್ದತೆಯಿಂದ ಜನರು ಬದುಕುತ್ತಿದ್ದಾರೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಭದ್ರಾ ಕಾಡಾ ನಿಗಮದ ಅಧ್ಯಕ್ಷರೂ ಆದ ಡಾ.ಕೆ.ಪಿ.ಅಂಶುಮಂತ್ ಹೇಳಿದರು.

ಅವರು ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಚಿಕ್ಕಮಗಳೂರು ಬ್ಲಾಕ್ ಕಾಂಗ್ರೆಸ್ ಮತ್ತು ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಆಯೋಜಿಸಿದ್ದ ರಾಷ್ಟ್ರಪಿತ ಮಹಾತ್ಮಗಾಂಧಿಯವರ 156 ನೇ ಹಾಗೂ ಮಾಜಿ ಪ್ರಧಾನಮಂತ್ರಿ ಲಾಲ್‌ಬಹದ್ದೂರ್ ಶಾಸ್ತ್ರಿಯವರ 121 ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಹಾತ್ಮಗಾಂಧೀಜಿಯವರ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿಯವರು ಹಾಕಿಕೊಟ್ಟಿರುವ ಮಾರ್ಗದರ್ಶನದಲ್ಲೇ ಪ್ರತಿಯೊಬ್ಬರೂ ಸಾಗಬೇಕು. ಅವರ ಆದರ್ಶ ಮೌಲ್ಯಗಳು ಎಂದಿಗೂ ಅಳಿಯಲಾರವು ಎಂದು ತಿಳಿಸಿದರು.

ಎಐಸಿಸಿ ಕಾರ್ಯದರ್ಶಿ ಬಿ.ಎಂ.ಸಂದೀಪ್ ಮಾತನಾಡಿ, ಮಹಾತ್ಮಗಾಂಧೀಜಿಯವರು ಭಾರತಕ್ಕೆ ಮಾತ್ರ ನಾಯಕರಲ್ಲ ಬದಲಾಗಿ ಇಡೀ ವಿಶ್ವಕ್ಕೆ ನಾಯಕರಾಗಿದ್ದಾರೆ. ಗಾಂಧೀಜಿಯವರ ಹತ್ಯೆ ನಂತರ ಭಾರತ ದೇಶ ಸೇರಿದಂತೆ ಇಡೀ ವಿಶ್ವವೇ ತಮ್ಮ ರಾಷ್ಟ್ರಧ್ವಜವನ್ನು ಅರ್ಧಕ್ಕೆ ಹಾರಿಸುವ ಮೂಲಕ ಅವರಿಗೆ ಗೌರವವನ್ನು ಸೂಚಿಸಿವೆ ಎಂದರು.




ಭಾರತ ದೇಶಕ್ಕೆ ದೊಡ್ಡ ಇತಿಹಾಸವೇ ಇದೆ. ಮಹಾತ್ಮಗಾಂಧಿ ಅವರು ಸತ್ಯ, ಅಹಿಂಸೆ, ಸತ್ಯಾಗ್ರಹ ಮೂಲಕ ದೇಶದಿಂದ ಬ್ರಿಟಿಷರನ್ನು ಹೊಡಿಸಲು ಸಹಕಾರಿಯಾಗಿದೆ. ಈ ದೇಶದಲ್ಲಿ ಯಾವುದೇ ರಕ್ತಪಾತವಾಗದೆ, ಹಿಂಸೆ ಆಗದೆ, ಸ್ವಾತಂತ್ರ್ಯ ಪಡೆದ ಏಕೈಕ ದೇಶವೆಂದರೆ ನಮ್ಮ ಭಾರತ ದೇಶ ಎಂದು ಹೇಳಿದರು.

ಬಿಜೆಪಿಯವರಿಗೆ ಮಹಾತ್ಮಗಾಂಧಿ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಅವರ ಮೇಲೆ ಗೌರವವಿದ್ದರೆ, ನಾಗಪುರದ ಆರ್‌ಎಸ್‌ಎಸ್ ಮುಖ್ಯ ಶಾಖೆಯಲ್ಲಿ ಮಹಾತ್ಮಗಾಂಧಿ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರವನ್ನು ಇಡುವಂತೆ ಒತ್ತಾಯಿಸಿದರು.

ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷ ಎಂ.ಎಲ್. ಮೂರ್ತಿ ಮಾತನಾಡಿ, ಮಹಾತ್ಮಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರ ಆದರ್ಶ ಮೌಲ್ಯಗಳು ಇಂದಿಗೂ ಎಲ್ಲರಿಗೂ ದಾರಿದೀಪವಾಗಿದೆ. ಬಿಜೆಪಿಯವರು ಗಾಂಧಿಯವರನ್ನು ದೂಷಿಸಿ, ನಾಥೂರಾಂ ಗೊಡ್ಸೆ ಅವರನ್ನು ವೈಭವಿಕರಿಸುವುದು ಸರಿಯಾದ ಸಿದ್ಧಾಂತವಲ್ಲ ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ ಉಪಾಧ್ಯಕ್ಷರಾದ ಕೆ.ಮಹಮದ್ ಮಾತನಾಡಿದರು. ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಮಹಾತ್ಮಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಸಾಮೂಹಿಕವಾಗಿ ಪುಷ್ಪನಮನ ಸಲ್ಲಿಸಿದರು.

ಈ ಸಂದಭದಲ್ಲಿ ಜಿಲ್ಲಾ ಕಾಂಗ್ರೆಸ್ ನಿಕಟಪೂರ್ವ ಅಧ್ಯಕ್ಷ ಡಾ.ಡಿ.ಎಲ್.ವಿಜಯಕುಮಾರ್, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಂ.ಸಿ.ಶಿವಾನಂದಸ್ವಾಮಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಪಿ.ಮಂಜೇಗೌಡ, ನಗರ ಕಾಂಗ್ರೆಸ್ ಅಧ್ಯಕ್ಷ ತನೋಜ್ ಕುಮಾರ್, ನಗರಸಭೆ ಸದಸ್ಯ ಪರಮೇಶ್ ರಾಜ್ ಅರಸ್, ಸಿಡಿಎ ಸದಸ್ಯ ಶೃದೀಪ್, ಮುಖಂಡರಾದ ಹಿರೇಮಗಳೂರು ರಾಮಚಂದ್ರ, ಜೇಮ್ಸ್ ಡಿಸೋಜಾ, ಸುರೇಶ್ ಕುಮಾರ್, ಲಕ್ಷ್ಮಣ್ ಹುಣಸೇಮಕ್ಕಿ, ನಾಗೇಶ್, ಕೆ.ಭರತ್ ಉಪ್ಪಳ್ಳಿ, ಪ್ರಕಾಶ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಮನೆಮದ್ದು ಕಾರ್ಯಾಗಾರ ಯಶಸ್ವಿ

# ನಮ್ಮ ಆಹಾರ ಪದ್ಧತಿಯಲ್ಲೇ ಚಿಕಿತ್ಸೆ : ಡಾ.ಚಂದ್ರಶೇಖರ್




**ಚಿಕ್ಕಮಗಳೂರು:** ನಮ್ಮ ಆಹಾರ ಪದ್ಧತಿಯಲ್ಲೆ ಬಹುತೇಕ ಕಾಯಿಲೆಗಳನ್ನು ದೂರವಾಗಿಸಿಕೊಳ್ಳ ಬಹುದೆಂದು ಆಯುರ್ವೇದ ತಜ್ಞ ಮೈಸೂರಿನ ಡಾ.ಚಂದ್ರಶೇಖರ್ ನುಡಿದರು.

ಅಕ್ಕಮಹಾದೇವಿ ಮಹಿಳಾ ಸಂಘ ಆಯೋಜಿಸಿದ್ದ 'ಮನೆಮದ್ದು' ಕಾರ್ಯಾಗಾರದಲ್ಲಿ ಅವರು ಕಲ್ಯಾಣ ನಗರದ ಬಸವಮಂದಿರದಲ್ಲಿ ವಿಶೇಷ ಉಪನ್ಯಾಸ ನೀಡಿ ಸಂವಾದಿಸಿದರು.

ಭಾರತೀಯ ಆಹಾರ ಪದ್ಧತಿಯಲ್ಲಿ ವೈಜ್ಞಾನಿಕ ಹಾಗೂ ವೈಚಾರಿಕ ಸಂಗತಿಗಳು ಯಥೇಚ್ಛವಾಗಿವೆ. ಮನೆಯಂಗಳದಲ್ಲಿ ಬೆಳೆಯುವ ಎಲೆ, ಹೂ, ಹಣ್ಣು, ಗೆಡ್ಡೆ, ಗೆಣಸು, ಕಾಯಿ, ಕಾಂಡವನ್ನು ಬಳಸಿಕೊಂಡು ನಮ್ಮನ್ನು ಕಾಡುವ ಅನೇಕ ದೈಹಿಕ ಮತ್ತು ಮಾನಸಿಕ ಆರೋಗ್ಯ ಸಮಸ್ಯೆಗಳಿಂದ ಪಾರಾಗಬಹುದು ಎಂದರು.

ಪಡಸಾಲೆಯಲ್ಲಿರುವ ಸಸ್ಯ ಜನ್ಯದಿಂದ ರಕ್ತದೊತ್ತಡ, ಸಕ್ಕರೆಕಾಯಿಲೆ ಸೇರಿದಂತೆ ಅನೇಕ ದೀರ್ಘಕಾಲೀನ ಸಮಸ್ಯೆಗಳಿಂದಲೂ ಮುಕ್ತಿ ಪಡೆಯಬಹುದು. ನಮ್ಮ ಹಿರಿಯರು ಆರೋಗ್ಯ ಕಾಳಜಿಯನ್ನು ಹೊಂದಿದ್ದು, ನಿರಂತರವಾಗಿ ಸೇವಿಸುವ ಆಹಾರದಲ್ಲೆ ಅನೇಕ ಕಾಯಿಲೆಗಳಿಗೆ ಪರಿಹಾರ ಕಂಡುಕೊಂಡಿದ್ದರು ಎಂದ ಡಾ. ಚಂದ್ರಶೇಖರ್. ಆಯುರ್ವೇದ ಶಾಸ್ತ್ರದಲ್ಲಿ ಒಂದೇ ವಸ್ತುವಿನಿಂದ ವಿವಿಧ ಕಾಯಿಲೆಗಳನ್ನು ದೂರಮಾಡಬಹುದು.

ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ನೇರ ನೇಮಕಾತಿ

# ಅಭ್ಯರ್ಥಿ ಗರಿಷ್ಠ ವಯೋಮಿತಿಯಲ್ಲಿ ಒಮ್ಮೆ ಅನ್ವಯವಾಗುವಂತೆ 3 ವರ್ಷ ಸಡಿಲಿಕೆ

**ಚಿಕ್ಕಮಗಳೂರು :** ರಾಜ್ಯ ಸರ್ಕಾರದ ಎಲ್ಲಾ ನಾಗರಿಕ ಸೇವಾ ಹುದ್ದೆಗಳ ನೇಮಕಾತಿಯಲ್ಲಿ ಎಲ್ಲ ಪ್ರವರ್ಗಗಳ ಅಭ್ಯರ್ಥಿಗಳಿಗೆ ಮೂರು ವರ್ಷಗಳ ವಯೋಮಿತಿ ಸಡಿಲಿಕೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಹಲವಾರು ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳು ಸಲ್ಲಿಸಿದ ಮನವಿ ಪರಿಗಣಿಸಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರ ಅನುಮೋದನೆಯೊಂದಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಆದೇಶ ಪ್ರಕಟಿಸಿದೆ.

ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಜಾರಿಯಾಗುವವರೆಗೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಅಥವಾ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ಮುಂದಿನ ಆದೇಶದವರೆವಿಗೂ ಹೊರಡಿಸಬಾರದೆಂದು ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿತ್ತು.

ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ಆಯೋಗದ ವರದಿಯನ್ನು ಅಗತ್ಯ ಮಾರ್ಪಾಡುಗಳೊಂದಿಗೆ ಅಂಗೀಕರಿಸಿ, ಪರಿಶಿಷ್ಟ ಜಾತಿಯಲ್ಲಿರುವ 101 ಜಾತಿಗಳನ್ನು 5 ಪ್ರವರ್ಗಗಳ ಬದಲಾಗಿ ಪ್ರವರ್ಗ–ಎ, ಪ್ರವರ್ಗ–ಬಿ ಮತ್ತು ಪ್ರವರ್ಗ–ಸಿ ಎಂದು 3 ಪ್ರವರ್ಗಗಳಾಗಿ ವರ್ಗೀಕರಿಸಿ, ಶಿಕ್ಷಣ ಮತ್ತು ಉದ್ಯೋಗದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಶೇ.17 ರಷ್ಟು ಮೀಸಲಾತಿಯನ್ನು ಪ್ರವರ್ಗ–ಎ.ರಲ್ಲಿನ ಸಮುದಾಯಗಳಿಗೆ ಶೇ.6 ರಷ್ಟು, ಪ್ರವರ್ಗ–ಬಿ ರಲ್ಲಿನ ಸಮುದಾಯಗಳಿಗೆ ಶೇ.6 ರಷ್ಟು ಮತ್ತು ಪ್ರವರ್ಗ – ಸಿ.ರಲ್ಲಿನ ಸಮುದಾಯಗಳಿಗೆ ಶೇ.5 ರಷ್ಟು ನಿಗದಿಪಡಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಲಾಗಿದೆ.

ಈ ಹಿಂದೆ ನೇರ ನೇಮಕಾತಿ ಪ್ರಕ್ರಿಯೆಯಲ್ಲಿ ಆಯ್ಕೆ ಬಯಸಿ ಅರ್ಜಿಗಳನ್ನು ಸಲ್ಲಿಸಿ ಭಾಗವಹಿಸುವ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಗೆ ಕ್ರಮವಾಗಿ 2 ವರ್ಷಗಳ ಸಡಿಲಿಕೆ ನೀಡಲು ತೀರ್ಮಾನಿಸಲಾಗಿತ್ತು.

ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳ ಅನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ 2 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿತ್ತು.

ಆದರೆ ಹಲವಾರು ಜನಪ್ರತಿನಿಧಿಗಳು ಮತ್ತು ಸಂಘ ಸಂಸ್ಥೆಗಳಿಂದ ಮನವಿ ಸಲ್ಲಿಸಿ ರಾಜ್ಯ ಸಿವಿಲ್ ಸೇವೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆ ನೀಡುವಂತೆ ಕೋರಲಾಗಿತ್ತು.

ಈ ಮನವಿಗಳನ್ನು ಸರ್ಕಾರವು ಪರಿಶೀಲಿಸಿ ಒಂದು ಬಾರಿಗೆ ಮಾತ್ರ ವಯೋಮಿತಿಯಲ್ಲಿ 3 ವರ್ಷಗಳ ಸಡಿಲಿಕೆ ನೀಡಲು ತೀರ್ಮಾನಿಸಿ, ದಿನಾಂಕ: 06.09.2025ರ ಆದೇಶ ಹಿಂಪಡೆದು, ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ 31–12–2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ 3 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಸೇವಾ ನಿಯಮಗಳು) ಆದೇಶ ಹೊರಡಿಸಿದೆ.

# ಹಿಂದೂಗಳ ಮೇಲಿನ ದೌರ್ಜನ್ಯ ತಡೆಗೆ ಆರ್ಥಿಕ ಪಾರಮ್ಯವೇ ಅಸ್ತ್ರ

## ಹಿಂದೂ ಸುರಕ್ಷಾ ಸಮಿತಿ ಪ್ರತಿಭಟನಾ ಸಭೆಯಲ್ಲಿ ವಾಗ್ಮಿ ಆದರ್ಶ ಗೋಖಲೆ

**ದಾವಣಗೆರೆ:** ಹಿಂದೂಗಳ ಮೇಲೆ ನಡೆಯುತ್ತಿ ರುವ ದಾಳಿಗಳನ್ನು ತಡೆಯಲು ಆರ್ಥಿಕ ಪಾರಮ್ಯವೇ ಪ್ರಮುಖ ಅಸ್ತ್ರ ಎಂದು ಕಾರ್ಕಳದ ಉಪನ್ಯಾಸಕ, ಅಂಕಣಕಾರ ಆದರ್ಶ ಗೋಕಲೆ ಪ್ರತಿಪಾದಿಸಿದರು.

ಹಿಂದೂ ಸುರಕ್ಷಾ ಸಮಿತಿ ವತಿಯಿಂದ ಭಾನುವಾರ ಸಂಜೆ ಇಲ್ಲಿನ ಮಟ್ಟಿಕಲ್ ಬಳಿ ಏರ್ಪಡಿಸಿದ್ದ ಪ್ರತಿಭಟನಾ ಸಭೆಯಲ್ಲಿ ಅವರು ಮಾತನಾಡಿದರು.

ಹಿಂದೂಗಳು ಹಿಂದೂ ವಿರೋಧಿಗಳ ಜೊತೆಗಿನ ವ್ಯವಹಾರ ಕಡಿಮೆ ಮಾಡಿದರೆ ಶೇ.75ರಷ್ಟು ಸಮಸ್ಯೆಗಳು ಪರಿಹಾರ ಆಗಲಿವೆ. ಈ ಹಿನ್ನೆಲೆಯಲ್ಲಿ ಹಿಂದೂಗಳ ಜೊತೆಗೆ ಮಾತ್ರ ವ್ಯವಹಾರ ಮಾಡಿ. ನಮ್ಮ ಹಣ ನಮ್ಮ ಜೊತೆಗೆ ಹರಿದಾಡಲಿ ಎಂದು ಕರೆ ನೀಡಿದರು.



'ಭಾರತ ಪಾಕಿಸ್ತಾನದ ಜೊತೆಗಿನ ಆರ್ಥಿಕ ವ್ಯವಹಾರ ಸ್ಥಗಿತಗೊಳಿಸಿದಂತೆ, ನಾವೂ ಕೂಡ ಆರ್ಥಿಕ ದಿಗ್ಬಂಧನ ಹೇರಲು ಏಕೆ ಸಾಧ್ಯವಿಲ್ಲ?" ಎಂದು ಪ್ರಶ್ನಿಸಿದ ಅವರು, 'ಎಂ'ಗಳ ಜೊತೆಗೆ ಆರ್ಥಿಕ ವ್ಯವಹಾರ ನಿಲ್ಲಿಸಿ. ಆಟೊ, ಶಾಲೆ, ಹೂ, ಹಣ್ಣು ಖರೀದಿ ಸೇರಿದಂತೆ ಎಲ್ಲ ವ್ಯವಹಾರಗಳು 'ನಮ್ಮವರೊಂದಿಗೆ'ಯೇ ನಡೆಯಲಿ ಎಂದು ಹೇಳಿದರು.ಕಾಶ್ಮೀರದಲ್ಲಿ ಹಿಂದೂಗಳ ಆಕ್ರಂದನ ಮುಗಿಲು ಮುಟ್ಟಿತ್ತು. ಬಂಗಾಳದಲ್ಲಿ ದುರ್ಗಾ ಪೂಜೆ ಮಾಡಲು ಅನುಮತಿ ಇಲ್ಲ. ಇದೇ ಪರಿಸ್ಥಿತಿ ದಾವಣಗೆರೆ ಜನರಿಗೂ ಬರಬಹುದು. ಹಿಂದೂಗಳ ಹಬ್ಬಗಳನ್ನು ಶಾಶ್ವತವಾಗಿ ಬಂದ್ ಮಾಡುವ ಹುನ್ನಾರ ನಡೆಯುತ್ತಿದೆ ಎಂದು ಆರೋಪಿಸಿದರು.

ಚಾಮುಂಡಿ ಬೆಟ್ಟದ ದಸರಾ ಉದ್ಘಾಟನೆಯನ್ನು ಮುಸ್ಲಿಂ ಮಹಿಳೆ ಮೂಲಕ ಮಾಡಿಸಿರುವುದು ಹಿಂದೂ ಭಾವನೆಗಳನ್ನು ಕೆಣಕುವ ಪ್ರಯತ್ನ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಶಿವಾಜಿ ಅವರು ಅಫಜಲ್ ಖಾನ್ ಹತ್ಯೆ ಮಾಡಿರುವುದು ನಿಜ. ಇದು ಇತಿಹಾಸದಲ್ಲಿ ದಾಖಲಾಗಿದೆ. ಈ ಫ್ಲೆಕ್ಸ್ ತೆಗೆದು ಹಾಕಿದರೂ ಮನಸ್ಸಿನಲ್ಲಿರುವ ಶಿವಾಜಿ ಸಾಹಸವನ್ನು ತೆಗೆದು ಹಾಕಲು ಸಾಧ್ಯವಿಲ್ಲ. ಹಿಂದೂ ಸಮಾಜ ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಅವರು ಹೇಳಿದರು.

ಬೇರೆ ಬೇರೆ ಧರ್ಮದವರಿಗೆ ವಿಶ್ವದಲ್ಲಿ ಹಲವು ರಾಷ್ಟ್ರಗಳಿವೆ. ಆದರೆ, ಹಿಂದೂಗಳಿಗೆ ಇರುವುದು ಇದೊಂದೇ ರಾಷ್ಟ್ರ. ಇದನ್ನು ಉಳಿಸಿಕೊಳ್ಳಲು ಜಾಗೃತಿ ಮುಖ್ಯ. ದೌರ್ಜನ್ಯ ಕೊನೆಗೊಳಿಸಲು ಯೋಗಿ ಮಾದರಿ ಸರ್ಕಾರ ಅಗತ್ಯ ಎಂದು ಪ್ರತಿಪಾದಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಎನ್. ರಾಜಶೇಖರ್ ಮಾತನಾಡುತ್ತಾ, ಕೇವಲ ಮೂರು ದಿನಗಳ ಹಿಂದೆ ದಲಿತರ ಮನೆ ಮೇಲೆ ಗೂಂಡಾಗಳು ದಾಳಿ ನಡೆಸಿದ್ದಾರೆ. ಕುಟುಂಬ ಸದಸ್ಯರನ್ನು ಹೊರಗೆ ಎಳೆದು ಹೊಡೆದಿದ್ದಾರೆ. ಮಹಿಳೆಯ ತಲೆಗೆ ಗಾಯವಾಗಿದೆ. ಆದರೆ, ಜಿಲ್ಲಾಡಳಿತ ಏನೂ ಆಗಿಲ್ಲ ಎಂಬಂತೆ ಹೇಳುತ್ತಿದೆ ಎಂದು ಆರೋಪಿಸಿದರು.

ಇದೊಂದು ಸಣ್ಣ ಘಟನೆಯಾಗಿದ್ದರೆ ನಾವು ಇಷ್ಟು ದೊಡ್ಡ ಪ್ರತಿಭಟನೆ ಮಾಡುತ್ತಿರಲಿಲ್ಲ. ಇದರ ಹಿಂದಿನ ಷಡ್ಯಂತ್ರವನ್ನು ಅರ್ಥ ಮಾಡಿಕೊಳ್ಳಬೇಕು ಎಂದರು. ಧರ್ಮದ ಪರವಾಗಿ ಹೋರಾಟ ಮಾಡುವ ಸತೀಶ್ ಪೂಜಾರಿ ಅವರನ್ನು ಗಡಿಪಾರು ಮಾಡಲು ಮುಂದಾಗಿದ್ದಾರೆ. ಇದೇ ಉತ್ಸುಕತೆಯನ್ನು ಕಬೀರ್ ಖಾನ್ ವಿರುದ್ಧ ಏಕೆ ತೆಗೆದುಕೊಳ್ಳಲಿಲ್ಲ? ಎಂದು ಆಕ್ರೋಶ ವ್ಯಕ್ತಪಡಿಸಿದರು.

ಒಳಮೀಸಲಾತಿ ವರ್ಗೀಕರಣದಲ್ಲಿ ವಂಚನೆ

# ಕೊರಚ, ಕೊರಮ, ಭೋವಿ, ಲಂಬಾಣಿ ಸಮುದಾಯಗಳಿಂದ ಬೃಹತ್ ಪ್ರತಿಭಟನೆ

**ಚಿತ್ರದುರ್ಗ:** ಕೊರಚ, ಕೊರಮ, ಭೋವಿ, ಲಂಬಾಣಿ ಸಮುದಾಯಗಳಿಗೆ ಒಳಮೀಸಲಾತಿ ವರ್ಗೀಕರಣದಲ್ಲಿ ವಂಚನೆಯಾಗಿದೆ ಎಂದು ಆರೋಪಿಸಿ ಅಖಿಲ ಕರ್ನಾಟಕ ಮೀಸಲಾತಿ ಸಂರಕ್ಷಣಾ ಜಿಲ್ಲಾ ಒಕ್ಕೂಟದಿಂದ ಸೋಮವಾರ ಬೃಹತ್ ಪ್ರತಿಭಟನೆ ನಡೆಯಿತು.

ಮದಕರಿಪುರ ಲಂಬಾಣಿಹಟ್ಟಿಯಿಂದ ಚಿತ್ರದುರ್ಗದ ಒನಕೆ ಓಬವ್ವ ವೃತ್ತದವರೆಗೆ ಪಾದಯಾತ್ರೆಯಲ್ಲಿ ಆಗಮಿಸಿದ ಪ್ರತಿಭಟನಾಕಾರರು, ರಾಜ್ಯ ಸರ್ಕಾರ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಶಿಕ್ಷಣ, ಉದ್ಯೋಗ, ಆರ್ಥಿಕ, ಸಾಮಾಜಿಕ ಸ್ಥಿತಿಗತಿಯ ಅಂಕಿ–ಅಂಶಗಳು ದಮನಿತ ಸಮುದಾಯಗಳ ಅನುಮಾನಕ್ಕೂ ಕಾರಣವಾಗಿದೆ ಎಂದು ದೂರಿದರು.

ನ್ಯಾ.ನಾಗಮೋಹನ್ ದಾಸ್ ಆಯೋಗ ಒತ್ತಡಕ್ಕೆ ಮಣಿದು ಆತುರಾತುರವಾಗಿ ಸರ್ಕಾರಕ್ಕೆ ವರದಿ ಸಲ್ಲಿಸಿ ಮೋಸ ಮಾಡಿದೆ. ಆಯೋಗದ ವರದಿಯನ್ವಯ ಸರ್ಕಾರದ ಕೆಲ ಇಲಾಖೆಗಳು ಎಸ್ಸಿ ಸಮುದಾಯಗಳ ಅಂಕಿ–ಅಂಶ ನೀಡಿಲ್ಲ. ಕೆಲ ಕುಟುಂಬಗಳು ನಗರ ಹಾಗೂ ಗ್ರಾಮೀಣ ಭಾಗಗಳಲ್ಲಿ ಅಲಭ್ಯತೆಯ ಕಾರಣಕ್ಕೆ ಸಮೀಕ್ಷೆ ಅಪೂರ್ಣವಾಗಿದೆ. ಹೀಗಿರುವಾಗ ಸಣ್ಣ–ಪುಟ್ಟ ಬದಲಾವಣೆಯೊಂದಿಗೆ ಸರ್ಕಾರ ಜಾರಿಗೊಳಿಸಿರುವುದು ಸರಿಯಲ್ಲ ಎಂದು ದೂರಿದರು. ನ್ಯಾ.ಸದಾಶಿವ, ನಾಗಮೋಹನ್ ದಾಸ್ ಹಾಗೂ ಮಾಧುಸ್ವಾಮಿ ಆಯೋಗದ ವರದಿಯನ್ವಯ ಅಲೆಮಾರಿ ಸಮುದಾಯಗಳಿಗೆ ಪ್ರತ್ಯೇಕ ಮೀಸಲಾತಿ ಕಲ್ಪಿಸಿರುವುದಾಗಿ ಮುಖ್ಯಮಂತ್ರಿ ಹೇಳಿದ್ದಾರೆ. ಆದರೆ, ಈ ಸಮುದಾಯವನ್ನು ಯಾವ ದೃಷ್ಟಿಕೋನದಿಂದಲೂ ಹೊಂದಾಣಿಕೆ ಆಗದ ಬಂಜಾರ, ಭೋವಿ, ಕೊರಚ, ಕೊರಮ ಸಮುದಾಯದ 'ಸಿ' ವರ್ಗದವರೊಂದಿಗೆ ಸೇರಿಸಿ ಅಲೆಮಾರಿಗಳಿಗೆ ಮೀಸಲಾತಿಯಿಂದ ವಂಚಿಸಿರುವುದು ವಿಪರ್ಯಾಸ. ಆಯೋಗಗಳ ವರದಿ ಪ್ರಕಾರ ಅಲೆಮಾರಿಗಳಿಗೆ ಶೇ. 1ರಷ್ಟು ಮೀಸಲಾತಿ ನೀಡಬೇಕು ಎಂದು ಆಗ್ರಹಿಸಿದರು.



ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹೆಚ್ಚಿಸಿ 'ಸಿ' ವರ್ಗದ ನಮ್ಮ ಸಮುದಾಯಗಳಿಗೂ ಶೇ. 6ರಷ್ಟು ಮೀಸಲಾತಿ ನಿಗದಿಗೊಳಿಸಲು ಮುಂದಾಗಬೇಕು. ಔದ್ಯೋಗಿಕವಾಗಿ ಅತಿ ಹೆಚ್ಚು ಉದ್ಯೋಗ ಸೃಷ್ಟಿಯಾಗುತ್ತಿರುವ ಖಾಸಗಿ ವಲಯದಲ್ಲೂ ಮೀಸಲಾತಿ ಕಲ್ಪಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸ್ಪೃಶ್ಯ, ಅಸ್ಪೃಶ್ಯ ಎಂಬ ಅಸಂವಿಧಾನಿಕ ಪದ ಬಳಕೆಯನ್ನು ಕಡತದಿಂದ ತೆಗೆದುಹಾಕಿ, ದಮನಿತ ಅಥವಾ ವಿಮುಕ್ತ ಜಾತಿಗಳೆಂದು ಹೆಸರಿಸಬೇಕು. ಅಪೂರ್ಣ ಮಾಹಿತಿ ಹೊಂದಿರುವ ನಾಗಮೋಹನ್ ದಾಸ್ ವರದಿ ತಿರಸ್ಕರಿಸಿ, ಕೇಂದ್ರ ಸರ್ಕಾರ ನಡೆಸುವ ಜಾತಿ ಗಣತಿವರೆಗೂ ಒಳ ಮೀಸಲಾತಿ ವರ್ಗೀಕರಣ ಆದೇಶವನ್ನು ರಾಜ್ಯ ಸರ್ಕಾರ ತಡೆಹಿಡಿಯಬೇಕು. ಬೇಡ ಜಂಗಮರನ್ನು ಎಸ್ಸಿ ಪಟ್ಟಿಯಿಂದ ತೆಗೆಯಬೇಕು ಎಂದು ಸಿಎಂಗೆ ಕೋರಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**